Volume : 9 | Issue : 129 | August : 02 : 2026 : Sunday
ಸಂಪುಟ : 9 | ಸಂಚಿಕೆ : 129 | ಆಗಸ್ಟ್ : 02 : 2026 : ಭಾನುವಾರ

www.VIKRAMAVAHINI.com

— ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ —



# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ || VIKRAMA VAHINI



ವಿಧಾನಸೌಧದಲ್ಲಿ ಮೊದಲ ಬಾರಿಗೆ 'ಸ್ವಾತಂತ್ರೋತ್ಸವ' | ಪುಟ 2

ಪುಟ 4 | ಭಾರತದ ಪ್ರಗತಿ ಕರ್ನಾಟಕದ ಜತೆ ಜತೆಯಲ್ಲೇ ಆಗಬೇಕು: ಡಿ.ಕೆ.ಶಿ

# ಅಯೋಧ್ಯೆ ವೈದ್ಯಕೀಯ ಕಾಲೇಜಿನಲ್ಲಿ ಬಾಂಬ್ ದಾಖಲೆ ಪತ್ತೆ

**ಅಯೋಧ್ಯೆಯ ರಾಜರ್ಷಿ ದಶರಥ್ ಸ್ವಾಯತ್ತ ವೈದ್ಯಕೀಯ ಕಾಲೇಜಿನಲ್ಲಿ ಬಾಂಬ್ ತಯಾರಿಕೆ ಕುರಿತ ಕೈಬರಹದ ದಾಖಲೆ ಪತ್ತೆಯಾಗಿದ್ದು, ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಯೊಬ್ಬನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಪ್ರಕರಣದ ಎಲ್ಲ ಆಯಾಮಗಳಲ್ಲಿ ತನಿಖೆ ಮುಂದುವರಿದಿದ್ದು, ಕಾಲೇಜಿನ ಭದ್ರತೆಯನ್ನು ಬಿಗಿಗೊಳಿಸಲಾಗಿದೆ.**

● ವಿಕ್ರಮ ವಾಹಿನಿ | ನವದೆಹಲಿ

ಉತ್ತರ ಪ್ರದೇಶದ ಅಯೋಧ್ಯೆಯ ರಾಜರ್ಷಿ ದಶರಥ್ ಸ್ವಾಯತ್ತ ವೈದ್ಯಕೀಯ ಕಾಲೇಜಿನಲ್ಲಿ ಬಾಂಬ್ ತಯಾರಿಸುವ ವಿಧಾನಕ್ಕೆ ಸಂಬಂಧಿಸಿದ ಕೈಬರಹದ ದಾಖಲೆ ಪತ್ತೆಯಾಗಿರುವ ಘಟನೆ ಆತಂಕಕ್ಕೆ ಕಾರಣವಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾರ್ಥಿಯೊಬ್ಬನನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದು, ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿದಿದೆ.

ಕಾಲೇಜಿನ ಎಕ್ಸ್–ರೇ ವಿಭಾಗದಲ್ಲಿ ಕರ್ತವ್ಯದಲ್ಲಿದ್ದ ವೇಳೆ ಈ ದಾಖಲೆ ಪತ್ತೆಯಾಗಿದ್ದು, ವಿಭಾಗದ ಸಿಬ್ಬಂದಿ ತಕ್ಷಣವೇ ಕಾಲೇಜು ಆಡಳಿತದ ಗಮನಕ್ಕೆ ತಂದಿದ್ದಾರೆ. ಬಳಿಕ ಆಡಳಿತ ಪೊಲೀಸರಿಗೆ ಮಾಹಿತಿ ನೀಡಿದ್ದು, ಸ್ಥಳಕ್ಕೆ ಭೇಟಿ ನೀಡಿದ ಅಧಿಕಾರಿಗಳು ದಾಖಲೆಗಳನ್ನು ವಶಕ್ಕೆ ಪಡೆದು ತನಿಖೆ ಆರಂಭಿಸಿದ್ದಾರೆ.

ಪ್ರಾಥಮಿಕ ತನಿಖೆಯಲ್ಲಿ ಉತ್ತರ ಪ್ರದೇಶದ ಬಲರಾಂಪುರ ಮೂಲದ ಪ್ರಥಮ ವರ್ಷದ ವಿದ್ಯಾರ್ಥಿ ಸರ್ಫರಾಜ್ ಈ ದಾಖಲೆಯನ್ನು ಬರೆದಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಈ ಹಿನ್ನೆಲೆಯಲ್ಲಿ ಆತನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದ್ದು, ಘಟನೆಯ ವೇಳೆ ಆತನೊಂದಿಗೆ ಕರ್ತವ್ಯದಲ್ಲಿದ್ದ ಇನ್ನಿಬ್ಬರು ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಂದಲೂ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಪತ್ತೆಯಾದ ಕೈಬರಹದ ದಾಖಲೆಯಲ್ಲಿ ಗೇಜ್ ವೈರ್, ಅಮೋನಿಯಂ ಕಾರ್ಬೋನೇಟ್, ಕೆಂಪು ರಂಜಕ, ಕೆಂಪು ಸಲ್ಫೈಡ್, ನೈಟ್ರಿಕ್ ಆಮ್ಲ ಸೇರಿದಂತೆ ಸ್ಫೋಟಕ ತಯಾರಿಕೆಗೆ ಬಳಸಬಹುದಾದ ಕೆಲವು ವಸ್ತುಗಳ ಹೆಸರುಗಳು ಉಲ್ಲೇಖವಾಗಿವೆ.

ಆದರೆ ಈ ದಾಖಲೆ ಯಾವುದೇ ಉಗ್ರ ಚಟುವಟಿಕೆ ಅಥವಾ ಅಪರಾಧ ಕೃತ್ಯಕ್ಕೆ ಸಂಬಂಧಿಸಿದೆ ಎಂಬುದನ್ನು ಈವರೆಗೆ ಪೊಲೀಸರು ದೃಢಪಡಿಸಿಲ್ಲ. ಎಲ್ಲಾ ಸಾಧ್ಯತೆಗಳನ್ನೂ ಪರಿಶೀಲಿಸಿ ತನಿಖೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಾಲೇಜಿನ ಮುಖ್ಯ ವೈದ್ಯಕೀಯ ಅಧೀಕ್ಷಕ ಡಾ. ಅರವಿಂದ್ ಸಿಂಗ್ ಮಾತನಾಡಿ, ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಯುತ್ತಿದ್ದು, ವರದಿ ಬಂದ ಬಳಿಕ ಕಾನೂನು ಪ್ರಕಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ಇದೇ ವೇಳೆ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಕಾಲೇಜು ಆವರಣದ ಭದ್ರತಾ ವ್ಯವಸ್ಥೆಯನ್ನು ಮರುಪರಿಶೀಲಿಸಲು ಆಡಳಿತ ಆದೇಶಿಸಿದೆ.

ಇತ್ತೀಚಿನ ವರ್ಷಗಳಲ್ಲಿ ಶಿಕ್ಷಣ ಸಂಸ್ಥೆಗಳ ಭದ್ರತೆ ಕುರಿತ ಆತಂಕಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಈ ಘಟನೆಗೆ ಪೊಲೀಸರು ಗಂಭೀರವಾಗಿ ಸ್ಪಂದಿಸಿದ್ದು, ದಾಖಲೆ ಪತ್ತೆಯ ಹಿಂದಿನ ಉದ್ದೇಶವೇನು ಎಂಬುದನ್ನು ಪತ್ತೆಹಚ್ಚಲು ತನಿಖೆಯನ್ನು ಮತ್ತಷ್ಟು ತೀವ್ರಗೊಳಿಸಿದ್ದಾರೆ.

# 'ವಿವೇಕ ಸ್ಮಾರಕವು ಸಾಧಕರು ಮತ್ತು ಶ್ರದ್ಧಾಳುಗಳ ಕೇಂದ್ರ ಆಗಲಿ'

**ಮೈಸೂರಿನ ಶ್ರೀ ರಾಮಕೃಷ್ಣ ಮಠದಲ್ಲಿ ನಿರ್ಮಿಸಲಾದ ವಿವೇಕ ಸ್ಮಾರಕವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿ, ಸ್ವಾಮಿ ವಿವೇಕಾನಂದರ ತತ್ವಗಳು ಯುವಜನತೆಗೆ ಪ್ರೇರಣೆಯಾಗಲಿ ಎಂದು ಕರೆ ನೀಡಿದರು. ಭಾರತದ ಅಭಿವೃದ್ಧಿಯಲ್ಲಿ ಯುವಶಕ್ತಿಯ ಪಾತ್ರವನ್ನು ಶ್ಲಾಘಿಸಿದ ಅವರು, ಶಿಕ್ಷಣ, ಸ್ಟಾರ್ಟಪ್, ಡಿಜಿಟಲ್ ತಂತ್ರಜ್ಞಾನ ಹಾಗೂ ಆತ್ಮನಿರ್ಭರ ಭಾರತದ ಸಾಧನೆಗಳನ್ನು ಉಲ್ಲೇಖಿಸಿದರು.**

● ವಿಕ್ರಮ ವಾಹಿನಿ | ಮೈಸೂರು

ಮೈಸೂರು ಪ್ರಮುಖ ಸಾಂಸ್ಕೃತಿಕ ಕೇಂದ್ರ ಎಂದು ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿಜೀ ಅವರು ತಿಳಿಸಿದರು. ವಿವೇಕ ಸ್ಮಾರಕವು ಸಾಧಕರು ಮತ್ತು ಶ್ರದ್ಧಾಳುಗಳ ಕೇಂದ್ರ ಆಗಲಿ ಎಂದು ಆಶಿಸಿದರು.

ಶ್ರೀ ರಾಮಕೃಷ್ಣ ಮಠದಿಂದ ನಿರ್ಮಿಸಿದ ವಿವೇಕ ಸ್ಮಾರಕವನ್ನು ಇಂದು ಉದ್ಘಾಟಿಸಿದ ಬಳಿಕ ಅವರು ಕಾರ್ಯಕ್ರಮದಲ್ಲಿ ಮಾತನಾಡಿದರು. 7 ಸಂಪುಟಗಳ ರಾಮಾಯಣ, ಬದುಕು ಬೆಳಕು ಪುಸ್ತಕಗಳನ್ನು ಅವರು ಇದೇವೇಳೆ ಬಿಡುಗಡೆ ಮಾಡಿದರು. ರಾಮಕೃಷ್ಣ ಮಠ ಮತ್ತು ರಾಮಕೃಷ್ಣ ಮಿಷನ್‌ನ ಸ್ವಾಮೀಜಿಗಳು ಸಂತರು, ಗುರುಬಂಧುಗಳನ್ನು ಭೇಟಿ ಮಾಡುವ ಅವಕಾಶ ಮತ್ತೆ ನನಗಿಂದು ಲಭಿಸಿದೆ ಎಂದು ತಿಳಿಸಿದರು.

ದಸರಾ, ಸಂಗೀತ–ಸಾಹಿತ್ಯ ಸೇರಿ ಅನೇಕ ಪ್ರಮುಖ ಕ್ಷೇತ್ರಗಳಲ್ಲಿ ಕೊಡುಗೆಗಳನ್ನು ಈ ನಗರ ನೀಡಿದೆ ಎಂದು ತಿಳಿಸಿದರು. ರಾಮಕೃಷ್ಣ ಆಶ್ರಮವೂ ಇಲ್ಲಿನ ಸಮೃದ್ಧತೆಯ ಭಾಗ ಎಂದು ಮೆಚ್ಚುಗೆ ಸೂಚಿಸಿದರು. ರಾಷ್ಟ್ರಕವಿ ಕುವೆಂಪು ಅವರು ಮೈಸೂರಿನಲ್ಲಿದ್ದಾಗ ಅವರು ಈ ಆಶ್ರಮದಲ್ಲಿದ್ದರು ಎಂದು ನೆನಪಿಸಿದರು.

ಸಾಧನೆಯೆಡೆ ಸಾಗುವಾಗ ತಪಸ್ಸು ಅನಿವಾರ್ಯ ಎಂದ ಅವರು, ಸ್ವಾಮಿ ವಿವೇಕಾನಂದರ ಜೀವನದಲ್ಲಿ ಮೈಸೂರಿನ ಯೋಗದಾನವು ದೊಡ್ಡದು ಎಂದರು. ಇಲ್ಲಿಗೆ ಆಗಮಿಸಿದ್ದ ಅವರು ಆಗ ಪ್ರಸಿದ್ಧರಾಗಿರಲಿಲ್ಲ. ಸ್ವಾಮಿ ವಿವೇಕಾನಂದರು ಅಮೆರಿಕದಿಂದ ಇಲ್ಲಿನ ಮಹಾರಾಜರಿಗೆ ಪತ್ರವನ್ನೂ ಬರೆದಿದ್ದರು ಎಂದರು.

ಪರೋಪಕಾರದ ಮಹತ್ವವನ್ನು ಅವರು ತಿಳಿಸಿದ್ದರು.



ರಾಮಕೃಷ್ಣ ಆಶ್ರಮವು 100 ವರ್ಷ ಪೂರೈಸಿದೆ. ವಿವೇಕ ಸ್ಮಾರಕವು ಸಾಧಕರು ಮತ್ತು ಶ್ರದ್ಧಾಳುಗಳ ಕೇಂದ್ರ ಆಗಲಿ ಎಂದು ಆಶಿಸಿದರು. ಭಾರತದ ಯುವಜನತೆ ಇದೀಗ ವಿಶ್ವದಲ್ಲಿ ಪ್ರಮುಖ ಸ್ಥಾನವನ್ನು ಪಡೆದಿದ್ದಾರೆ ಎಂದು ತಿಳಿಸಿದರು. ವಿದ್ಯಾರ್ಥಿಗಳು, ಯುವಜನರ ಹರ್ಷೋದ್ಗಾರಗಳ ನಡುವೆ ಮಾತನಾಡಿದ ಅವರು, ಎಲ್ಲರಿಗೂ ನನ್ನ ನಮಸ್ಕಾರಗಳು ಎಂದು ಕನ್ನಡದಲ್ಲೇ ತಿಳಿಸಿದರು. ಚಾಮುಂಡೇಶ್ವರಿ ದೇವಿಗೆ ಪ್ರಣಾಮ ಸಲ್ಲಿಸಿ ಭಾಷಣ ಆರಂಭಿಸಿದರು. ನನ್ನ ಸಾಧನೆಯಲ್ಲಿ ರಾಮಕೃಷ್ಣ ಮಿಷನ್‌ನ ಕೊಡುಗೆ ದೊಡ್ಡದು ಎಂದರು. ಯುವಜನರಿಗೆ ಸರಿಯಾದ ದಾರಿ ತೋರಿಸುವಲ್ಲಿ ಶಿಕ್ಷಣ ಸಂಸ್ಥೆಗಳ ಕೊಡುಗೆ ಪ್ರಮುಖವಾದುದು ಎಂದ ಅವರು, ಶಿಕ್ಷಣ ಕ್ಷೇತ್ರಕ್ಕೆ ತಮ್ಮ ಸರಕಾರ ನೀಡಿದ ಕೊಡುಗೆಯನ್ನು ಉಲ್ಲೇಖಿಸಿದರು. ಶಿಕ್ಷಣ ಕ್ಷೇತ್ರದ ಮೂಲಸೌಕರ್ಯವನ್ನು ಆಧುನೀಕರಣ ಮಾಡಲಾಗುತ್ತಿದೆ ಎಂದು ವಿವರಿಸಿದರು. ಅಟಲ್ ಟಿಂಕರಿಂಗ್ ಲ್ಯಾಬ್‌ಗಳ ಸ್ಥಾಪನೆಯ ಮಾಹಿತಿ ಕೊಟ್ಟರು. ಮಾತೃಭಾಷೆಯಲ್ಲೇ ಮೆಡಿಕಲ್– ಎಂಜಿನಿಯರಿಂಗ್ ಶಿಕ್ಷಣ ಕೊಡಲಾಗುತ್ತಿದೆ. ಕ್ರೀಡಾ ಕ್ಷೇತ್ರಕ್ಕೂ ಉತ್ತೇಜನ ಕೊಡಲಾಗಿದೆ ಎಂದ ಅವರು, ಖೇಲೋ ಇಂಡಿಯ ಮೂಲಕ ಯುವಜನರಿಗೆ ವೇದಿಕೆ ಕಲ್ಪಿಸಿದ್ದನ್ನು ವಿವರಿಸಿದರು. ರಾಜ್ಯವು ಕನ್ನಡ ಭಾಷೆಯಲ್ಲಿ ಮಹಾನ್ ಲೇಖಕರ ಮತ್ತು ಸಾಹಿತಿಗಳನ್ನು ನೀಡಿದೆ ಎಂದರು. ಪ್ರಧಾನಿಯವರು ವಿದ್ಯಾರ್ಥಿಗಳತ್ತ ಕೈಬೀಸಿದಾಗ 'ಮೋದಿ, ಮೋದಿ' ಎಂದು ಉದ್ಘಾರ ಕೇಳಿಸಿತು.

ಶ್ರೀ ರಾಮಕೃಷ್ಣ ಮಠ ಆಶ್ರಮದ ಸ್ವಾಮೀಜಿಗಳು ಯುವಜನತೆಗೆ ಸಂದೇಶ ನೀಡಿದರು. ವಿದ್ಯಾರ್ಥಿಗಳು ಸ್ವಾಮಿ ವಿವೇಕಾನಂದರ ಜೀವನ– ಸಂದೇಶಗಳ ಕುರಿತು ಮಾತನಾಡಿದರು. ಆಶ್ರಮದ ಕುರಿತ ಕಿರುಚಿತ್ರವನ್ನೂ ಪ್ರದರ್ಶನ ಮಾಡಲಾಯಿತು. ಇದಕ್ಕೂ ಮೊದಲು ಅವರು ಬಳಿಕ ಸ್ವಾಮಿ ವಿವೇಕಾನಂದರ ಪುತ್ಥಳಿಗೆ ನಮಿಸಿದರು. ಕೆಲಕ್ಷಣ ಧ್ಯಾನ ಮಾಡಿದರು. ದೇವರಿಗೆ ಪೂಜೆ ಸಲ್ಲಿಸಿ ನಮಿಸಿದರು.

ರಾಜ್ಯಪಾಲರಾದ ಥಾವರ್‌ಚಂದ್ ಗೆಹಲೋತ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪ್ರಮುಖರು, ಶಾಸಕರು, ಸ್ಥಳೀಯ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# '5 ವರ್ಷದೊಳಗೆ ಮನೆ ಕಟ್ಟದಿದ್ದರೆ, ನಿವೇಶನ ವಾಪಸ್'

● ವಿಕ್ರಮ ವಾಹಿನಿ | ಬೆಂಗಳೂರು


"ಬಿಡಿಎ ಆಗಲಿ, ಕಾರ್ಪೊರೇಷನ್ ನಿವೇಶನವಾಗಲಿ ಅದರ ಮಾಲೀಕರು ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಹೀಗಾಗಿ ನಿವೇಶನ ಪಡೆದ 5 ವರ್ಷದೊಳಗೆ ಅಲ್ಲಿ ಮನೆ ನಿರ್ಮಾಣ ಮಾಡಬೇಕು. ಕಟ್ಟದಿದ್ದರೆ, ಅದಕ್ಕೆ ದುಪ್ಪಟ್ಟು ತೆರಿಗೆ ಅಥವಾ ನಿವೇಶನ ಹಿಂಪಡೆಯಲಾಗುವುದು. ಮನೆ ಕಟ್ಟದೇ ಖಾಲಿ ಇಟ್ಟುಕೊಂಡರೆ ಅಲ್ಲಿ ಕಸದ ಸಮಸ್ಯೆ ಎದುರಾಗುತ್ತದೆ. ಹೀಗಾಗಿ ಈ ತೀರ್ಮಾನ ಮಾಡಲಾಗಿದೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಹೆಬ್ಬಾಳ ಜಂಕ್ಷನ್ ಬಳಿ "ತ್ಯಾಜ್ಯದಿಂದ ಸ್ವಾತಂತ್ರ್ಯ" ಅಭಿಯಾನಕ್ಕೆ ಚಾಲನೆ ನೀಡಿ ಶಿವಕುಮಾರ್ ಅವರು ಶನಿವಾರ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದರು.

ಮನೆ ಕಟ್ಟದಿದ್ದರೆ ನಿವೇಶನ ವಾಪಸ್ ತೆಗೆದುಕೊಳ್ಳುತ್ತೀರಾ ಎಂದು ಕೇಳಿದಾಗ, "ಬೇರೆ ವಿಧಿಯಿಲ್ಲ, ನಾವು ಇದನ್ನು ಮಾಡಲೇಬೇಕಾಗುತ್ತದೆ. ನಾವು ನಿವೇಶನ ನೀಡುವುದು ಮನೆ ಕಟ್ಟಿಕೊಳ್ಳಲು. ಕೆಲವರು 20, 30, 40 ವರ್ಷವಾದರೂ ಮನೆ ಕಟ್ಟಿಲ್ಲ. ಅವರು ಕಟ್ಟಿರುವ ಹಣವನ್ನು ಬಡ್ಡಿ ಸಮೇತ ವಾಪಸ್ ನೀಡಿ ನಿವೇಶನ ಹಿಂಪಡೆಯಲಾಗುವುದು. ಸಿಐಟಿಬಿ, ಬಿಡಿಎ, ಸೊಸೈಟಿಗಳಿಂದ ನಿವೇಶನ ಪಡೆದ ಮೇಲೆ ಮನೆ ಕಟ್ಟಬೇಕಾಗಿರುವುದು ಅವರ ಕರ್ತವ್ಯ. ನಿವೇಶನಕ್ಕೆ ಕಾಪೌಂಡ್ ಕೂಡ ಹಾಕದೇ, ಕಸ ಹಾಕಲು ಅವಕಾಶ ಕೊಟ್ಟರೆ ಹೇಗೆ? ಅವರ ಜಾಗದಲ್ಲಿ ಅವರು ಕಸ ಹಾಕದೇ ಇದ್ದರೂ, ಅವರ ಜಾಗವನ್ನು ಅವರು ರಕ್ಷಣೆ ಮಾಡಿಕೊಳ್ಳಬೇಕು" ಎಂದು ತಿಳಿಸಿದರು.

"ಮಹಾತ್ಮಾ ಗಾಂಧೀಜಿ ಅವರು ಸ್ವಚ್ಛತೆಯೇ ದೇವರು ಎಂದು ನಮಗೆ ಮಾರ್ಗದರ್ಶನ ನೀಡಿದ್ದಾರೆ. ರಾಜೀವ್ ಗಾಂಧಿ ಅವರು ನಿಮ್ಮ ಮನೆ ಮುಂದೆ ಸ್ವಚ್ಛತೆ ಕಾಪಾಡಿದರೆ, ಬೀದಿ ಸ್ವಚ್ಛವಾಗುತ್ತದೆ. ಬೀದಿ ಸ್ವಚ್ಛವಾದರೆ ಊರು ಸ್ವಚ್ಛವಾಗುತ್ತದೆ, ಊರು ಸ್ವಚ್ಛವಾದರೆ ನಾಡು ಸ್ವಚ್ಛವಾಗುತ್ತದೆ ಎಂದು ಹೇಳಿದ್ದಾರೆ. ಬೆಂಗಳೂರಿನ ಸ್ವಚ್ಛತೆ ನಮ್ಮ ಕರ್ತವ್ಯ. ನಿಮ್ಮ ಬೆಂಗಳೂರನ್ನು ಕಾಪಾಡಿಕೊಳ್ಳುವುದು ನಿಮ್ಮ ಕರ್ತವ್ಯ" ಎಂದರು.





**ಎಲ್ಲೆಂದರಲ್ಲಿ ಕಸ ಸುರಿಯುವ ವಾಹನ ಮುಲಾಜಿಲ್ಲದೆ ಮುಟ್ಟುಗೋಲು ಹಾಕಿಕೊಳ್ಳಿ**

"ಬೆಂಗಳೂರು ಸರ್ಕಾರದ ಆಸ್ತಿಯಲ್ಲ, ಬೆಂಗಳೂರು ನಿಮ್ಮ ಆಸ್ತಿ. ಇದನ್ನು ಕಾಪಾಡಲು ಅಭಿಯಾನ ಆರಂಭಿಸಿದ್ದೇವೆ. ಘನತ್ಯಾಜ್ಯವನ್ನು ಎಲ್ಲೆಂದರಲ್ಲಿ ಸುರಿಯುವ ವಾಹನಗಳಿಗೆ ನೋಟೀಸ್ ಕೊಡಲಾಗಿತ್ತು. ಕ್ಯಾಮೆರಾ ಕಣ್ಗಾವಲು ಇಡಲಾಗಿತ್ತು. ಈಗ ಮತ್ತೆ ಯತಾಸ್ಥಿತಿಯಲ್ಲಿ ಕಸ ಸುರಿಯುತ್ತಿದ್ದಾರೆ. ಅನುಮತಿ ಇಲ್ಲದೇ ಕಸ ಸುರಿಯುವವರ ವಾಹನವನ್ನು ಮುಲಾಜಿಲ್ಲದೇ ಮುಟ್ಟುಗೋಲು ಹಾಕಿಕೊಳ್ಳಿ ಎಂದು ನಾನು ಪೊಲೀಸರಿಗೆ ನಿರ್ದೇಶನ ನೀಡುತ್ತಿದ್ದೇನೆ. ಜನರಲ್ಲಿ ನಾವು ನಾಗರಿಕ ಪ್ರಜ್ಞೆ ತರಬೇಕಾಗಿದೆ" ಎಂದು ಅಭಿಪ್ರಾಯಪಟ್ಟರು.

"ಹಸಿರಿನ ವಿಚಾರವಾಗಿ ನನ್ನಲ್ಲಿ ವಿಭಿನ್ನ ಆಲೋಚನೆ ಇದೆ. ಅದನ್ನು ಈಗ ನಾನು ಪ್ರಸ್ತಾಪ ಮಾಡುವುದಿಲ್ಲ, 100 ದಿನಗಳ ಕಾರ್ಯಕ್ರಮದ ವೇಳೆ ಪ್ರಕಟ ಮಾಡುತ್ತೇವೆ. ಬೆಂಗಳೂರು ಸ್ವಚ್ಛತೆ ಬಗ್ಗೆ ಟೀಕೆ ಟಿಪ್ಪಣಿ ಬರುತ್ತಿವೆ. ನಾವು ಮಾಡುವ ಕೆಲಸ ಶಾಶ್ವತವಾಗಿ ಉಳಿಯುತ್ತದೆ, ಟೀಕೆಗಳು ಸಾಯುತ್ತವೆ.

ಶಿವಾಜಿನಗರದಲ್ಲಿ ಪಾದಚಾರಿ ಮಾರ್ಗ ಒತ್ತುವರಿ ತೆರವು ವೇಳೆ ಅಧಿಕಾರಿಗಳ ಮೇಲೆ ದಾಳಿ ಮಾಡಲಾಗಿದೆ. ಯಾರಾದರೂ ಇದನ್ನು ಅಧಿಕಾರಿಗಳ ಮೇಲೆ ದಾಳಿ ಎಂದು ಭಾವಿಸಿದ್ದರೆ ಅದು ಭ್ರಮೆ. ಇದು ಸರ್ಕಾರ, ಸಚಿವರು ಹಾಗೂ ಶಾಸಕರ ಮೇಲಿನ ದಾಳಿ ಎಂದೇ ಭಾವಿಸುತ್ತೇವೆ. ನಾವು ಎಲ್ಲಾ ಪಕ್ಷದ ಶಾಸಕರನ್ನು ವಿಶ್ವಾಸಕ್ಕೆ ಪಡೆದು ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ" ಎಂದು ಹೇಳಿದರು.

"ಬೀದಿವ್ಯಾಪಾರದವರಿಗೆ ಬೇರೆ ಜಾಗಗಳಲ್ಲಿ ವ್ಯಾಪಾರ ಮಾಡಲು ಅವಕಾಶ ಕಲ್ಪಿಸಲಾಗುವುದು. ಬೀದಿ ವ್ಯಾಪಾರಿಗಳು ಪಾದಚಾರಿಗಳು ಹಾಗೂ ವಾಹನ ಸಂಚಾರಕ್ಕೆ ತೊಂದರೆ ಮಾಡಲು ಸಾಧ್ಯವಿಲ್ಲ.

2ನೇ ಪುಟಕ್ಕೆ

# ಕಾವೇರಿ ಹೋರಾಟ ಕೈಬಿಡಿ

● ವಿಕ್ರಮ ವಾಹಿನಿ | ಮೈಸೂರು

"ಕಬಿನಿ ಜಲಾಶಯ ಭರ್ತಿಯಾಗುತ್ತಿದೆ. ಅಣೆಕಟ್ಟು ತುಂಬಿದಾಗ ನೀರು ಹರಿಸಲೇಬೇಕಾಗುತ್ತದೆ. ಅದನ್ನು ಹಿಡಿದಿಡಲು ಸಾಧ್ಯವಿಲ್ಲ. ನೀರು ಬಿಡಬಾರದು ಎಂದು ಹೋರಾಟ ಮಾಡುವ ನಿರ್ಧಾರವನ್ನು ಕೈಬಿಡಬೇಕು ಎಂದು ನಮ್ರತೆಯಿಂದ ಮನವಿ ಮಾಡುತ್ತೇನೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

**ಮೈಸೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದರು.**

ಕಾವೇರಿ ನೀರು ಹರಿಸುವ ವಿಚಾರವಾಗಿ ಪ್ರತಿಭಟನೆ ಬಗ್ಗೆ ಕೇಳಿದಾಗ, "ಕಬಿನಿ ಜಲಾಶಯದ ನೀರಿನ ಸಂಗ್ರಹಣೆ ಬಗ್ಗೆ ಅಧಿಕಾರಿಗಳು ಪ್ರತಿ ಗಂಟೆಯೂ ಮಾಹಿತಿ ನೀಡುತ್ತಿದ್ದಾರೆ. ಒಳಹರಿವು 40 ಸಾವಿರ ಕ್ಯೂಸೆಕ್ಸ್ ಮುಟ್ಟಿದೆ. ಪ್ರಕೃತಿ ಯಾರ ಸ್ವತ್ತೂ ಅಲ್ಲ. ಪ್ರಕೃತಿಯ ಅಣತಿಯಂತೆ ನಾವು ಬದುಕುತ್ತಿದ್ದೇವೆ. ನಾವು ನೀರು ಬಿಡುಗಡೆ ಮಾಡಲ್ಲ ಎಂದು ತೀರ್ಮಾನ ಮಾಡಿದರೂ, ಜಲಾಶಯ ತುಂಬಿದಾಗ ನೀರನ್ನು ಹಿಡಿದಿಟ್ಟುಕೊಳ್ಳಲು ಆಗುವುದಿಲ್ಲ. ಹೋರಾಟಗಾರರು ನೀರು ಬಿಡುವ ಕಡೆ ಹೋಗಬಾರದು. ನೀರಿನ ರಭಸಕ್ಕೆ ನೀವು ಕೊಚ್ಚಿ ಹೋಗಬಹುದು. ಯಾರೂ ನೀರಿಗೆ ಅಡ್ಡ ಮಲಗಲು ಹೋಗಬೇಡಿ" ಎಂದು ಮನವಿ ಮಾಡಿದರು.

"ನಮ್ಮ ಸ್ನೇಹಿತರು ತಮಿಳುನಾಡಿಗೆ ನೀರು ಹರಿಸಬಾರದಾಗಿ ಹೋರಾಟ, ಬಂದ್ ಮಾಡುತ್ತೇವೆ ಎಂದು ಹೇಳುತ್ತಿದ್ದಾರೆ. ಒಂದು ಹೋರಾಟಕ್ಕೆ ಹಿನ್ನೆಲೆ ಇರಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಲ್ಲರ ಹೋರಾಟಕ್ಕೂ ಗೌರವವಿದೆ. ಆದರೆ ಈಗ ಪ್ರತಿಭಟನೆ ಬೇಡ. ಕಾನೂನು ಚೌಕಟ್ಟಿಗೆ ಏನೂ ತೊಂದರೆಯಾಗಬಾರದು, ಜನಜೀವನಕ್ಕೆ ತೊಂದರೆಯಾಗಬಾರದು.

ಈ ರಾಜ್ಯದಲ್ಲಿ ಎಲ್ಲಾ ಜನರು ಬದುಕುತ್ತಿದ್ದಾರೆ. ಎಲ್ಲರನ್ನೂ ಸಂತೋಷದಿಂದ ಸ್ವೀಕಾರ ಮಾಡಿದ್ದೇವೆ. ತಮಿಳುನಾಡು ಸೇರಿದಂತೆ ನಾವೆಲ್ಲರೂ ಒಂದೇ ದೇಶದ ಪ್ರಜೆಗಳು" ಎಂದು ತಿಳಿಸಿದರು.

"ಬಂಗಾರಪ್ಪ, ಎಸ್ ಎಂ ಕೃಷ್ಣ, ಸಿದ್ದರಾಮಯ್ಯ, ದೇವೇಗೌಡರ ಕಾಲದಲ್ಲೂ ಸಂಕಷ್ಟ ಎದುರಾದಾಗ ಅಂದಿನ ಸಂದರ್ಭಕ್ಕೆ ತಕ್ಕಂತೆ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದೆ. ನಾವು ಮಾಡಿದ್ದು ಸರಿ, ಅವರುಗಳು ಮಾಡಿದ್ದು ತಪ್ಪು ಎಂದು ನಾವು ಹೇಳುವುದಿಲ್ಲ. ತಮಿಳುನಾಡಿಗೆ 177 ಟಿಎಂಸಿ ನೀರನ್ನು ಹರಿಸಬೇಕು ಎಂದು ಆದೇಶವಿದೆ. ಇದಕ್ಕೆ ಸುಪ್ರೀಂಕೋರ್ಟ್ ಕೂಡ ಬಲ ನೀಡಿದೆ.

ನಾವು ನ್ಯಾಯಾಲಯದ ಆದೇಶಕ್ಕೆ ಗೌರವ ನೀಡಬೇಕು. ಜೊತೆಗೆ ನಮ್ಮ ರೈತರನ್ನೂ ಕಾಪಾಡಬೇಕು. ನಮ್ಮ ರೈತರ ಹಿತವನ್ನು ಕಾಪಾಡಲು ನಮ್ಮ ಸರ್ಕಾರ ಬದ್ಧವಾಗಿದೆ. ಈ ಆದೇಶ ಎರಡೂ ರಾಜ್ಯಕ್ಕೆ ವರ" ಎಂದು ಅಭಿಪ್ರಾಯಪಟ್ಟರು.

2ನೇ ಪುಟಕ್ಕೆ

## ಸುದ್ದಿ ಚುಟುಕು

### 13 ಜಿಲ್ಲೆಗಳಿಗೆ ಮಳೆ ಎಚ್ಚರಿಕೆ

ಬೆಂಗಳೂರು

ರಾಜ್ಯದಲ್ಲಿ ಮಳೆಯ ಅಬ್ಬರ ಮುಂದುವರಿದಿದ್ದು, ನಾಳೆ ಬೆಂಗಳೂರು ಸೇರಿ 13 ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ (ಐಎಂಡಿ) ತಿಳಿಸಿದೆ. ಈ ವೇಳೆ ಗಂಟೆಗೆ 40–50 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ನಿರೀಕ್ಷೆಯಿದೆ.

ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು ಹಾಗೂ ಹಾಸನ ಜಿಲ್ಲೆಗಳಲ್ಲಿ ಭಾರೀ ಮಳೆಯ ಮುನ್ಸೂಚನೆ ನೀಡಲಾಗಿದೆ. ಉಡುಪಿ ಮತ್ತು ಚಿಕ್ಕಮಗಳೂರಿಗೆ ಆರೆಂಜ್ ಅಲರ್ಟ್, ಹಾಸನ ಹಾಗೂ ಕೊಡಗು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಲಾಗಿದ್ದು, ಭೂಕುಸಿತ ಮತ್ತು ಜಲಾವೃತ ಪ್ರದೇಶಗಳಲ್ಲಿ ಸಾರ್ವಜನಿಕರು ಹಾಗೂ ವಾಹನ ಸವಾರರು ಎಚ್ಚರಿಕೆಯಿಂದ ಇರಲು ಹವಾಮಾನ ಇಲಾಖೆ ಸೂಚಿಸಿದೆ.

### ಪೇಪರ್ ಲೀಕ್ ತಿದ್ದುಪಡಿ ಮಸೂದೆಗೆ ರಾಷ್ಟ್ರಪತಿ ಅಂಕಿತ

ನವದೆಹಲಿ

ಸಾರ್ವಜನಿಕ ಪ್ರಶ್ನೆ ಪತ್ರಿಕೆ ಸೋರಿಕೆ ತಡೆ (ತಿದ್ದುಪಡಿ) ಮಸೂದೆ–2026ಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅಂಕಿತ ಹಾಕಿದ್ದು, ಹೊಸ ಕಾನೂನು ಜಾರಿಗೆ ಬಂದಿದೆ. ಹೊಸ ಕಾನೂನಿನಡಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳಲ್ಲಿ 5ರಿಂದ 10 ವರ್ಷ ಜೈಲು ಶಿಕ್ಷೆ ಹಾಗೂ 10 ಕೋಟಿ ವರೆಗೆ ದಂಡ ವಿಧಿಸಲು ಅವಕಾಶವಿದೆ. ತನಿಖೆಯನ್ನು 2 ತಿಂಗಳಲ್ಲಿ ಪೂರ್ಣಗೊಳಿಸಿ, ಪ್ರಕರಣಗಳ ತೀರ್ಪನ್ನು 90 ದಿನಗಳೊಳಗೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಪರೀಕ್ಷಾ ಅಕ್ರಮಗಳನ್ನು ತಡೆಯಲು ವಿಶೇಷ ಕಾರ್ಯಪಡೆ ರಚಿಸಲಾಗುತ್ತದೆ.

### ಇಂದಿನಿಂದ 74 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿ ಪ್ರಕ್ರಿಯೆ

ಬೆಂಗಳೂರು

ರಾಜ್ಯದಲ್ಲಿ ಖಾಲಿ ಇರುವ 74 ಸಾವಿರ ಸರ್ಕಾರಿ ಹುದ್ದೆಗಳ ಭರ್ತಿ ಪ್ರಕ್ರಿಯೆಗೆ ಭಾನುವಾರ ಚಾಲನೆ ಸಿಗಲಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಮೊದಲ ಹಂತದಲ್ಲಿ 36,774 ಹುದ್ದೆಗಳನ್ನು ಆರು ತಿಂಗಳಲ್ಲಿ ಭರ್ತಿ ಮಾಡುವ ಗುರಿ ಹೊಂದಲಾಗಿದೆ.

ನೇಮಕಾತಿ ಪರೀಕ್ಷೆಗಳನ್ನು ಪಾರದರ್ಶಕವಾಗಿ ನಡೆಸಲು ರ್‍ಯಾಂಡಮ್ ಪ್ರಶ್ನೆ ಬ್ಯಾಂಕ್, ಟ್ಯಾಂಪರ್–ಪ್ರೂಫ್ ಪ್ರಶ್ನೆ ಪತ್ರಿಕೆ, ಜಾಮರ್ ಹಾಗೂ ಫ್ಲೈಯಿಂಗ್ ಸ್ಕ್ವಾಡ್ ವ್ಯವಸ್ಥೆ ಜಾರಿಗೊಳಿಸಲಾಗುತ್ತಿದೆ. ನೇಮಕಾತಿ ಸುಧಾರಣೆಗೆ ಎಸ್.ವಿ. ರಂಗನಾಥ್ ನೇತೃತ್ವದಲ್ಲಿ ಸಮಿತಿಯನ್ನೂ ಸರ್ಕಾರ ರಚಿಸಿದೆ. ನೇಮಕಾತಿ ಪರೀಕ್ಷೆಗಳು ಪಾರದರ್ಶಕ ಹಾಗೂ ಅಕ್ರಮಮುಕ್ತವಾಗಿ ನಡೆಯುವಂತೆ ಸರ್ಕಾರ ವಿಶೇಷ ಕ್ರಮ ಕೈಗೊಂಡಿದೆ ಎಂದು ಸಚಿವರು ತಿಳಿಸಿದ್ದಾರೆ.

### ಸವಿ ವಾಹಿನಿ

**ಪ್ರಯತ್ನ ಯಾವತ್ತೂ ವ್ಯರ್ಥವಾಗಲ್ಲ. ನಿಮ್ಮ ಕೆಲಸವನ್ನು ನೀವು ಪ್ರಾಮಾಣಿಕವಾಗಿ ಮಾಡಿ ಪ್ರತಿಫಲ ತಾನಾಗಿಯೇ ನಿಮ್ಮನ್ನು ಹುಡುಕಿಕೊಂಡು ಬರುತ್ತದೆ...**

### ದಿನ ಪಂಚಾಂಗ

ಆಗಸ್ಟ್, 02-2026, ಗ್ರೀಷ್ಮ ಋತು, ಆಷಾಢ ಮಾಸ,
ಬಹುಳ ಪಕ್ಷ. ಚೌತಿ ತಿಥಿ ರಾ: 9:45
ಪೂರ್ವಭಾದ್ರ ನಕ್ಷತ್ರ ರಾ- 8:48
ರಾಹುಕಾಲ ಸಾ-10-6:45
ಸಂಕಷ್ಟ ಚತುರ್ಥಿ(ಚಂ.ಉ ರಾ9:20),
ವಿಶ್ವ ಸ್ನೇಹ ದಿನ, ನೆಲೋಗಿ ಉತ್ಸವ

### ಸಂಪಾದಕೀಯ

# ದೇಶ ಭದ್ರತೆಗೆ ಆದ್ಯತೆ

ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ. ಇಲ್ಲಿ ನಾಗರಿಕರಿಗೆ ವಾಕ್ ಸ್ವಾತಂತ್ರ್ಯ, ಧಾರ್ಮಿಕ ಸ್ವಾತಂತ್ರ್ಯ, ಸಂಘಟನೆಗಳ ಸ್ಥಾಪನೆ, ಪ್ರತಿಭಟನೆ ಸೇರಿದಂತೆ ಹಲವು ಮೂಲಭೂತ ಹಕ್ಕುಗಳನ್ನು ಸಂವಿಧಾನ ಕಲ್ಪಿಸಿದೆ. ಈ ಹಕ್ಕುಗಳೇ ನಮ್ಮ ಪ್ರಜಾಪ್ರಭುತ್ವದ ಜೀವಾಳ. ಆದರೆ ಹಕ್ಕುಗಳ ಜತೆಗೆ ಜವಾಬ್ದಾರಿಯೂ ಇರಬೇಕೆಂಬುದನ್ನು ಮರೆಯುವಂತಿಲ್ಲ. ಕಳೆದ 75 ವರ್ಷಗಳಲ್ಲಿ ಭಾರತ ಆರ್ಥಿಕ, ತಾಂತ್ರಿಕ, ರಕ್ಷಣಾ ಮತ್ತು ಜಾಗತಿಕ ರಾಜತಾಂತ್ರಿಕ ಕ್ಷೇತ್ರಗಳಲ್ಲಿ ವಿಶ್ವದ ಗಮನ ಸೆಳೆಯುವ ಮಟ್ಟಕ್ಕೆ ಬೆಳೆದಿದೆ. 'ಇಂಡಿಯಾ ಫಸ್ಟ್' ಎಂಬ ಧ್ಯೇಯದೊಂದಿಗೆ ದೇಶ ಮುನ್ನಡೆಯುತ್ತಿರುವ ಈ ಸಂದರ್ಭದಲ್ಲಿ ಭಾರತದ ಬೆಳವಣಿಗೆಯನ್ನು ಸಹಿಸದ ಶಕ್ತಿಗಳ ಸಂಖ್ಯೆಯೂ ಹೆಚ್ಚುತ್ತಿದೆ. ಗಡಿಯಲ್ಲಿ ನೇರ ಯುದ್ಧ ನಡೆಸಲು ಸಾಧ್ಯವಾಗದ ಶತ್ರು ರಾಷ್ಟ್ರಗಳು ಈಗ ಪರೋಕ್ಷ ಮಾರ್ಗಗಳನ್ನು ಅನುಸರಿಸುತ್ತಿವೆ. ದೇಶದೊಳಗಿನ ಕೆಲವು ವ್ಯಕ್ತಿಗಳು ಅಥವಾ ಸಂಘಟನೆಗಳನ್ನು ಹಣ, ಪ್ರಭಾವ ಅಥವಾ ವೈಚಾರಿಕ ಆಮಿಷಗಳ ಮೂಲಕ ಬಳಸಿಕೊಂಡು ಭಾರತದ ಆಂತರಿಕ ಶಾಂತಿ, ಭದ್ರತೆ ಮತ್ತು ಸಾಮಾಜಿಕ ಸಾಮರಸ್ಯಕ್ಕೆ ಧಕ್ಕೆ ತರುವ ಪ್ರಯತ್ನಗಳು ನಡೆಯುತ್ತಿವೆ ಎಂಬ ಆತಂಕವನ್ನು ಭದ್ರತಾ ಸಂಸ್ಥೆಗಳು ಹಲವು ಸಂದರ್ಭಗಳಲ್ಲಿ ವ್ಯಕ್ತಪಡಿಸಿವೆ. ಹೀಗಿರುವಾಗ ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಸರ್ಕಾರಗಳು ಕಾಲಕಾಲಕ್ಕೆ ಕಾನೂನುಗಳನ್ನು ಪರಿಷ್ಕರಿಸುವುದು ಸಹಜ ಪ್ರಕ್ರಿಯೆಯಾಗಿದೆ.

ಈ ಹಿನ್ನೆಲೆಯಲ್ಲಿ ವಿದೇಶಿ ದೇಣಿಗೆ ನಿಯಂತ್ರಣ ಕಾಯ್ದೆ (ಎಫ್‌ಸಿಆರ್‌ಎ)ಗೆ ಕೇಂದ್ರ ಸರ್ಕಾರ ತರಲು ಉದ್ದೇಶಿಸಿರುವ ತಿದ್ದುಪಡಿಗಳು ಚರ್ಚೆಗೆ ಗ್ರಾಸವಾಗಿವೆ. ವಿದೇಶದಿಂದ ಬರುವ ಹಣವನ್ನು ಯಾವ ಉದ್ದೇಶಕ್ಕೆ ಬಳಸಲಾಗುತ್ತಿದೆ, ಅದರ ಲೆಕ್ಕಪತ್ರ ಎಷ್ಟು ಪಾರದರ್ಶಕವಾಗಿದೆ ಹಾಗೂ ಅದು ರಾಷ್ಟ್ರದ ಹಿತಾಸಕ್ತಿಗೆ ವಿರುದ್ಧವಾಗಿ ಬಳಕೆಯಾಗುತ್ತಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಯಾವುದೇ ಸಾರ್ವಭೌಮ ರಾಷ್ಟ್ರದ ಹೊಣೆಗಾರಿಕೆ. ಪ್ರಾಮಾಣಿಕವಾಗಿ ಸಾಮಾಜಿಕ ಸೇವೆ ಸಲ್ಲಿಸುವ ಸಂಸ್ಥೆಗಳಿಗೆ ಕಾನೂನು ಎಂದಿಗೂ ತೊಡಕಾಗಬಾರದು. ಅದೇ ಸಮಯದಲ್ಲಿ, ವಿದೇಶಿ ನಿಧಿಯ ದುರುಪಯೋಗದ ಮೂಲಕ ದೇಶದ ಭದ್ರತೆ, ಸಾಮಾಜಿಕ ಸೌಹಾರ್ದ ಅಥವಾ ಸಾರ್ವಜನಿಕ ಹಿತಾಸಕ್ತಿಗೆ ಧಕ್ಕೆಯಾಗದಂತೆ ತಡೆಯುವ ವ್ಯವಸ್ಥೆಯೂ ಇರಬೇಕು. ಆದ್ದರಿಂದ ಕಾನೂನಿನ ಉದ್ದೇಶವು ಸಂಸ್ಥೆಗಳನ್ನು ನಿಯಂತ್ರಿಸುವುದಲ್ಲ; ಉತ್ತರದಾಯಿತ್ವ, ಪಾರದರ್ಶಕತೆ ಮತ್ತು ಸಾರ್ವಜನಿಕ ವಿಶ್ವಾಸವನ್ನು ಬಲಪಡಿಸುವುದಾಗಿರಬೇಕು.

ಯಾವುದೇ ವ್ಯಕ್ತಿಯಾಗಲಿ, ಸಂಘಟನೆಯಾಗಲಿ ಅಥವಾ ಸಂಸ್ಥೆಯಾಗಲಿ, ಕಾನೂನಿಗಿಂತ ದೊಡ್ಡವರಲ್ಲ. ಪ್ರಜಾಪ್ರಭುತ್ವದಲ್ಲಿ ಹಕ್ಕುಗಳು ಎಷ್ಟು ಮುಖ್ಯವೋ, ಕಾನೂನಿಗೆ ಗೌರವ ನೀಡುವುದು ಅಷ್ಟೇ ಮುಖ್ಯ. ಆದರೆ ರಾಷ್ಟ್ರೀಯ ಭದ್ರತೆಯ ಹೆಸರಿನಲ್ಲಿ ರೂಪಿಸುವ ಯಾವುದೇ ಕಾನೂನು ಅಥವಾ ತಿದ್ದುಪಡಿಯೂ ನ್ಯಾಯಸಮ್ಮತ, ಪಾರದರ್ಶಕ ಮತ್ತು ದುರುಪಯೋಗಕ್ಕೆ ಅವಕಾಶವಿಲ್ಲದ ರೀತಿಯಲ್ಲಿ ಜಾರಿಯಾಗಬೇಕು. ಕಾನೂನು ಪ್ರಾಮಾಣಿಕರನ್ನು ರಕ್ಷಿಸಿ, ದುರುದ್ದೇಶದಿಂದ ವ್ಯವಸ್ಥೆಯನ್ನು ಬಳಸುವವರನ್ನು ಮಾತ್ರ ಗುರಿಯಾಗಿಸಬೇಕು. ದೇಶದ ಭದ್ರತೆ ಮತ್ತು ಪ್ರಜಾಪ್ರಭುತ್ವ ಪರಸ್ಪರ ವಿರುದ್ಧವಾದ ಮೌಲ್ಯಗಳಲ್ಲ; ಎರಡೂ ಒಂದಕ್ಕೊಂದು ಪೂರಕ. ರಾಷ್ಟ್ರದ ಸಾರ್ವಭೌಮತೆ, ಸಂವಿಧಾನದ ಮೌಲ್ಯಗಳು ಮತ್ತು ನಾಗರಿಕರ ಹಕ್ಕುಗಳ ನಡುವೆ ಸಮತೋಲನ ಕಾಯ್ದುಕೊಳ್ಳುವ ನಿಟ್ಟಿನಲ್ಲಿ ರೂಪುಗೊಳ್ಳುವ ಯಾವುದೇ ಕಾನೂನು ದೇಶದ ಭವಿಷ್ಯವನ್ನು ಮತ್ತಷ್ಟು ಭದ್ರಗೊಳಿಸುವ ಸಾಧನವಾಗಬೇಕು. ಇದೇ ಪ್ರಬುದ್ಧ ಪ್ರಜಾಪ್ರಭುತ್ವದ ನಿಜವಾದ ಲಕ್ಷಣ.

# ಎಫ್‌ಸಿಆರ್‌ಎ ತಿದ್ದುಪಡಿ ಮಸೂದೆ-2026ಕ್ಕೆ ನನ್ನ ಸಂಪೂರ್ಣ ಬೆಂಬಲ

**2017ರಲ್ಲಿ ಕೇಂದ್ರ ಗೃಹ ಸಚಿವಾಲಯದ ಎಫ್‌ಸಿಆರ್‌ಎ ದತ್ತಾಂಶವನ್ನು ವಿಶ್ಲೇಷಿಸಿದ ಅನುಭವದ ಆಧಾರದ ಮೇಲೆ, ವಿದೇಶಿ ದೇಣಿಗೆ ಸ್ವೀಕರಿಸುವ ಸಂಸ್ಥೆಗಳ ಕಾರ್ಯವೈಖರಿಯಲ್ಲಿ ಹೆಚ್ಚಿನ ಪಾರದರ್ಶಕತೆ ಮತ್ತು ಉತ್ತರದಾಯಿತ್ವ ಅಗತ್ಯವೆಂದು ಲೇಖಕರು ಅಭಿಪ್ರಾಯಪಟ್ಟಿದ್ದಾರೆ. ಇದೇ ಹಿನ್ನೆಲೆಯಲ್ಲಿ ಎಫ್‌ಸಿಆರ್‌ಎ ತಿದ್ದುಪಡಿ ಮಸೂದೆ-2026ರ ಹಲವು ನಿಬಂಧನೆಗಳನ್ನು ಸ್ವಾಗತಿಸಿರುವ ಅವರು, ಕಳೆದ ಹತ್ತು ವರ್ಷಗಳ ಎಫ್‌ಸಿಆರ್‌ಎ ದತ್ತಾಂಶವನ್ನು ಆರ್‌ಟಿಐ ಮೂಲಕ ಪಡೆದು ಮರು ವಿಶ್ಲೇಷಣೆ ನಡೆಸುವ ಉದ್ದೇಶವಿರುವುದಾಗಿ ತಿಳಿಸಿದ್ದಾರೆ.**

2017ರಲ್ಲಿ ಕೇಂದ್ರ ಗೃಹ ಸಚಿವಾಲಯದ ಎಫ್‌ಸಿಆರ್‌ಎ ಪೋರ್ಟಲ್‌ನಲ್ಲಿ ಸಾರ್ವಜನಿಕವಾಗಿ ಲಭ್ಯವಿದ್ದ ಅಧಿಕೃತ ದತ್ತಾಂಶವನ್ನು ನಾನು ಡೌನ್‌ಲೋಡ್ ಮಾಡಿ ಅದರ ಮೇಲೆ ವ್ಯಾಪಕ ವಿಶ್ಲೇಷಣೆ ನಡೆಸಿದ್ದೆ. ಕೇವಲ ಅಂಕಿ-ಅಂಶಗಳನ್ನು ನೋಡುವುದರಲ್ಲೇ ನಿಲ್ಲದೆ, ವಿದೇಶಿ ದೇಣಿಗೆ ಸ್ವೀಕರಿಸುತ್ತಿದ್ದ ನೂರಾರು ಸಂಸ್ಥೆಗಳ ಅಧಿಕೃತ ವೆಬ್‌ಸೈಟ್‌ಗಳನ್ನು ಪರಿಶೀಲಿಸಿ, ಅವುಗಳ ಉದ್ದೇಶಗಳು, ಚಟುವಟಿಕೆಗಳು, ಆಡಳಿತ ವ್ಯವಸ್ಥೆ ಹಾಗೂ ವಿದೇಶಿ ದಾನಿಗಳೊಂದಿಗಿನ ಸಂಬಂಧಗಳನ್ನು ಅಧ್ಯಯನ ಮಾಡಿದ್ದೆ. ಈ ಎರಡು ಹಂತದ ಅಧ್ಯಯನದ ಆಧಾರದ ಮೇಲೆಯೇ ನನ್ನ ದೃಢ ಅಭಿಪ್ರಾಯ ರೂಪುಗೊಂಡಿದೆ.

ಆ ಸಂದರ್ಭದಲ್ಲಿ ಆಗಿನ ಎಫ್‌ಸಿಆರ್‌ಎ ಪೋರ್ಟಲ್‌ನಲ್ಲಿ ಲಭ್ಯವಿದ್ದ ದೇಶವಾರು, ರಾಜ್ಯವಾರು, ಸಂಸ್ಥೆವಾರು ಹಾಗೂ ಫಂಡ್ ಪ್ಯಾಟರ್ನ್ ಸೇರಿದಂತೆ ಅನೇಕ ವಿಶ್ಲೇಷಣಾತ್ಮಕ ಪಟ್ಟಿಗಳನ್ನು ಬಳಸಿಕೊಂಡು ನಾನು ಅಧ್ಯಯನ ಮಾಡಿದ್ದೆ. ನಂತರ ಪೋರ್ಟಲ್‌ನ ಸ್ವರೂಪ ಬದಲಾಗಿದೆ.

ಅಂದಿನಂತೆ ಸಂಪೂರ್ಣ ವಿಶ್ಲೇಷಣಾತ್ಮಕ ದತ್ತಾಂಶ ಈಗ ಸಾರ್ವಜನಿಕವಾಗಿ ಲಭ್ಯವಿಲ್ಲ. ಆದರೂ ಆ ಕಾಲದ ಕೆಲವು ದತ್ತಾಂಶ ಮತ್ತು ವಿಶ್ಲೇಷಣಾ ಕಡತಗಳು ನನ್ನ ಬಳಿ ಇನ್ನೂ ಸಂರಕ್ಷಿತವಾಗಿವೆ. ಕಳೆದ ಹತ್ತು ವರ್ಷಗಳ ಈಅಖಂ ದತ್ತಾಂಶವನ್ನು ಮಾಹಿತಿ ಹಕ್ಕು ಕಾಯ್ದೆ ಅಡಿಯಲ್ಲಿ ಪಡೆಯಲು ನಾನು ಅರ್ಜಿ ಸಲ್ಲಿಸಲು ನಿರ್ಧರಿಸಿದ್ದೇನೆ. ಆ ದತ್ತಾಂಶವನ್ನು ಮರು ವಿಶ್ಲೇಷಿಸಿ ಸಾರ್ವಜನಿಕರೊಂದಿಗೆ ಹಂಚಿಕೊಳ್ಳುವ ಉದ್ದೇಶವಿದೆ.

**ತಿದ್ದುಪಡಿ ಮಸೂದೆಯ ಅಂಶಗಳೂ ಸ್ವಾಗತಾರ್ಹವೇ!**

ನನ್ನ ಅಧ್ಯಯನದ ಆಧಾರದ ಮೇಲೆ ವಿದೇಶಿ ದೇಣಿಗೆ ಸ್ವೀಕರಿಸುವ ಸಂಸ್ಥೆಗಳ ಕಾರ್ಯವೈಖರಿಯಲ್ಲಿ ಪಾರದರ್ಶಕತೆ, ಉತ್ತರದಾಯಿತ್ವ ಮತ್ತು ನಿಯಂತ್ರಣವನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂಬ ತೀರ್ಮಾನಕ್ಕೆ ನಾನು ಬಂದಿದ್ದೇನೆ. ಇದೇ ಕಾರಣಕ್ಕೆ ಎಫ್‌ಸಿಆರ್‌ಎ ತಿದ್ದುಪಡಿ ಮಸೂದೆ-2026ರಲ್ಲಿ ಪ್ರಸ್ತಾಪಿಸಲಾದ ಕೆಲವು ಪ್ರಮುಖ ಕ್ರಮಗಳನ್ನು ನಾನು ಸ್ವಾಗತಿಸುತ್ತೇನೆ.


ನೋಂದಣಿ ರದ್ದಾದ ಅಥವಾ ಅವಧಿ ಮುಗಿದ ಸಂಸ್ಥೆಗಳ ವಿದೇಶಿ ನಿಧಿ ಮತ್ತು ಆಸ್ತಿಗಳ ನಿರ್ವಹಣೆಗೆ ಸ್ಪಷ್ಟ ಕಾನೂನು ವ್ಯವಸ್ಥೆ ಕಲ್ಪಿಸುವುದು, ಅಮಾನತುಗೊಂಡ ಸಂಸ್ಥೆಗಳು ಆಸ್ತಿಗಳನ್ನು ದುರುಪಯೋಗಪಡಿಸಿಕೊಳ್ಳುವುದನ್ನು ತಡೆಯುವುದು, ಪ್ರಮುಖ ಪದಾಧಿಕಾರಿಗಳ ವ್ಯಾಖ್ಯಾನವನ್ನು ವಿಸ್ತರಿಸುವುದು, ವಿದೇಶಿ ದೇಣಿಗೆಯ ಬಳಕೆಗೆ ಸಮಯಮಿತಿಯನ್ನು ನಿಗದಿಪಡಿಸುವುದು, ಲೆಕ್ಕಪತ್ರಗಳ ಪರಿಶೀಲನೆ ಮತ್ತು ತನಿಖೆಯನ್ನು ಪರಿಣಾಮಕಾರಿಯಾಗಿಸುವುದು ಹಾಗೂ ಕಾರ್ಯನಿರ್ವಹಣೆ ನಿಲ್ಲಿಸಿದ ಸಂಸ್ಥೆಗಳಿಗೂ ವರದಿ ಸಲ್ಲಿಕೆಯನ್ನು ಕಡ್ಡಾಯಗೊಳಿಸುವುದು-ಇವೆಲ್ಲವೂ ಸಾರ್ವಜನಿಕ ಹಿತಾಸಕ್ತಿ ಮತ್ತು ರಾಷ್ಟ್ರೀಯ ಹಿತಾಸಕ್ತಿಯ ದೃಷ್ಟಿಯಿಂದ ಅಗತ್ಯವಾದ ಕ್ರಮಗಳೇ ಎಂಬುದು ನನ್ನ ಅಭಿಪ್ರಾಯ.

ನಾನು ಯಾವುದೇ ಧರ್ಮ, ಸಮುದಾಯ ಅಥವಾ ನಿಷ್ಠೆಯಿಂದ ಸೇವೆ ಸಲ್ಲಿಸುವ ಸಂಸ್ಥೆಗಳ ವಿರುದ್ಧವಾಗಿ ಹೀಗೆ ಹೇಳುತ್ತಿಲ್ಲ. ಆದರೆ ವಿದೇಶಿ ದೇಣಿಗೆ ಸ್ವೀಕರಿಸುವ ಪ್ರತಿಯೊಂದು ಸಂಸ್ಥೆಯೂ ಒಂದೇ ರೀತಿಯ ಕಾನೂನು ಮಾನದಂಡ, ಪಾರದರ್ಶಕತೆ ಮತ್ತು ಸಾರ್ವಜನಿಕ ಉತ್ತರದಾಯಿತ್ವಕ್ಕೆ ಒಳಪಡಬೇಕು ಎಂಬುದು ನನ್ನ ಸ್ಪಷ್ಟ ನಿಲುವು.

ಪ್ರಜಾಪ್ರಭುತ್ವದಲ್ಲಿ ಸರ್ಕಾರದಂತೆ ಸಾರ್ವಜನಿಕ ಹಣ ಮತ್ತು ವಿದೇಶಿ ನಿಧಿಗಳನ್ನು ನಿರ್ವಹಿಸುವ ಸಂಸ್ಥೆಗಳೂ ಸಮಾನ ಮಟ್ಟದ ಜವಾಬ್ದಾರಿಯನ್ನು ಹೊರುವುದೇ ಆರೋಗ್ಯಕರ ಆಡಳಿತದ ಲಕ್ಷಣ.

ಒಂಬತ್ತು ವರ್ಷಗಳ ಹಿಂದೆ ವಿದೇಶದಿಂದ ಬಂದ ದೇಣಿಗೆಯಲ್ಲಿ ಗಮನಾರ್ಹವಾದ ಪಾಲು ಕ್ರೈಸ್ತ ಮಿಶನರಿ ಸಂಬಂಧಿತ ಚಟುವಟಿಕೆಗಳಿಗೇ ಹರಿದಿದ್ದನ್ನು ನಾನು ನನ್ನ ಡೇಟಾ ವಿಶ್ಲೇಷಣೆ ಮೂಲಕ ಖಚಿತಪಡಿಸಿಕೊಂಡಿದ್ದೇನೆ.

ಪಾರದರ್ಶಕತೆ ಮತ್ತು ಉತ್ತರದಾಯಿತ್ವವು ಸರ್ಕಾರಕ್ಕಷ್ಟೇ ಅಲ್ಲ; ವಿದೇಶಿ ದೇಣಿಗೆ ಸ್ವೀಕರಿಸುವ ಪ್ರತಿಯೊಂದು ಸಂಸ್ಥೆಗೂ ಸಮಾನವಾಗಿ ಅನ್ವಯಿಸಬೇಕು. ಸರ್ಕಾರಕ್ಕೆ ತನ್ನ ಕಾರ್ಯೋದ್ದೇಶಗಳ ಬಗ್ಗೆ ಅಧಿಕೃತವಾಗಿ ನೀಡಿದ ದಾಖಲೆಗೆ ವಿರುದ್ಧವಾಗಿ ಅನಧಿಕೃತವಾಗಿ ಇಂತಹ ಕೆಲವಾರು ಸಂಸ್ಥೆಗಳು ಒಗ್ಗೂಡಿ ಆದರ್ಶಗಳನ್ನು ಹೊತ್ತ ಯುವ ಸಮುದಾಯವನ್ನು ದಾರಿ ತಪ್ಪಿಸುವ ಕೆಲಸಗಳನ್ನು ಮಾಡುತ್ತಿವೆ ಎಂಬುದನ್ನು ನಾನು ಕಂಡುಕೊಂಡಿದ್ದೇನೆ.



(ಸೂಚನೆ: ಈ ಅಭಿಪ್ರಾಯವು ಯಾವುದೇ ರಾಜಕೀಯ ಪೂರ್ವಾಗ್ರಹದಿಂದ ಬಂದದ್ದಲ್ಲ; ಬದಲಿಗೆ ನನ್ನ ಅಧ್ಯಯನದಿಂದ ರೂಪುಗೊಂಡಿದ್ದು.)

**-ಬೇಳೂರು ಸುದರ್ಶನ**



**ಮುಖ್ಯಮಂತ್ರಿ ಆದ ನಂತರ ಇದೇ ಮೊದಲ ಬಾರಿಗೆ ಮೈಸೂರಿಗೆ ಶನಿವಾರ ಆಗಮಿಸಿದ ಡಿ.ಕೆ ಶಿವಕುಮಾರ್ ಅವರನ್ನು ಸಚಿವ ಯತೀಂದ್ರ ಸಿದ್ದರಾಮಯ್ಯ ಅವರ ನೇತೃತ್ವದಲ್ಲಿ ಬೃಹತ್ ಬೆಲ್ಲ ಮತ್ತು ಸೇಬಿನ ಹಾರ ಹಾಕಿ ತೆರೆದ ವಾಹನದಲ್ಲಿ ಮೆರವಣಿಗೆಯಲ್ಲಿ ಕರೆದೊಯ್ಯಲಾಯಿತು. ಸಂಸದ ಅನಿಲ್ ಚಿಕ್ಕಮಾಧು, ಶಾಸಕರಾದ ತನ್ವೀರ್ ಸೇಠ್, ಹರೀಶ್ ಗೌಡ, ರವಿಶಂಕರ್ ಮತ್ತಿತರರು ಉಪಸ್ಥಿತರಿದ್ದರು.**

## '5 ವರ್ಷದೊಳಗೆ ಮನೆ ಕಟ್ಟದಿದ್ದರೆ, ನಿವೇಶನ ವಾಪಸ್'

1ನೇ ಪುಟದಿಂದ

ಇಂದಿನಿಂದ ಆರಂಭವಾಗುತ್ತಿರುವ ಈ ಅಭಿಯಾನ ಬೆಂಗಳೂರಿಗೆ ಮಾತ್ರವಲ್ಲ, ಇಡೀ ರಾಜ್ಯಕ್ಕೆ ಮಾದರಿ ಕಾರ್ಯಕ್ರಮವಾಗಿದೆ. ಎಲ್ಲಾ ಶಾಸಕರು ತಮ್ಮ ಕ್ಷೇತ್ರದಲ್ಲಿ ಈ ಅಭಿಯಾನ ಕೈಗೆತ್ತಿಕೊಳ್ಳಬೇಕು. ಇದು ನಿಮ್ಮ ಬೆಂಗಳೂರು, ಇಡೀ ದೇಶ ನಿಮ್ಮನ್ನು ಗಮನಿಸುತ್ತಿದೆ. ಅನೇಕ ರಾಷ್ಟ್ರೀಯ ನಾಯಕರು ಅನೇಕ ಮಾರ್ಗದರ್ಶನ ನೀಡಿದ್ದು, ಅದನ್ನು ಮುಂದುವರಿಸಿಕೊಂಡು ಹೋಗೋಣ" ಎಂದರು. ಸಾರ್ವಜನಿಕರು ಮನೆ, ರಸ್ತೆ, ಉದ್ಯಾನ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡುವ ಜತೆಗೆ ತ್ಯಾಜ್ಯ ವಿಂಗಡಣೆ, ಪ್ಲಾಸ್ಟಿಕ್ ಬಳಕೆ ನಿಯಂತ್ರಣ ಮತ್ತು ಪರಿಸರ ಸಂರಕ್ಷಣೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದರೆ ಮಾತ್ರ ಸ್ವಚ್ಛ ಹಾಗೂ ಸುಂದರ ಬೆಂಗಳೂರಿನ ಕನಸು ನನಸಾಗಲಿದೆ ಎಂದು ಅವರು ಹೇಳಿದರು.

"ದೇಶದ ಎಲ್ಲಾ ನಗರಗಳಲ್ಲೂ ಈ ಕಸ ಹಾಕುವ ಸಮಸ್ಯೆ ಇದೆ. ಬೆಂಗಳೂರಿನಲ್ಲಿ ಕಸದ ವಿಚಾರವಾಗಿ ಕಾರ್ಯಕ್ರಮ ಮಾಡಿ ಅನೇಕ ವರ್ಷಗಳಾಗಿವೆ. ಮುಂದಿನ ದಿನಗಳಲ್ಲಿ ಇದಕ್ಕೆ ಹೊಸ ರೂಪ ನೀಡುತ್ತಿದ್ದೇವೆ. ಎನ್ ಜಿಓಗಳು, ಸಂಘ ಸಂಸ್ಥೆಗಳು ಒಂದೊಂದು ಪ್ರದೇಶದ ಜವಾಬ್ದಾರಿ ಹೊತ್ತುಕೊಂಡರೆ ನಾನು ಸ್ವಾಗತಿಸುತ್ತೇನೆ. ನಾಲ್ಕು ರಸ್ತೆ ಜವಾಬ್ದಾರಿ ತೆಗೆದುಕೊಂಡು ಬಂದರೆ ಸಾಕು. ಈ ಅಭಿಯಾನಕ್ಕೆ ನಾಗರಿಕರ ಸಹಕಾರ ಬೇಕು" ಎಂದು ತಿಳಿಸಿದರು.

# ಕಾವೇರಿ ಹೋರಾಟ ಕೈಬಿಡಿ

1ನೇ ಪುಟದಿಂದ

"ಎರಡೂ ರಾಜ್ಯಗಳನ್ನೂ ಕಾಪಾಡುವ ತೀರ್ಪನ್ನು ಈ ಹಿಂದೆ ನೀಡಲಾಗಿದೆ. ಮಾಧ್ಯಮವೊಂದರಲ್ಲಿ ಸಮತೋಲಿತ ಅಣೆಕಟ್ಟು ನಿರ್ಮಾಣ ಮಾಡುವುದರಿಂದ ಏನೆಲ್ಲಾ ಅನುಕೂಲವಾಗಲಿದೆ ಎಂದು ಚೆನ್ನಾಗಿ ವಿಶ್ಲೇಷಣೆ ಮಾಡಲಾಗಿದೆ. ಕಾವೇರಿ ನೀರಿನ ವಿಚಾರವಾಗಿ ದೆಹಲಿಯಲ್ಲಿ ಪ್ರಹ್ಲಾದ್ ಜೋಶಿ ಅವರು, ಬಸವರಾಜ ಬೊಮ್ಮಾಯಿ ಅವರು ಸೇರಿದಂತೆ ಅನೇಕರು ಅವರ ಕೈಲಾದ ಪ್ರಯತ್ನ ಮಾಡಿದ್ದಾರೆ.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದವರಿಗೂ ಯಾವ್ಯಾವ ಜಲಾಶಯಗಳಲ್ಲಿ ಎಷ್ಟೆಷ್ಟು ನೀರಿದೆ ಎನ್ನುವ ಮಾಹಿತಿ ಕೂಡ ಇದೆ. ಬೇರೆ ಸಂದರ್ಭಗಳಿಗೆ ಹೋಲಿಸಿದರೆ ಅರ್ಧ ನೀರನ್ನೂ ಬಿಡುಗಡೆ ಮಾಡಿಲ್ಲ ಎಂದು ನಮ್ಮ ಮನವಿ ತಿರಸ್ಕರಿಸಿದ್ದಾರೆ" ಎಂದು ಹೇಳಿದರು.

**ಬಿಜೆಪಿಯವರು ರಾಜಕೀಯ ಮಾಡುತ್ತಿದ್ದಾರೆ**

"ಬಿಜೆಪಿಯವರ ಕಾವೇರಿ ವಿಚಾರವಾಗಿ ರಾಜಕೀಯ ಮಾಡುತ್ತಿದ್ದಾರೆ. ಕುಮಾರಸ್ವಾಮಿ ಅವರ ಹೇಳಿಕೆಯನ್ನೂ ಸಹ ನಾನು ಗಮನಿಸಿದ್ದೇನೆ. ತಮಿಳುನಾಡಿನ ಸಂಸದರು, ವಿವಿಧ ಪಕ್ಷಗಳ ನಾಯಕರು ಅವರ ರಾಜಕೀಯ ಅಸ್ತಿತ್ವಕ್ಕೆ ಹೋರಾಟ ಮಾಡುತ್ತಿದ್ದಾರೆ. ಅವರಿಗೂ ಎಲ್ಲಾ ಅರಿವಿದೆ. ಈ ಹಿಂದೆ ನಿಮ್ಮ ಸುಪರ್ಧಿಯಲ್ಲಿ ಅಣೆಕಟ್ಟು ಕಟ್ಟಿಕೊಳ್ಳಬಹುದು ಎಂದು ಹೇಳಿದ್ದರು. ಇದಕ್ಕೆ ದಾಖಲೆಗಳೂ ಸಹ ಇವೆ" ಎಂದರು.

ಮೇಕೆದಾಟು ವಿಚಾರ ಸುಪ್ರೀಂನಲ್ಲಿ ಜಯ

"ಮೇಕೆದಾಟು ವಿಚಾರದಲ್ಲಿ ನಮಗೆ ಸುಪ್ರೀಂಕೋರ್ಟ್ ನಲ್ಲಿ ದೊಡ್ಡ ಜಯ ಸಿಕ್ಕಿದೆ. ಸಂಸತ್ ನಲ್ಲಿಯೂ ಸಹ ಅವರ ಜಾಗದಲ್ಲಿ ಅಣೆಕಟ್ಟು ಕಟ್ಟಿಕೊಳ್ಳಲು ಕಾನೂನು ಏನು ಹೇಳುತ್ತದೆ ಎಂದು ತುಂಬಾ ಚೆನ್ನಾಗಿ ಉತ್ತರ ನೀಡಲಾಗಿದೆ" ಎಂದರು.

"ತುಂಗಭದ್ರಾ ವಿಚಾರದಲ್ಲಿ ಕೇಂದ್ರ ಜಲಶಕ್ತಿ ಸಚಿವರಾದ ಸಿ ಆರ್ ಪಾಟೀಲ್ ಅವರ ನೇತೃತ್ವದಲ್ಲಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಸಭೆ ನಡೆಸಿ ಸಮತೋಲಿತ ಅಣೆಕಟ್ಟು ನಿರ್ಮಾಣ ಮಾಡಲು ತೀರ್ಮಾನ ಮಾಡಲಾಗಿದೆ. ಅವರು ಸಹ ಸಮಿತಿ ರಚನೆ ಮಾಡುವುದಾಗಿ ತಿಳಿಸಿದ್ದಾರೆ. ನಾನು ಮುಖ್ಯಮಂತ್ರಿ ಆದ ಮೇಲೆ ನಡೆದ ಐತಿಹಾಸಿಕ ತೀರ್ಮಾನ. ಐತಿಹಾಸಿಕ ಹೆಜ್ಜೆ" ಎಂದರು.

"ತಮಿಳುನಾಡು ಸಿಎಂ ಆಗಸ್ಟ್ 3 ರಂದು ರಾಜ್ಯಕ್ಕೆ ಭೇಟಿ ನೀಡುವುದಾಗಿ ಹೇಳಿದ್ದರು. ಆದರೆ ಇಲ್ಲಿ ಪರಿಸ್ಥಿತಿ ಸರಿಯಿಲ್ಲ. ಏಕೆಂದರೆ ಯಾವುದೇ ಮಾತುಕತೆಗಳು ಶಾಂತಿ, ಸೌಹಾರ್ದಯುತವಾಗಿ ನಡೆಯಬೇಕು. ನಮ್ಮ ಪರಿಸ್ಥಿತಿ, ಅವರ ಪರಿಸ್ಥಿತಿ ಇಬ್ಬರಿಗೂ ಅರಿವಿದೆ. ಸಮಸ್ಯೆ ಮಾತುಕಥೆಯಲ್ಲಿ ಬಗೆಹರಿಯುವುದಾದರೆ ಬಗೆಹರಿಯಲಿ.

ಅವರ ಹಕ್ಕನ್ನು ಅವರು ಪಡೆಯಲಿ. ನಾವು ಅದಕ್ಕೆ ಎಂದಿಗೂ ಅಡ್ಡಿ ಮಾಡುವುದಿಲ್ಲ. ನ್ಯಾಯಾಲಯ ನೀಡಿದ ನಮ್ಮ ಹಕ್ಕನ್ನು ನಾವು ಪಡೆಯೋಣ. ಇದಕ್ಕೆ ಎಲ್ಲರೂ ಸಹಕಾರ ನೀಡುತ್ತಾರೆ ಎಂದು ಭಾವಿಸೋಣ. ವಿಜಯ್ ಅವರ ಭೇಟಿಗೆ ಎಲ್ಲಾ ಪರಿಸ್ಥಿತಿ ತಿಳಿಯಾದ ನಂತರ ದಿನಾಂಕ ನಿಗದಿ ಮಾಡಲಾಗುವುದು" ಎಂದರು.

ತಮಿಳುನಾಡಿಗೆ ನೀರು ಹರಿಸಲಾಗುವುದೇ ಎಂದು ಕೇಳಿದಾಗ, "ಸರ್ವಪಕ್ಷ ಸಭೆಯಲ್ಲಿ ಮಾಜಿ ಮುಖ್ಯಮಂತ್ರಿಗಳು, ನಾಯಕರು, ಕಾನೂನು ತಜ್ಞರ ಮಾತನ್ನು ಆಲಿಸಲಾಗುವುದು. ಒಂದು ಕಡೆ ಯಡಿಯೂರಪ್ಪ ಅವರು, ವಿಜಯೇಂದ್ರ ಅವರು ನುಗುತ್ತಿದ್ದಾರೆ. ಇನ್ನೊಂದು ಕಡೆ ಸಂಸದರು, ಮಂತ್ರಿಗಳು ಕರ್ನಾಟಕಕ್ಕೆ ಸಂಸತ್ತಿನಲ್ಲಿ ಸಹಾಯ ಮಾಡುತ್ತಿದ್ದಾರೆ" ಎಂದರು.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ಆಗಿದ್ದು ಒಳ್ಳೆಯದು ಎಂಬುದೇ ನಿಮ್ಮ ಅಭಿಪ್ರಾಯ ಎಂದು ಕೇಳಿದಾಗ, "ಕಳೆದ ವರ್ಷ ಎಷ್ಟು ನೀರು ಬಿಡಲಾಗಿತ್ತು, ಈ ವರ್ಷ ಎಷ್ಟು ನೀರು ಬಿಡಲಾಗಿದೆ ಎಂದು ಮಾಧ್ಯಮಗಳೇ ಗಮನಿಸಿ ತೀರ್ಮಾನ ಮಾಡಿ.

ಬೋರ್ಡ್ ಇಲ್ಲದೇ ಇದ್ದಾಗ 16. ಟಿಎಂಸಿ ನೀರು ಬಿಡಬೇಕು ಎಂದೆಲ್ಲಾ ತೀರ್ಮಾನ ಮಾಡಲಾಗಿದೆ ಎನ್ನುವ ದಾಖಲೆಗಳಿವೆ. ಪ್ರಸ್ತುತ ತಮಿಳುನಾಡು 9 ಸಾವಿರ ಕ್ಯೂಸೆಕ್ಸ್ ಗೆ ಬೇಡಿಕೆ ಇಟ್ಟಿತ್ತು. ಆದರೆ 3,500 ಕ್ಯೂಸೆಕ್ ನೀರು ಹರಿಸಲು ಆದೇಶ ನೀಡಿದ್ದಾರೆ" ಎಂದು ತಿಳಿಸಿದರು.

ಕಬಿನಿಗೆ ಬಾಗಿನ ಅರ್ಪಿಸುವಿರಾ ಎಂದು ಕೇಳಿದಾಗ, "ಈಗ ಬೇಡ ತಡೆಯಿರಿ. ಏನೂ ಇಲ್ಲದೇ ಈಗಾಗಲೇ ನಮ್ಮ ವಿರುದ್ಧ ದಾಳಿ ಮಾಡುತ್ತಿದ್ದಾರೆ" ಎಂದರು.

"ಶುಭಮುಹೂರ್ತ, ಶುಭ ಘಳಿಗೆಯಲ್ಲಿ ಮೊದಲ ಬಾರಿಗೆ ಮುಖ್ಯಮಂತ್ರಿ ಆದ ಮೇಲೆ ಮೈಸೂರಿಗೆ ಬಂದಿದ್ದೇನೆ. ಚಾಮುಂಡಿ ತಾಯಿಗೆ ನಮಿಸಲಿದ್ದೇನೆ. ಮೈಸೂರಿನ ನೆಲದಿಂದ ಸ್ವಾಮಿ ವಿವೇಕಾನಂದ ಅವರು ಅಂದು ದೊಡ್ಡ ಸಂದೇಶ ನೀಡಿದ್ದಾರೆ.

"ಕಾವೇರಿ ವಿಚಾರದಲ್ಲಿ ರಾಜ್ಯದ ಹಿತಾಸಕ್ತಿಯನ್ನು ಕಾಪಾಡುವುದು ಸರ್ಕಾರದ ಮೊದಲ ಆದ್ಯತೆಯಾಗಿದೆ. ಯಾವುದೇ ನಿರ್ಧಾರವನ್ನು ಭಾವನಾತ್ಮಕವಾಗಿ ಅಲ್ಲ, ಕಾನೂನು ಹಾಗೂ ತಾಂತ್ರಿಕ ಅಂಶಗಳನ್ನು ಆಧರಿಸಿ ಕೈಗೊಳ್ಳಲಾಗುತ್ತದೆ. ರೈತರ ಹಿತ, ಕುಡಿಯುವ ನೀರಿನ ಅಗತ್ಯ ಮತ್ತು ರಾಜ್ಯದ ಹಕ್ಕುಗಳಿಗೆ ಯಾವುದೇ ಧಕ್ಕೆಯಾಗದಂತೆ ಸರ್ಕಾರ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ. ಈ ವಿಷಯದಲ್ಲಿ ಎಲ್ಲ ರಾಜಕೀಯ ಪಕ್ಷಗಳು ಒಂದಾಗಿ ರಾಜ್ಯದ ಪರ ನಿಲ್ಲಬೇಕು" ಎಂದು ಅವರು ಹೇಳಿದರು.

ಅಂದಿನ ಕಾಲದಲ್ಲೇ ನಮ್ಮ ಮೈಸೂರು ಮಹಾರಾಜರು ಶೈಕ್ಷಣಿಕ, ಸಾಂಸ್ಕೃತಿಕ ಕೊಡುಗೆಯನ್ನು ಈ ರಾಜ್ಯಕ್ಕೆ ನೀಡಿದ್ದಾರೆ. ಅವರು ರಾಜ್ಯದ ಅಭಿವೃದ್ಧಿಗೆ ನೀಡಿದ ಉತ್ತೇಜನ ಯಾರೂ ಸಹ ಮರೆಯಲು ಸಾಧ್ಯವಿಲ್ಲ. ಇತಿಹಾಸ ಮರೆತವನು, ಇತಿಹಾಸ ಸೃಷ್ಟಿಸಲು ಸಾಧ್ಯವಿಲ್ಲ ಎಂದು ಬಾಬಾ ಸಾಹೇಬರು ಹೇಳಿದ್ದಾರೆ" ಎಂದರು.

## ವಿಧಾನಸೌಧದಲ್ಲಿ ಮೊದಲ ಬಾರಿಗೆ 'ಸ್ವಾತಂತ್ರೋತ್ಸವ'

● ವಿಕ್ರಮ ವಾಹಿನಿ | ಬೆಂಗಳೂರು

ಈ ಬಾರಿಯ 79ನೇ ಸ್ವಾತಂತ್ರ್ಯೋತ್ಸವವನ್ನು ವಿಭಿನ್ನವಾಗಿ ಆಚರಿಸಲು ನಿರ್ಧರಿಸಿರುವ ರಾಜ್ಯ ಸರ್ಕಾರಆಗಸ್ಟ್ 15ರಂದು ಇದೇ ಮೊದಲ ಬಾರಿಗೆ ವಿಧಾನಸೌಧದ ಮೆಟ್ಟಿಲುಗಳ ಮೇಲೆ ಸ್ವತಂತ್ರ ಹಬ್ಬ ಹೆಸರಿನಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲು ತೀರ್ಮಾನಿಸಲಾಗಿದೆ.

ಈ ಸಂಬಂಧ ಬೆಂಗಳೂರು ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅವರು ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಕಾರ್ಯಕ್ರಮವನ್ನು ಯಶಸ್ವಿಯಾಗಿ ಹಾಗೂ ಅಚ್ಚುಕಟ್ಟಾಗಿ ಆಯೋಜಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾರೆ.

ಸರ್ಕಾರದ ಯೋಜನೆಯಂತೆ, ಆ. 15ರಂದು ಬೆಳಿಗ್ಗೆ ಮುಖ್ಯಮಂತ್ರಿ ಅವರು ಮಾಣೆಕ್‌ಶಾ ಪರೇಡ್ ಮೈದಾನದಲ್ಲಿ ಧ್ವಜಾರೋಹಣ ನೆರವೇರಿಸಿ ಅಧಿಕೃತ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಬೆಳಿಗ್ಗೆ 11 ಗಂಟೆಯ ನಂತರ ಕಾರ್ಯಕ್ರಮಗಳು ವಿಧಾನಸೌಧದ ಮೆಟ್ಟಿಲುಗಳತ್ತ ಸ್ಥಳಾಂತರವಾಗಲಿದೆ.

ರಾಜ್ಯದ 31 ಜಿಲ್ಲೆಗಳ ಕಲಾವಿದರಿಂದ ವೈವಿಧ್ಯಮಯ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ಇದೇ ಮೊದಲ ಬಾರಿಗೆ ಆಗಸ್ಟ್ 15ರಂದು ವಿಧಾನಸೌಧ ವೀಕ್ಷಣೆಗೆ ಶಾಲಾ ಮಕ್ಕಳು ಹಾಗೂ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗುತ್ತಿದೆ.ಶಾಂತವೇರಿ ಗೋಪಾಲಗೌಡರ ವೃತ್ತದ ಸಮೀಪ ಬೃಹತ್ ವೇದಿಕೆ ನಿರ್ಮಿಸಿ, ಶಾಲಾ ಮಕ್ಕಳು ಹಾಗೂ ವಿವಿಧ ಜಿಲ್ಲೆಗಳಿಂದ ಆಗಮಿಸುವ ಕಲಾವಿದರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತದೆ. ಸಾರ್ವಜನಿಕರು ಈ ಕಾರ್ಯಕ್ರಮಗಳನ್ನು ಉಚಿತವಾಗಿ ವೀಕ್ಷಿಸಬಹುದಾಗಿದೆ.

ಮಕ್ಕಳಿಗಾಗಿ ಚಿತ್ರಕಲೆ ಸ್ಪರ್ಧೆ, ಸ್ವಾತಂತ್ರ್ಯೋತ್ಸವ ಕುರಿತ ಪ್ರಬಂಧ ಸ್ಪರ್ಧೆ ಸೇರಿದಂತೆ ವಿವಿಧ ಸ್ಪರ್ಧೆಗಳು ನಡೆಯಲಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಗುತ್ತದೆ. ಮಧ್ಯಾಹ್ನ 3 ಗಂಟೆಯ ನಂತರ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳು, ಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಂದ ಪಥಸಂಚಲನ ಆಯೋಜಿಸಲಾಗಿದೆ.ನಂತರ ರಾಜ್ಯದ ವಿವಿಧ ಜಿಲ್ಲೆಗಳ ಸ್ತಬ್ಧ ಚಿತ್ರ ಪ್ರದರ್ಶನ ನಡೆಯುತ್ತದೆ.

ಸಂಜೆ 7 ಗಂಟೆಯ ನಂತರ ಪಟಾಕಿ ಪ್ರದರ್ಶನ, ಸಿಡಿಮದ್ದು ಪ್ರದರ್ಶನ, ಗಾಂಧಿ ಪ್ರತಿಮೆ ಎದುರು ಹಾಡು, ನೃತ್ಯ ಹಾಗೂ ಏಕಪಾತ್ರಾಭಿನಯ ಕಾರ್ಯಕ್ರಮಗಳು ನಡೆಯಲಿವೆ. ಈ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಮಕ್ಕಳು ಹಾಗೂ ಸಾರ್ವಜನಿಕರು ಮುಂಚಿತವಾಗಿ ಹೆಸರು ನೋಂದಾಯಿಸಬೇಕಾಗಿದೆ.

ಇಡೀ ಕಾರ್ಯಕ್ರಮವನ್ನು ಯಶಸ್ವಿಯಾಗಿ ನಡೆಸಲು ಪೊಲೀಸ್ ಇಲಾಖೆಗೆ ಬಿಗಿ ಭದ್ರತಾ ವ್ಯವಸ್ಥೆ ಕೈಗೊಳ್ಳುವಂತೆ ಸೂಚನೆ ನೀಡಲಾಗಿದೆ. ಸ್ವಾತಂತ್ರ್ಯೋತ್ಸವವನ್ನು ಈ ಬಾರಿ ರಾಜ್ಯದ ಜನರಿಗೆ ವಿಶಿಷ್ಟ ಅನುಭವವಾಗುವಂತೆ ಆಚರಿಸಲು ಸರ್ಕಾರ ಸಕಲ ಸಿದ್ಧತೆಗಳನ್ನು ನಡೆಸಿದೆ.

ಸಾವಿರಾರು ಜನರು ಭಾಗವಹಿಸುವ ನಿರೀಕ್ಷೆಯಿರುವ ಹಿನ್ನೆಲೆಯಲ್ಲಿ ಸಂಚಾರ, ಪಾರ್ಕಿಂಗ್ ಹಾಗೂ ಭದ್ರತಾ ವ್ಯವಸ್ಥೆಗಳಿಗೆ ವಿಶೇಷ ಕಾರ್ಯಯೋಜನೆ ರೂಪಿಸಲಾಗುತ್ತಿದೆ.

# ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ನಾಲ್ವರು ಮಹನೀಯರಿಗೆ ಇಂದು 'ಅಕ್ಷಯ ರತ್ನ' ಪುರಸ್ಕಾರ

● ವಿಕ್ರಮ ವಾಹಿನಿ | ಬೆಂಗಳೂರು


ವಿವಿಧ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಪ್ರೋತ್ಸಾಹ ನೀಡುವ ದಿಸೆಯಲ್ಲಿ ಅಕ್ಷಯ ವಿಪ್ರ ಮಹಾಸಭಾ ವತಿಯಿಂದ ಈ ಬಾರಿ ನಾಲ್ವರು ಮಹನೀಯರಿಗೆ 'ಅಕ್ಷಯ ರತ್ನ' ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ.




2025-26ನೇ ಸಾಲಿನ "ಅಕ್ಷಯ ರತ್ನ" ಬಿರುದು ಪುರಸ್ಕೃತರಲ್ಲಿ ಎ.ವಿ.ಎಂ. ಎಸ್.ನ ಮಾಜಿ ಅಧ್ಯಕ್ಷರು ಹಾಗೂ ವಕೀಲರಾದ ಎನ್.ಜಿ.ವಾಸುದೇವಮೂರ್ತಿ, ಜಯನಗರ ಎವಿಎಂಎಸ್‌ನ ಉಪಾಧ್ಯಕ್ಷರಾದ ಡಿಪಿಟಿಪಿಜಿಆರ್ ಬಿಜಿಎಸ್‌ನ ಡಾ.ಕೆ. ರಘುನಾಥರಾವ್, ಎವಿಎಂಎಸ್‌ನ ಮಾಜಿ ಉಪಾಧ್ಯಕ್ಷರಾದ ದಿ.ಎಸ್.ರಾಮಕೃಷ್ಣ (ಮರಣೋತ್ತರ), ಬೆಂಗಳೂರು ಗ್ರಾಮಾಂತರ ಹೊಸಕೋಟೆಯ ಎವಿಎಂಎಸ್ ಮಾಜಿ ಉಪಾಧ್ಯಕ್ಷರಾದ ಎನ್. ಕೆ.ಪಣಿರಾಜ್ ಇವರು ಪ್ರಮುಖರಾಗಿದ್ದಾರೆ.

ಆಗಸ್ಟ್ 2 ರಂದು ಭಾನುವಾರ ನಡೆಯಲಿರುವ ಪ್ರಶಸ್ತಿ ಪುರಸ್ಕಾರ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಮುಳಬಾಗಿಲು ಶ್ರೀಪಾದರಾಜಮಠದ ಪೀಠಾಧಿಪತಿಗಳಾದ 1008 ಶ್ರೀ ಶ್ರೀ ಸುಜಯನಿಧಿ ತೀರ್ಥರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯರಾದ ತೇಜಸ್ವಿ ಸೂರ್ಯ, ಜಯನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಕೆ.ರಾಮಮೂರ್ತಿ, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಎಸ್.ರಘುನಾಥ್ ಅವರು ಪಾಲ್ಗೊಳ್ಳಲಿದ್ದಾರೆ.

ಬೆಳಿಗ್ಗೆ 10 ಗಂಟೆಯಿಂದ ಕಾರ್ಯಕ್ರಮಗಳು ಆರಂಭವಾಗಲಿದ್ದು ಮಧ್ಯಾಹ್ನ 2 ಗಂಟೆಯವರೆಗೆ ಜರುಗಲಿವೆ. ಈ ವೇಳೆ ಪ್ರಾರ್ಥನೆ, ಜ್ಯೋತಿ ಬೆಳಗುವುದು, ಸ್ವಾಗತ ಭಾಷಣ, ಗೌರವ ಅಧ್ಯಕ್ಷರಿಂದ ಭಾಷಣ, ಡೈರೆಕ್ಟರಿ ಪುಸ್ತಕ ಬಿಡುಗಡೆ, ಅಧ್ಯಕ್ಷರ ಭಾಷಣ ಜರುಗಲಿದೆ. ಸಂಜೆ 5-30ರವರೆಗೆ ನಡೆಯುವ ಕಾರ್ಯಕ್ರಮದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ಕೂಡ ನಡೆಯಲಿವೆ. ಈ ನಡುವೆ 85 ವರ್ಷ ತುಂಬಿದ ವೃದ್ಧರಿಗೆ, 70 ವರ್ಷದ ದಂಪತಿಗಳಿಗೆ, ವಿವಿಧ ಕ್ಷೇತ್ರದ ಸಾಧಕರಿಗೆ ಸನ್ಮಾನ ಮಾಡಲಾಗುತ್ತದೆ. ಜೊತೆಗೆ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಂಘದ ಸದಸ್ಯರುಗಳಿಗೆ ಸನ್ಮಾನ ಇರಲಿದೆ.





ಅಕ್ಷಯ ವಿಪ್ರ ಮಹಾಸಭೆಯು ಹಲವು ವರ್ಷಗಳಿಂದ ಶಿಕ್ಷಣ, ಸಮಾಜಸೇವೆ, ವೈದ್ಯಕೀಯ, ಕಾನೂನು, ಸಾಂಸ್ಕೃತಿಕ ಹಾಗೂ ಸಾರ್ವಜನಿಕ ಜೀವನದಲ್ಲಿ ಗಣನೀಯ ಸೇವೆ ಸಲ್ಲಿಸಿರುವ ಸಾಧಕರನ್ನು ಗುರುತಿಸಿ ಗೌರವಿಸುವ ಪರಂಪರೆಯನ್ನು ಮುಂದುವರಿಸಿಕೊಂಡು ಬಂದಿದೆ. ಈ ಬಾರಿಯ ಕಾರ್ಯಕ್ರಮದಲ್ಲಿಯೂ ವಿವಿಧ ವಯೋಮಾನದ ಸಾಧಕರು, ವಿದ್ಯಾರ್ಥಿಗಳು ಹಾಗೂ ಸಮಾಜಸೇವಕರನ್ನು ಸನ್ಮಾನಿಸುವ ಮೂಲಕ ಸಮಾಜಮುಖಿ ಸೇವೆ ಮತ್ತು ಪ್ರತಿಭೆಗೆ ಉತ್ತೇಜನ ನೀಡುವ ಉದ್ದೇಶವನ್ನು ಮಹಾಸಭೆ ಹೊಂದಿದೆ.

ಬಳಿಕ ವಂದನಾರ್ಪಣೆಯ ಮೂಲಕ ಕಾರ್ಯಕ್ರಮ ಸಂಪನ್ನಗೊಳ್ಳಲಿದೆ.





ಈ ಸಮಾರಂಭಕ್ಕೆ ಅಕ್ಷಯ ವಿಪ್ರ ಮಹಾಸಭಾದ ಅಧ್ಯಕ್ಷರಾದ ಎನ್. ಕೆ.ರಾಮಚಂದ್ರರಾವ್, ಗೌರವಾಧ್ಯಕ್ಷರಾದ ಡಾ.ಎನ್.ಕೀರ್ತಿರಾಜ್, ಉಪಾಧ್ಯಕ್ಷರಾದ ಕೆ.ಆನಂದರಾವ್, ಡಾ.ಕಿರಣ್ ಎಸ್. ಮೂರ್ತಿ, ಡಾ.ಕೆ.ರಘುನಾಥರಾವ್, ಲಕ್ಷೀಶ, ವಿ.ಶ್ರೀಪ್ರಕಾಶ್, ಪ್ರಧಾನ ಕಾರ್ಯದರ್ಶಿಗಳಾದ ಕೆ.ರಾಘವೇಂದ್ರರಾವ್, ಕಾರ್ಯದರ್ಶಿಗಳಾದ ಎನ್.ಎಸ್.ಸುಧೀಂದ್ರ ರಾವ್, ಜಂಟಿ ಕಾರ್ಯದರ್ಶಿಗಳಾದ ಮಹೇಶ್ ಕುಮಾರ್ ಆರ್., ಟಿ.ಎನ್.ಶಾಂತ ಕುಮಾರ್., ಎನ್.ಪಿ.ಮಂಜುನಾಥ್, ಎಲ್.ಜಗನ್ನಾಥ್, ಆರ್.ಶ್ರೀನಿವಾಸ್, ಎನ್.ರಾಘವೇಂದ್ರ ರಾವ್, ಆಂತರಿಕ ಲೆಕ್ಕ ಪರಿಶೋಧಕರಾದ ಎನ್.ಜೆ.ಮಣಿಕುಮಾರ್, ಕಾನೂನು ಸಲಹೆಗಾರರಾದ ಎ.ವಿಜಯಕುಮಾರ್ ಭಟ್, ಖಜಾಂಚಿಗಳಾದ ಎನ್.ರಾಘವೇಂದ್ರರಾವ್ ಮತ್ತು ಕಾರ್ಯಕಾರಿ ಸದಸ್ಯರು ಸ್ವಾಗತಿಸಿದ್ದಾರೆ.

# ಭಾರತದ ಪ್ರಗತಿ ಕರ್ನಾಟಕದ ಜತೆ ಜತೆಯಲ್ಲೇ ಆಗಬೇಕು: ಡಿ.ಕೆ.ಶಿ

**ಭಾರತದ ಪ್ರಗತಿಗೆ ಕರ್ನಾಟಕದ ಅಭಿವೃದ್ಧಿ ಅತ್ಯಗತ್ಯ ಎಂದು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮನವಿ ಮಾಡಿದರು. ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ನಡೆದ ವಿವೇಕ ಸ್ಮಾರಕ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ–ರಾಜ್ಯಗಳು ಕೈಜೋಡಿಸಿ ಕೆಲಸ ಮಾಡಬೇಕಿದ್ದು, ಕರ್ನಾಟಕಕ್ಕೆ ಉದಾರ ಮನೋಭಾವದಿಂದ ನೆರವು ನೀಡಬೇಕು ಎಂದು ಆಗ್ರಹಿಸಿದರು. ಯುವಶಕ್ತಿ, ವಿವೇಕಾನಂದರ ಆದರ್ಶಗಳು ಹಾಗೂ ಕರ್ನಾಟಕದ ಅಭಿವೃದ್ಧಿಯೇ ದೇಶದ ಬೆಳವಣಿಗೆಗೆ ಬುನಾದಿ ಎಂದರು. ಕರ್ನಾಟಕವು ವಿಜ್ಞಾನ, ತಂತ್ರಜ್ಞಾನ, ಶಿಕ್ಷಣ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ದೇಶಕ್ಕೆ ಮುಂಚೂಣಿ ಕೊಡುಗೆ ನೀಡುತ್ತಿದೆ ಎಂದು ಅವರು ಹೇಳಿದರು. ಯುವಕರಿಗೆ ಅವಕಾಶಗಳು ಮತ್ತು ಮೂಲಸೌಕರ್ಯವನ್ನು ಇನ್ನಷ್ಟು ಬಲಪಡಿಸಿದರೆ ರಾಜ್ಯವು ಜಾಗತಿಕ ಮಟ್ಟದಲ್ಲಿ ಇನ್ನಷ್ಟು ಸಾಧನೆ ಮಾಡಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.**

● ವಿಕ್ರಮ ವಾಹಿನಿ । ಮೈಸೂರು

ಭಾರತ ಪ್ರಗತಿ ಸಾಧಿಸಬೇಕಾದರೆ, ಕರ್ನಾಟಕದೊಂದಿಗೆ ಪ್ರಗತಿ ಸಾಧಿಸಬೇಕು. ನಾವು ಒಕ್ಕೂಟ ವ್ಯವಸ್ಥೆಯಲ್ಲಿ ಒಟ್ಟಾಗಿ ಕೆಲಸ ಮಾಡೋಣ, ಕರ್ನಾಟಕ್ಕೆ ನೆರವು ನೀಡುವಾಗ ಹೃದಯ ವೈಶಾಲ್ಯತೆಯಿಂದ ನೆರವು ನೀಡಿ" ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದರು.

ಮೈಸೂರಿನ ರಾಮಕೃಷ್ಣ ವಿದ್ಯಾಶಾಲೆಯಲ್ಲಿ ವಿವೇಕ ಸ್ಮಾರಕ ಉದ್ಘಾಟನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಶನಿವಾರ ಮಾತನಾಡಿದರು.

"ವಿವೇಕಾನಂದರ ತ್ಯಾಗ ನಮಗೆ ಸ್ಫೂರ್ತಿಯಾಗಬೇಕಿದೆ. ಅವರ ಶಕ್ತಿಯನ್ನು ನಾವು ಅಳವಡಿಸಿಕೊಳ್ಳಬೇಕಿದೆ. ಈ ಕಾರ್ಯಕ್ರಮ ಯುವ ಕ್ರಾಂತಿಯ ಐತಿಹಾಸಿಕ ಘಳಿಗೆಯಾಗಿದೆ. ನೀವು ಸೋತಾಗ ಧೈರ್ಯವಾಗಿರಿ, ನೀವು ಗೆದ್ದಾಗ ಹೃದಯ ವೈಶಾಲ್ಯತೆ ಹೊಂದಿರಬೇಕು ಎಂದು ವಿವೇಕಾನಂದ ಅವರು ಸಂದೇಶ ನೀಡಿದ್ದಾರೆ" ಎಂದು ತಿಳಿಸಿದರು.

"ಇಡೀ ವಿಶ್ವ ಕರ್ನಾಟಕದತ್ತ ತಿರುಗಿ ನೋಡುತ್ತಿದೆ. ಇಡೀ ಭಾರತವನ್ನು ಕರ್ನಾಟಕ ಹಾಗೂ ಬೆಂಗಳೂರು ಮೂಲಕ ನೋಡಲಾಗುತ್ತಿದೆ. ಅಟಲ್ ಬಿಹಾರಿ ವಾಜಪೇಯಿ ಅವರು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಶಂಕುಸ್ಥಾಪನೆಗಾಗಿ ಬೆಂಗಳೂರಿಗೆ ಬಂದಾಗ, ಇಷ್ಟು ದಿನ ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ಬೇರೆ ನಗರಗಳಿಗೆ ಹೋಗುತ್ತಿದ್ದರು.

ಆದರೆ ಈಗ ಕಾಲ ಬದಲಾಗಿದೆ, ವಿಶ್ವದ ನಾಯಕರು ಮೊದಲು ದೆಹಲಿಗೆ ಬಂದು ನಂತರ ದೇಶದ ಬೇರೆ ನಗರಗಳಿಗೆ ಹೋಗುತ್ತಾರೆ ಎಂದು ಹೇಳಿದ್ದರು. ಆಗ ಇದೇ ಸಂಸ್ಥೆಯಲ್ಲಿ ಓದಿದ್ದ ಎಸ್ ಎಂ ಕೃಷ್ಣ ಅವರು ಮುಖ್ಯಮಂತ್ರಿಗಳಾಗಿದ್ದರು" ಎಂದು ಹೇಳಿದರು.

**ಒಕ್ಕೂಟ ವ್ಯವಸ್ಥೆಯಲ್ಲಿ ನಾವು ಒಟ್ಟಾಗಿ ಕೆಲಸ ಮಾಡೋಣ**

"ನಮ್ಮಲ್ಲಿರುವ ಹವಾಮಾನ, ಸಂಸ್ಕೃತಿ ನಮ್ಮ ಶಕ್ತಿ. ಒಕ್ಕೂಟ ವ್ಯವಸ್ಥೆಯಲ್ಲಿ ನಾವು ಕೆಲಸ ಮಾಡುತ್ತಿದ್ದು ನಮ್ಮ ರಾಜ್ಯ ನಿಮ್ಮ ಜೊತೆಗೆ ನಿಲ್ಲುತ್ತದೆ. ನಾವು ಒಟ್ಟಾಗಿ ಕೆಲಸ ಮಾಡಬೇಕು" ಎಂದು ಕರೆ ನೀಡಿದರು.



**ಕರ್ನಾಟಕ ಸಂಕಲ್ಪ ಭೂಮಿ:** "ಇದು ಸಂಕಲ್ಪ ಭೂಮಿ. ವಿವೇಕಾನಂದರು ಮೈಸೂರಿನಿಂದ ವಿದೇಶಕ್ಕೆ ಪ್ರಯಾಣ ಮಾಡುವಾಗ ಜೇಮ್ ಷೆಡ್ ಜೀ ಟಾಟಾ ಅವರಿಗೆ ಒಂದು ಮಾತು ಹೇಳಿದ್ದರು. ಇದು ಬಡ ರಾಷ್ಟ್ರ ಇಲ್ಲಿ ವಿಜ್ಞಾನ ಸಂಸ್ಥೆಗಳು ಆರಂಭವಾಗಬೇಕು ಎಂದು ಹೇಳಿದರು. ನಂತರ ಟಾಟಾ ಅವರು ಮಹಾರಾಜರಿಗೆ ಈ ವಿಚಾರ ತಿಳಿಸಿದರು.

ನಂತರ ಮಹಾರಾಜರು ಬೆಂಗಳೂರಿನಲ್ಲಿ 300 ಎಕರೆ ಜಾಗ ನೀಡಿದರು. ಅಲ್ಲೇ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸೈನ್ಸ್ ಪ್ರಾರಂಭ ಮಾಡಲಾಗಿದೆ. ಇದು ಈ ದೇಶದ ವಿಜ್ಞಾನಕ್ಕೆ ಮೈಸೂರು ಮಹಾರಾಜರ ಕೊಡುಗೆ" ಎಂದು ಹೇಳಿದರು.

**ವಿವೇಕಾನಂದರ ಆಲೋಚನೆಯೇ ನಮ್ಮ ಸರ್ಕಾರದ ಆಲೋಚನೆ:** "ಇದು ಐತಿಹಾಸಿಕ ಕಾರ್ಯಕ್ರಮ. ಯುವಶಕ್ತಿ, ಯುವ ಆಲೋಚನೆ, ಯುವ ಚಿಂತನೆ. ನಾನು ನನ್ನ ಬದುಕಿನಲ್ಲಿ ಅಳವಡಿಸಿಕೊಳ್ಳಲು ಪ್ರಯತ್ನಿಸಿದ್ದೆ. ಈ ಹೊಸ ಚಿಂತನೆ ಬದಲಾವಣೆಯ ಆರಂಭ, ಯುವಕರ ಕನಸು, ದೇಶದ ಕನಸು. ನಾವು ಇಬ್ಬರು ಯುವಕರನ್ನು ಗಮನಿಸಿದ್ದೇವೆ. ಸ್ವಾಮಿ ವಿವೇಕಾನಂದ ಅವರ ಮಾರ್ಗದರ್ಶನದಲ್ಲಿ ರಾಮಕೃಷ್ಣ ವಿದ್ಯಾಶಾಲೆಯ ಎಲ್ಲಾ ಯುವ ವಿದ್ಯಾರ್ಥಿಗಳಿಗೆ ನಮನಗಳು" ಎಂದರು.

"ನಮ್ಮ ಸರ್ಕಾರ ಕೂಡ ವಿವೇಕಾನಂದರ ಆಲೋಚನೆ ಹೊಂದಿದೆ. ಯುವ ಯುಗ, ನವ ಯುಗ ನಮ್ಮ ಸರ್ಕಾರದ ಘೋಷಣೆ. ನಾವು ಟೀಮ್ ಕರ್ನಾಟಕವಾಗಿ ಕೆಲಸ ಮಾಡಬೇಕು. ಪಂಚಾಯಿತಿ ಹಾಗೂ ವಾರ್ಡ್ ಮಟ್ಟದಲ್ಲಿ ಯುವಕರು ಒಂದಾಗಬೇಕು, ಅವರ ಕಲೆ, ಕ್ರೀಡೆ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಲು ಯುವಕರ ಸಂಘ ಸ್ಥಾಪಿಸಲು ಮುಂದಾಗಿದ್ದೇವೆ" ಎಂದರು.

"ಹಳ್ಳಿ ಹಾಗೂ ನಗರ ಪ್ರದೇಶಗಳಲ್ಲಿ ನಮ್ಮ ಯುವಕರನ್ನು ಸದುಪಯೋಗಪಡಿಸಿಕೊಳ್ಳಬೇಕು. ಆಮೂಲಕ ಯುವಕರ ಮಾನಸಿಕ ಹಾಗೂ ದೈಹಿಕ ಶಕ್ತಿ ವೃದ್ಧಿಗೆ ಕೆಲಸ ಮಾಡಬೇಕಿದೆ. ಮೈಸೂರು ಇತಿಹಾಸ, ವಿಶ್ವದ ಇತಿಹಾಸ.

ವಿವೇಕಾನಂದ ಅವರು 1893ರಲ್ಲಿ ಮೈಸೂರಿನಿಂದ ಹೆಜ್ಜೆ ಹಾಕಿ, ಮಹಾರಾಜರ ಪ್ರೋತ್ಸಾಹದಿಂದ ವಿದೇಶಕ್ಕೆ ಹೋಗಿ ನನ್ನ ಸಹೋದರ, ಸಹೋದರಿಯರೇ ಎಂದು ಭಾಷಣ ಮಾಡಿ ವಿಶ್ವದ ಗಮನ ಸೆಳೆದಿದ್ದರು. ಅವರಿಗೆ ಸಹಕಾರ ಕೊಟ್ಟ ಮಹಾರಾಜರಿಗೆ ನಮನಗಳನ್ನು ಸಲ್ಲಿಸುತ್ತೇನೆ" ಎಂದು ಸ್ಮರಿಸಿದರು.

"ವಿವೇಕಾನಂದ ಸಾಂಸ್ಕೃತಿಕ ಕೇಂದ್ರವನ್ನು ಅನಾವರಣ ಮಾಡಿದ್ದಾರೆ. ಇದು ದೇಶದ ಆಸ್ತಿ. ದೇಶದ ಯುವಕರನ್ನು ಸರಿಯಾದ ಹಾದಿಯಲ್ಲಿ ಕೊಂಡೊಯ್ಯಲು ಕಾರ್ಯಕ್ರಮ ರೂಪಿಸಿದ್ದಾರೆ.

ಕರ್ನಾಟಕದ ಅಭಿವೃದ್ಧಿ ದೇಶದ ಆರ್ಥಿಕ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಲಿದ್ದು, ಮೂಲಸೌಕರ್ಯ, ಕೈಗಾರಿಕೆ, ಶಿಕ್ಷಣ ಹಾಗೂ ಉದ್ಯೋಗ ಸೃಷ್ಟಿ ಕ್ಷೇತ್ರಗಳಲ್ಲಿ ಕೇಂದ್ರ ಸರ್ಕಾರದಿಂದ ಹೆಚ್ಚಿನ ಬೆಂಬಲ ದೊರೆಯಬೇಕು ಎಂದು ಮನವಿ ಮಾಡಿದರು. ಯುವಶಕ್ತಿ, ನಾವೀನ್ಯತೆ ಮತ್ತು ಸಹಕಾರದ ಮೂಲಕ ಕರ್ನಾಟಕವನ್ನು ಇನ್ನಷ್ಟು ಅಭಿವೃದ್ಧಿಪಡಿಸುವ ಸಂಕಲ್ಪವನ್ನು ರಾಜ್ಯ ಸರ್ಕಾರ ಹೊಂದಿದೆ ಎಂದರು.

ಈ ಸಂಸ್ಥೆಗೆ ರಾಜ್ಯದ ಪರವಾಗಿ ಅಭಿನಂದನೆ ಸಲ್ಲಿಸುತ್ತೇನೆ. ಈ ಸಂದರ್ಭದಲ್ಲಿ ಪುರಂದರ ದಾಸರ ಪದಗಳು ನೆನಪಿಗೆ ಬರುತ್ತಿವೆ. ಇದು ಭಾಗ್ಯ ಇದು ಭಾಗ್ಯ, ಇದು ಭಾಗ್ಯವಯ್ಯಾ, ಪದುಭನಾಭನ ಪಾದ ಭಜನೆ ಪರಮ ಸುಖವಯ್ಯಾ ಎಂದು ದಾಸರು ಹೇಳಿದ್ದಾರೆ. ಈ ಕಾರ್ಯಕ್ರಮದಲ್ಲಿ ಭಾಗಿಯಾಗಿರುವುದು ನಮ್ಮ ಭಾಗ್ಯ" ಎಂದು ತಿಳಿಸಿದರು.

## ರಾಜ್ಯನಾಯಕರನ್ನು ಮಂಡಿ ಊರುವಂತೆ ಮಾಡಿದ ಹೈಕಮಾಂಡ್ ನಡೆಗೆ ಭಾರೀ ಅಸಮಾಧಾನ

● ವಿಕ್ರಮ ವಾಹಿನಿ । ಬೆಂಗಳೂರು


ರಾಜ್ಯ ಸಚಿವ ಸಂಪುಟ ವಿಸ್ತರಣೆ ವಿಳಂಬವಾಗಿರುವ ಬೆನ್ನಲ್ಲೇ ಕಾಂಗ್ರೆಸ್‌ನಲ್ಲಿ ಆಂತರಿಕ ಅಸಮಾಧಾನದ ಮಾತುಗಳು ಕೇಳಿಬರುತ್ತಿವೆ. ಸಚಿವ ಸಂಪುಟ ವಿಸ್ತರಣೆ ಹಾಗೂ ಖಾತೆ ಹಂಚಿಕೆ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ರಾಜ್ಯ ನಾಯಕರು ದೆಹಲಿಯಲ್ಲಿ ಹಲವು ಸುತ್ತಿನ ಸಭೆ ನಡೆಸಿದರೂ ಅಂತಿಮ ತೀರ್ಮಾನವಾಗದಿರುವುದು ಕೆಲ ನಾಯಕರಲ್ಲಿ ಬೇಸರಕ್ಕೆ ಕಾರಣವಾಗಿದೆ ಎನ್ನಲಾಗಿದೆ. ರಾಜ್ಯ ಸರ್ಕಾರದ ಪ್ರಮುಖ ನಿರ್ಧಾರಗಳಿಗೂ ಹೈಕಮಾಂಡ್ ಅನುಮತಿ ಕಡ್ಡಾಯವಾಗಿರುವುದು ಹಾಗೂ ರಾಜ್ಯ ನಾಯಕರು ಹಲವು ದಿನ ದೆಹಲಿಯಲ್ಲಿ ಕಾಯಬೇಕಾದ ಪರಿಸ್ಥಿತಿ ಉಂಟಾಗಿರುವುದರ ಬಗ್ಗೆ ಪಕ್ಷದೊಳಗೆ ಅಸಮಾಧಾನ ವ್ಯಕ್ತವಾಗುತ್ತಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಆದರೆ ಈ ಕುರಿತು ಯಾವುದೇ ನಾಯಕರು ಬಹಿರಂಗವಾಗಿ ಪ್ರತಿಕ್ರಿಯಿಸಿಲ್ಲ.

ಇದೇ ವೇಳೆ, ಬಿಜೆಪಿ ಹಾಗೂ ಜೆಡಿಎಸ್ ಕಾಂಗ್ರೆಸ್ ಹೈಕಮಾಂಡ್ ಧೋರಣೆಯನ್ನು ಟೀಕಿಸಿದ್ದು, ಜನಾದೇಶ ಪಡೆದ ರಾಜ್ಯ ಸರ್ಕಾರವನ್ನು ದೆಹಲಿಯಿಂದಲೇ ನಿಯಂತ್ರಿಸ ಲಾಗುತ್ತಿದೆ ಎಂದು ಆರೋಪಿಸಿವೆ. ಇನ್ನೊಂದೆಡೆ, ಕಾಂಗ್ರೆಸ್ ವರಿಷ್ಠರು ಶೀಘ್ರದಲ್ಲೇ ಸಚಿವ ಸಂಪುಟ ವಿಸ್ತರಣೆ ಕುರಿತು ಅಂತಿಮ ತೀರ್ಮಾನ ಪ್ರಕಟಿಸುವ ನಿರೀಕ್ಷೆಯಿದೆ.

## ಮಾಜಿ ಸೇನಾ ಮುಖ್ಯಸ್ಥ ವಿಶ್ವನಾಥ್ ಶರ್ಮಾ ನಿಧನ

● ವಿಕ್ರಮ ವಾಹಿನಿ । ನವದೆಹಲಿ

1965ರಲ್ಲಿ ನಡೆದಿದ್ದ ಭಾರತ–ಪಾಕಿಸ್ತಾನದ ಯುದ್ಧದಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಶರ್ಮಾ (96) ಅವರು 1988ರಿಂದ 1990ರವರೆಗೆ ದೇಶದ ಸೇನಾ ಮುಖ್ಯಸ್ಥರಾಗಿದ್ದರು. 1950ರಲ್ಲಿ ಸೇನೆಗೆ ಸೇರಿದ್ದ ಶರ್ಮಾ ಅವರು 1965ರ ಯುದ್ಧಕ್ಕೆ ಮೊದಲು ಬ್ರಿಗೇಡಿಯರ್ ಆಗಿ ಪದೋನ್ನತಿ ಪಡೆದಿದ್ದರು. ದೇಶಕ್ಕೆ ಸಲ್ಲಿಸಿದ ವಿಶೇಷ ಸೇವೆಗಾಗಿ 1977ರಲ್ಲಿ ಅತಿ ವಿಶಿಷ್ಠ ಸೇವಾ ಪದಕವನ್ನು ಪಡೆದಿದ್ದರು. 1984ರಲ್ಲಿ ಲೆಫ್ಟಿನೆಂಟ್ ಜನರಲ್ ಆಗಿದ್ದ ಶರ್ಮಾ ಅವರಿಗೆ ಪರಮ ವಿಶಿಷ್ಟ ಸೇವಾ ಪದಕ ಲಭಿಸಿತ್ತು. 'ಸ್ವತಂತ್ರ ಭಾರತದ ಮೊದಲ ಪರಮವೀರ ಚಕ್ರ ಪುರಸ್ಕೃತ ಮೇಜರ್ ಸೋಮನಾಥ ಶರ್ಮ ಕಿರಿಯ ಸಹೋದರ ವಿಶ್ವನಾಥ್ ತಮ್ಮ ಕುಟುಂಬದ ಶೌರ್ಯ ಮತ್ತು ನಿಸ್ವಾರ್ಥ ಸೇವೆಯ ಪರಂಪರೆಯನ್ನು ಎತ್ತಿಹಿಡಿದಿದ್ದರು' ಎಂದು ಸೇನೆ ತಿಳಿಸಿದೆ.



## ಪೊಲೀಸ್ ನೇಮಕ ಪರೀಕ್ಷೆ: ಕೆಇಎ ಕಟ್ಟುನಿಟ್ಟಿನ ಮಾರ್ಗಸೂಚಿ

● ವಿಕ್ರಮ ವಾಹಿನಿ । ಬೆಂಗಳೂರು

ಇಂದು ನಡೆಯಲಿರುವ ಪೊಲೀಸ್ ಕಾನ್ಸ್‌ಟೆಬಲ್ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸುವ ಉದ್ದೇಶದಿಂದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಭ್ಯರ್ಥಿಗಳಿಗೆ ಕಟ್ಟುನಿಟ್ಟಿನ ಮಾರ್ಗಸೂಚಿ ಪ್ರಕಟಿಸಿದೆ. ಪರೀಕ್ಷಾ ಕೇಂದ್ರಗಳಿಗೆ ಮೊಬೈಲ್ ಫೋನ್, ಸ್ಮಾರ್ಟ್‌ವಾಚ್, ಬ್ಲೂಟೂತ್ ಸಾಧನಗಳು, ಇಯರ್‌ಫೋನ್, ಕ್ಯಾಲ್ಕುಲೇಟರ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ ಉಪಕರಣಗಳನ್ನು ತರಲು ಅವಕಾಶ ಇರುವುದಿಲ್ಲ ಎಂದು ತಿಳಿಸಿದೆ.

ನೀರಿನ ಬಾಟಲಿ, ಆಹಾರ ಪದಾರ್ಥಗಳು, ಚಾಕೊಲೇಟ್, ಬಿಸ್ಕತ್ ಸೇರಿದಂತೆ ಯಾವುದೇ ಆಹಾರ ವಸ್ತುಗಳು, ಪುಸ್ತಕಗಳು, ಚೀಟಿಗಳು, ಜ್ಯಾಮಿತ್ರಿ ಬಾಕ್ಸ್, ಪೆನ್ಸಿಲ್ ಬಾಕ್ಸ್, ಪ್ಲಾಸ್ಟಿಕ್ ಪೌಚ್, ಸ್ಕೇಲ್, ಲಾಗ್ ಟೇಬಲ್ ಹಾಗೂ ಇತರೆ ಬರವಣಿಗೆ ಸಾಮಗ್ರಿಗಳನ್ನೂ ನಿಷೇಧಿಸಲಾಗಿದೆ. ಶೂ, ಬೂಟು, ಕ್ಯಾಪ್, ಮುಖ ಮುಚ್ಚುವ ಉಡುಪು, ಬ್ಯಾಗ್, ಪರ್ಸ್ ಹಾಗೂ ಹೆಚ್ಚು ಜೇಬುಗಳಿರುವ ಪ್ಯಾಂಟ್ ಧರಿಸದಂತೆ ಸೂಚಿಸಲಾಗಿದೆ.

ಅಭ್ಯರ್ಥಿಗಳು ಪ್ರವೇಶ ಪತ್ರ, ಮೂಲ ಗುರುತಿನ ಚೀಟಿ ಹಾಗೂ ಸಂಬಂಧಿತ ದಾಖಲೆಗಳನ್ನು ಕಡ್ಡಾಯವಾಗಿ ತರಬೇಕು. ಸಮಯಕ್ಕಿಂತ ಮುಂಚಿತವಾಗಿ ಪರೀಕ್ಷಾ ಕೇಂದ್ರಕ್ಕೆ ಹಾಜರಾಗುವಂತೆ ಸೂಚಿಸಲಾಗಿದೆ. ಧಾರ್ಮಿಕ ಉಡುಪು ಧರಿಸಿ ಪರೀಕ್ಷೆ ಬರೆಯುವ ಅಭ್ಯರ್ಥಿಗಳು ಪರೀಕ್ಷೆ ಆರಂಭಕ್ಕೂ 2.30 ಗಂಟೆ ಮೊದಲು ವಸ್ತ್ರ ಸಂಹಿತೆ ಅಧಿಕಾರಿಯ ಪರಿಶೀಲನೆಗೆ ಹಾಜರಾಗಬೇಕು ಎಂದು ಕೆಇಎ ತಿಳಿಸಿದೆ. ಪುರುಷರು ಜನಿವಾರ, ರುದ್ರಾಕ್ಷಿ, ತಾಯತ ಸೇರಿದಂತೆ ಧಾರ್ಮಿಕ ಚಿಹ್ನೆಗಳನ್ನು ಹಾಗೂ ಮಹಿಳೆಯರು ಮಾಂಗಲ್ಯ, ಬಳೆ, ಮೂಗುತಿ, ಉಂಗುರ, ಕುಂಕುಮ ಮೊದಲಾದವುಗಳನ್ನು ಧರಿಸಲು ಅವಕಾಶ ನೀಡಲಾಗಿದೆ. ಏಇಂ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಪರೀಕ್ಷೆ ಸುಗಮವಾಗಿ ನಡೆಯಲು ಸಹಕರಿಸುವಂತೆ ಅಭ್ಯರ್ಥಿಗಳಿಗೆ ಮನವಿ ಮಾಡಿದೆ.

## ಗ್ರಾ.ಅ.ಪಂ.ರಾ. ಇಲಾಖೆ–ಶೀಘ್ರವೇ 1400 ಹುದ್ದೆಗಳ ಭರ್ತಿ: ಈಶ್ವರ ಖಂಡ್ರೆ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಅಧಿಕಾರಿಗಳ ಹುದ್ದೆ, ಅಧಿಕಾರ, ದರ್ಪ ಚಲಾವಣೆಗೆ ಅಲ್ಲ, ಬದಲಾಗಿ ಅದು ಜನಸೇವೆ ಮಾಡಲು ಸಿಕ್ಕ ಅವಕಾಶ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಹೇಳಿದ್ದಾರೆ.

ಕಲ್ಯಾಣ ಕರ್ನಾಟಕ ವೃಂದದ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗೆ ಹೊಸದಾಗಿ ನೇಮಕಗೊಂಡಿರುವ 66 ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ವಿತರಿಸಿ, ಪ್ರಾಮಾಣಿಕತೆ, ದಕ್ಷತೆ ಮತ್ತು ನಿಷ್ಠೆಯ ಪ್ರಮಾಣ ವಚನ ಭೋಧಿಸಿ ಮಾತನಾಡಿ ಅವರು, ರಾಜ್ಯದಲ್ಲಿರುವ ಎಲ್ಲ 5927 ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಗಳು ಸ್ವಾರ್ಥ ಮರೆತು, ಇಚ್ಛಾಶಕ್ತಿಯಿಂದ ಕೆಲಸ ಮಾಡಿದರೆ ಪ್ರತಿ ಗ್ರಾಮವೂ ಆದರ್ಶಗ್ರಾಮವಾಗುತ್ತದೆ ಎಂದರು.

ಗ್ರಾಮೀಣ ಪ್ರದೇಶದಲ್ಲಿ ನಗರ, ಪಟ್ಟಣಗಳಲ್ಲಿರುವಂತೆ ಮೂಲಭೂತ ಸೌಕರ್ಯ ನೀಡಿದರೆ ವಲಸೆ ತಡೆಯಲು ಸಾಧ್ಯವಾಗುತ್ತದೆ. ಗ್ರಾಮಗಳ ಅಭಿವೃದ್ಧಿಯೂ ಆಗುತ್ತದೆ, ನಗರಗಳ ಮೇಲಿನ ಒತ್ತಡವೂ ತಗ್ಗುತ್ತದೆ ಎಂದು ಈಶ್ವರ ಖಂಡ್ರೆ ಹೇಳಿದರು.

ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕುಡಿಯುವ ನೀರು ಪೂರೈಕೆ, ಗ್ರಾಮೀಣ ರಸ್ತೆ ಅಭಿವೃದ್ಧಿ, ಸ್ವಚ್ಛತೆ, ಗ್ರಾಮೀಣ ವಸತಿ, ಇ–ಸ್ವತ್ತು ಮೊದಲಾದ ಕಾರ್ಯಗಳನ್ನು ನಿಷ್ಠೆಯಿಂದ, ವಿಳಂಬವಿಲ್ಲದೆ ಮಾಡಬೇಕು. ಗ್ರಾಮೀಣ ಜನರು ಪಂಚಾಯತಿ ಕಚೇರಿಗೆ ಅಲೆಯದ ರೀತಿಯಲ್ಲಿ ನಿಷ್ಠೆಯಿಂದ ಕೆಲಸ ಮಾಡಬೇಕು ಎಂದರು.

ಉಳಿಕೆ ವೃಂದದಲ್ಲಿ 150 ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಆಯ್ಕೆಯಾಗಿದ್ದು, 3 ತಿಂಗಳ ಒಳಗಾಗಿ ವೈದ್ಯಕೀಯ ಪರೀಕ್ಷೆ, ಮೂಲ ಪ್ರಮಾಣ ಪತ್ರಗಳ ಪರಿಶೀಲನೆ ಪ್ರಕ್ರಿಯೆ ಮುಗಿಸಿ ನೇಮಕಾತಿ ಪತ್ರ ನೀಡಲಾಗುವುದು ಎಂದೂ ಈಶ್ವರ ಖಂಡ್ರೆ ತಿಳಿಸಿದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಅವರಿಂದು ಕಲ್ಯಾಣ ಕರ್ನಾಟಕ ವೃಂದದ 76 ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೇಮಕಾತಿ ಪತ್ರಗಳನ್ನು ವಿತರಿಸಿ, ನಿಷ್ಠೆ, ಪ್ರಾಮಾಣಿಕತೆ ಮತ್ತು ದಕ್ಷತೆಯ ಪ್ರಮಾಣ ವಚನ ಬೋಧಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತರಾದ ಡಾ.ಅರುಂಧತಿ ಚಂದ್ರಶೇಖರ್ ಮತ್ತಿತರರು ಪಾಲ್ಗೊಂಡಿದ್ದರು.

ಹೊಸದಾಗಿ ನೇಮಕಗೊಂಡಿರುವ ಎಲ್ಲ ಪಿಡಿಓಗಳಿಗೆ ತರಬೇತಿ ನೀಡಿ, ಸ್ಥಳ ನಿಯೋಜನೆ ಮಾಡಲಾಗುವುದು ಎಂದ ಅವರು, 80 ಪಿಡಿಓಗಳ ವರ್ಗಾವಣೆಯನ್ನು ಕೌನ್ಸೆಲಿಂಗ್ ಮೂಲಕ ಪಾರದರ್ಶಕವಾಗಿ ಮಾಡಲಾಗಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರ ಮಹಾತ್ಮಾ ಗಾಂಧೀ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಿಂದ ಮಹಾತ್ಮಾ ಗಾಂಧೀ ಹೆಸರು ತೆಗೆದುಹಾಕಿದೆ. ರಾಷ್ಟ್ರಪಿತನಿಗೆ ಅವಮಾನ ಮಾಡಿದೆ. ರಾಜ್ಯ ಸರ್ಕಾರ ಎಲ್ಲ 5927 ಗ್ರಾಮ ಪಂಚಾಯತಿಗಳಿಗೂ ಮಹಾತ್ಮಾ ಗಾಂಧೀ ಹೆಸರಿಡಲು ತೀರ್ಮಾನಿಸಿದ್ದು, ಫಲಕ ಬದಲಾವಣೆ ಮಾಡಲು ಆ.15ರ ಗಡುವು ನೀಡಲಾಗಿದೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.

ಕಾವೇರಿ ನದಿ ನೀರಿನ ಹಂಚಿಕೆ ವಿಚಾರದಲ್ಲಿ ರಾಜ್ಯದ ಜನರ ಹಿತವನ್ನು ಕಾಯುವ ಕಾರ್ಯವನ್ನು ಸರ್ಕಾರ ಮತ್ತು ಮುಖ್ಯಮಂತ್ರಿಗಳು ಮಾಡುತ್ತಾರೆ ಎಂದು ಈಶ್ವರ ಖಂಡ್ರೆ ಸ್ಪಷ್ಟಪಡಿಸಿದರು.

ರಾಜ್ಯದಲ್ಲಿರುವ ಬರ ಪರಿಸ್ಥಿತಿಯ ಬಗ್ಗೆ ಮಾತನಾಡುವ ಪ್ರತಿಪಕ್ಷ ಬಿಜೆಪಿ ನಾಯಕರು ರಾಜ್ಯದ ಪಂಚಾಯತಿಗಳಿಗೆ ಕೇಂದ್ರ ಸರ್ಕಾರದಿಂದ 15ನೇ ಹಣಕಾಸಿನ ಆಯೋಗದ ಶಿಫಾರಸಿನಂತೆ 2186 ಕೋಟಿ ರೂ. ಏಕೆ ಬಿಡುಗಡೆ ಮಾಡಿಲ್ಲ ಕೇಳಲಿ ಎಂದರು. ಸಮಾರಂಭದಲ್ಲಿ ಇಲಾಖೆಯ ಕಾರ್ಯದರ್ಶಿ ಡಿ. ರಂದೀಪ್, ಆಯುಕ್ತರಾದ ಡಾ.ಅರುಂಧತಿ ಚಂದ್ರಶೇಖರ್ ಮತ್ತಿತರರು ಪಾಲ್ಗೊಂಡಿದ್ದರು.

## ಕೇರಳದಲ್ಲಿ ಮಳೆ ಅಬ್ಬರ: ಭೂಕುಸಿತ, ಪ್ರವಾಹಕ್ಕೆ 3 ಬಲಿ

● ವಿಕ್ರಮ ವಾಹಿನಿ । ಇಡುಕ್ಕಿ

ಕೇರಳದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಇಡುಕ್ಕಿ, ಕೊಟ್ಟಾಯಂ, ಪತ್ತನಂತಿಟ್ಟ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಭೂಕುಸಿತ ಮತ್ತು ಪ್ರವಾಹ ಉಂಟಾಗಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಪ್ರತ್ಯೇಕ ಭೂಕುಸಿತ ಪ್ರಕರಣಗಳಲ್ಲಿ ಮೂವರು ಮೃತಪಟ್ಟಿದ್ದು, ಹಲವರು ಮಣ್ಣಿನಡಿ ಸಿಲುಕಿರುವ ಶಂಕೆ ವ್ಯಕ್ತವಾಗಿದ್ದು, ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ.

ಇಡುಕ್ಕಿ ಜಿಲ್ಲೆಯ ಕೂಡಯತ್ತೂರು ಸಮೀಪದ ಆದೂರ್ಮಲದಲ್ಲಿ ಶನಿವಾರ ಮುಂಜಾನೆ ಭೂಕುಸಿತ ಸಂಭವಿಸಿ ಸುಮತಿ ಮೃತಪಟ್ಟಿದ್ದಾರೆ. ಭೂಕುಸಿತದ ಅವಶೇಷಗಳು ಮನೆಯ ಮೇಲೆ ಬಿದ್ದ ಪರಿಣಾಮ ಈ ದುರ್ಘಟನೆ ಸಂಭವಿಸಿದೆ. ಅವರ ಪತಿ ಹಾಗೂ ಪುತ್ರನನ್ನು ಗಾಯಗೊಂಡ ಸ್ಥಿತಿಯಲ್ಲಿ ರಕ್ಷಿಸಿ ತೊಡುಪುಳದ ಆಸ್ಪತ್ರೆಗೆ ದಾಖಲಿಸಲಾಗಿದೆ. ಎನ್‌ಡಿಆರ್‌ಎಫ್, ಅಗ್ನಿಶಾಮಕ ದಳ, ಪೊಲೀಸರು ಹಾಗೂ ಕಂದಾಯ ಇಲಾಖೆ ಸಿಬ್ಬಂದಿ ನಡೆಸಿದ ಕಾರ್ಯಾಚರಣೆಯಲ್ಲಿ ಸುಮತಿ ಅವರ ಮೃತದೇಹವನ್ನು ಹೊರತೆಗೆದಿದ್ದಾರೆ.

ಕೊಟ್ಟಾಯಂ ಜಿಲ್ಲೆಯ ಪೂಂಜಾರ್‌ನ ಪಯ್ಯನಿತೊಟ್ಟಂನಲ್ಲಿ ಸಂಭವಿಸಿದ ಮತ್ತೊಂದು ಭೂಕುಸಿತದಲ್ಲಿ ಜೋಸೆಫ್ ಮೃತಪಟ್ಟಿದ್ದಾರೆ. ಆಸ್ಪತ್ರೆಗೆ ಕರೆದೊಯ್ಯುವ ವೇಳೆ ಅವರು ಗಾಯಗಳಿಗೆ ಬಲಿಯಾಗಿದ್ದು, ಅವರ ತಾಯಿ ಇನ್ನೂ ಮಣ್ಣಿನಡಿ ಸಿಲುಕಿರುವ ಶಂಕೆ ವ್ಯಕ್ತವಾಗಿದೆ.

## 'ರಾಜಕಾಲುವೆ ಗಡಿ ಗುರುತಿಸುವಿಕೆ ಹಾಗೂ ಭೂಸ್ವಾಧೀನ ಪ್ರಕ್ರಿಯೆ ತ್ವರಿತಗೊಳಿಸಿ'

● ವಿಕ್ರಮ ವಾಹಿನಿ । ಬೆಂಗಳೂರು

ಪೂರ್ವ ನಗರ ಪಾಲಿಕೆ ವ್ಯಾಪ್ತಿಯ ಬೆಳ್ಳಂದೂರು ವೇಸ್ಟ್ ವೀರ್/ಔಟ್‌ಲೆಟ್‌ನಿಂದ ಓಲ್ಡ್ ಏರ್‌ಪೋರ್ಟ್ ರಸ್ತೆ ವರ್ಜೀನಿಯಾ ಮಾಲ್ ವರೆಗೆ ರಾಜಕಾಲುವೆ ಸಂರಕ್ಷಣೆ, ಬಫರ್ ವಲಯ ಅಭಿವೃದ್ಧಿ ಹಾಗೂ ಸರ್ವಿಸ್ ರಸ್ತೆ ನಿರ್ಮಾಣ ಕಾಮಗಾರಿಗೆ ಸಂಬಂಧಿಸಿದ ಭೂ ಸ್ವಾಧೀನಕ್ಕಾಗಿ ನಮೂನೆ 1ರ ಅಧಿಸೂಚನೆ ಹೊರಡಿಸುವ ಕುರಿತು ಆಯುಕ್ತರಾದ ಡಿ.ಎಸ್. ರಮೇಶ್ ಅವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಸಮನ್ವಯ ಸಭೆ ನಡೆಯಿತು.

ಸಭೆಯಲ್ಲಿ ರಾಜಕಾಲುವೆಯ ಗಡಿಯನ್ನು ಅಧಿಕೃತ ದಾಖಲೆಗಳ ಆಧಾರದ ಮೇಲೆ ನಿಖರವಾಗಿ ಗುರುತಿಸಿ, ಅದಕ್ಕೆ ಅನುಗುಣವಾಗಿ ಯೋಜನೆಗಳನ್ನು ಅಂತಿಮಗೊಳಿಸುವುದು, ಭೂಸ್ವಾಧೀನ ಪ್ರಕ್ರಿಯೆಯನ್ನು ತ್ವರಿತಗೊಳಿಸುವುದು ಹಾಗೂ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಕಾಮಗಾರಿಯನ್ನು ವಿಳಂಬವಿಲ್ಲದೆ ಅನುಷ್ಠಾನಗೊಳಿಸುವ ಕುರಿತು ಸಮಗ್ರವಾಗಿ ಚರ್ಚಿಸಿದ ಆಯುಕ್ತರು ಅಧಿಕಾರಿಗಳಿಗೆ ಅಗತ್ಯ ನಿರ್ದೇಶನಗಳನ್ನು ನೀಡಿದರು.

ರಾಜಕಾಲುವೆಯ ಮೂಲ ಗಡಿ ಹಾಗೂ ಬಫರ್ ವಲಯವನ್ನು ಅಧಿಕೃತ ದಾಖಲೆಗಳ ಆಧಾರದ ಮೇಲೆ ಗುರುತಿಸಿ, ಸ್ಥಳ ಪರಿಶೀಲನೆ ಮೂಲಕ ದೃಢೀಕರಿಸುವಂತೆ ಸೂಚಿಸಲಾಯಿತು. ಗಡಿ ಗುರುತಿಸುವ ಪ್ರಕ್ರಿಯೆಯಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಭೂ ದಾಖಲೆಗಳು, ಸರ್ವೇ ನಕ್ಷೆಗಳು ಹಾಗೂ ಸಂಬಂಧಿತ ಇಲಾಖೆಗಳ ದಾಖಲೆಗಳನ್ನು ಸಮನ್ವಯಗೊಳಿಸಿ ಕಾರ್ಯನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.



ಅಗತ್ಯವಿರುವ ಭೂಮಾಲೀಕರಿಗೆ ನೋಟಿಸ್ ಜಾರಿ ಮಾಡಿ, ಟಿಡಿಆರ್ ಪ್ರಕ್ರಿಯೆಯನ್ನು ತ್ವರಿತಗೊಳಿಸಿ, ಕಾಮಗಾರಿಯನ್ನು ಯಾವುದೇ ವಿಳಂಬವಾಗದಂತೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಲೋಖಂಡೆ ಸ್ನೇಹಲ್ ಸುಧಾಕರ್, ಅಪರ ಆಯುಕ್ತರು (ಅಭಿವೃದ್ಧಿ), ಡಾ. ಪ್ರಜ್ಞಾ ಅಮ್ಮೆಂಬಳ, ಅಪರ ಆಯುಕ್ತರು (ಕಂದಾಯ), ಡಾ. ದಾಕ್ಷಾಯಿಣಿ ಕೆ., ಜಂಟಿ ಆಯುಕ್ತರು /ಉಪ ಆಯುಕ್ತರು(ಟಿಡಿಆರ್), ತಾಂತ್ರಿಕ ನಿರ್ದೇಶಕರು ಹಾಗೂ ಮುಖ್ಯ ಅಭಿಯಂತರರು, (ಬಿ–ಸ್ಮೈಲ್), ಸಹಾಯಕ ಕಾರ್ಯಪಾಲಕ (ಟಿಡಿಆರ್ ವಿಭಾಗ), ಕಾರ್ಯಪಾಲಕ ಅಭಿಯಂತರರು (ಬೃಹತ್ ನೀರುಗಾಲುವೆ ಮತ್ತು ಕೆರೆಗಳು), ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳು, ಸಹಾಯಕ ನಿರ್ದೇಶಕರು (ಭೂದಾಖಲೆಗಳು),ನಗರ ಯೋಜಕರು, ಟಿಡಿಆರ್ ವಿಭಾಗದ ಅಧಿಕಾರಿಗಳು, ಕಂದಾಯ ಇಲಾಖೆಯ ಅಧಿಕಾರಿಗಳು ಹಾಗೂ ಇನ್ನಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಜ್ಯಗಳಿಗೆ ರೂ1.09 ಲಕ್ಷ ಕೋಟಿ; ಕರ್ನಾಟಕಕ್ಕೆ ರೂ4,504 ಕೋಟಿ

● ವಿಕ್ರಮ ವಾಹಿನಿ । ನವದೆಹಲಿ

ರಾಜ್ಯಗಳ ಅಭಿವೃದ್ಧಿ ಕಾಮಗಾರಿಗಳು ಹಾಗೂ ಬಂಡವಾಳ ವೆಚ್ಚಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರವು ರೂ1.09 ಲಕ್ಷ ಕೋಟಿ ಹೆಚ್ಚುವರಿ ತೆರಿಗೆ ಹಂಚಿಕೆ (ಖಿಚಿಥ ಆಜತಠಟಣಣುಠಟ) ಬಿಡುಗಡೆ ಮಾಡಿದೆ. ಈ ಹಂಚಿಕೆಯಲ್ಲಿ ಕರ್ನಾಟಕಕ್ಕೆ ರೂ4,504 ಕೋಟಿ ಲಭಿಸಿದೆ ಎಂದು ಕೇಂದ್ರ ಹಣಕಾಸು ಸಚಿವಾಲಯ ತಿಳಿಸಿದೆ.

ಹಣಕಾಸು ಸಚಿವಾಲಯದ ಪ್ರಕಟಣೆಯ ಪ್ರಕಾರ, ಈ ಹೆಚ್ಚುವರಿ ತೆರಿಗೆ ಪಾಲು ರಾಜ್ಯಗಳ ಮೂಲಸೌಕರ್ಯ ಅಭಿವೃದ್ಧಿ, ಸಾರ್ವಜನಿಕ ಸೇವೆಗಳು ಹಾಗೂ ವಿವಿಧ ಕಲ್ಯಾಣ ಯೋಜನೆಗಳಿಗೆ ಅಗತ್ಯವಾದ ಹಣಕಾಸು ನೆರವು ಒದಗಿಸುವ ಉದ್ದೇಶ ಹೊಂದಿದೆ. ಹಣಕಾಸು ಆಯೋಗದ ಶಿಫಾರಸುಗಳ ಆಧಾರದ ಮೇಲೆ ಕೇಂದ್ರ ತೆರಿಗೆಗಳ ಪಾಲನ್ನು ರಾಜ್ಯಗಳಿಗೆ ವಿತರಿಸಲಾಗಿದೆ.

ತೆರಿಗೆ ಹಂಚಿಕೆಯಲ್ಲಿ ಉತ್ತರ ಪ್ರದೇಶ ರೂ19,208 ಕೋಟಿ ಪಡೆದು ಅತಿ ಹೆಚ್ಚು ಪಾಲು ಪಡೆದ ರಾಜ್ಯವಾಗಿದೆ. ನಂತರ ಬಿಹಾರ ರೂ10,845 ಕೋಟಿ, ಮಧ್ಯಪ್ರದೇಶ ರೂ8,010 ಕೋಟಿ, ಪಶ್ಚಿಮ ಬಂಗಾಳ ರೂ7,866 ಕೋಟಿ ಹಾಗೂ ಮಹಾರಾಷ್ಟ್ರ ರೂ7,022 ಕೋಟಿ ಪಡೆದಿವೆ. ರಾಜಸ್ಥಾನಕ್ಕೆ ರೂ6,460 ಕೋಟಿ, ಆಂಧ್ರಪ್ರದೇಶಕ್ಕೆ ರೂ4,597 ಕೋಟಿ, ಕರ್ನಾಟಕಕ್ಕೆ ರೂ4,504 ಕೋಟಿ ಹಾಗೂ ತಮಿಳುನಾಡಿಗೆ ರೂ4,466 ಕೋಟಿ ಹಂಚಿಕೆಯಾಗಿದೆ.

ಸಣ್ಣ ರಾಜ್ಯಗಳ ಪೈಕಿ ಸಿಕ್ಕಿಂ ರೂ365 ಕೋಟಿ, ಗೋವಾ ರೂ398 ಕೋಟಿ ಹಾಗೂ ನಾಗಾಲ್ಯಾಂಡ್ ರೂ524 ಕೋಟಿ ಪಡೆದಿವೆ. ರಾಜ್ಯಗಳು ಈ ನಿಧಿಯನ್ನು ರಸ್ತೆ, ನೀರಾವರಿ, ಶಿಕ್ಷಣ, ಆರೋಗ್ಯ ಸೇರಿದಂತೆ ವಿವಿಧ ಅಭಿವೃದ್ಧಿ ಯೋಜನೆಗಳು ಹಾಗೂ ಬಂಡವಾಳ ಹೂಡಿಕೆ ವೆಚ್ಚಗಳಿಗೆ ಬಳಸಲಿವೆ ಎಂದು ಸಚಿವಾಲಯ ಸ್ಪಷ್ಟಪಡಿಸಿದೆ.

ಸರ್ಕಾರದ ಈ ಕ್ರಮದಿಂದ ರಾಜ್ಯಗಳಿಗೆ ನಡೆಯುತ್ತಿರುವ ಅಭಿವೃದ್ಧಿ ಕಾಮಗಾರಿಗಳಿಗೆ ವೇಗ ಸಿಗುವ ನಿರೀಕ್ಷೆಯಿದೆ. ರಸ್ತೆ, ಸೇತುವೆ, ಕುಡಿಯುವ ನೀರು, ಆರೋಗ್ಯ, ಶಿಕ್ಷಣ ಸೇರಿದಂತೆ ವಿವಿಧ ಮೂಲಸೌಕರ್ಯ ಯೋಜನೆಗಳಿಗೆ ಈ ಹೆಚ್ಚುವರಿ ತೆರಿಗೆ ಪಾಲು ನೆರವಾಗಲಿದೆ. ಆರ್ಥಿಕ ವರ್ಷದಲ್ಲಿ ನಿಗದಿತ ವೆಚ್ಚವನ್ನು ಸಮಯಕ್ಕೆ ಸರಿಯಾಗಿ ಪೂರ್ಣಗೊಳಿಸಲು ರಾಜ್ಯಗಳಿಗೆ ಇದು ಸಹಕಾರಿಯಾಗಲಿದೆ.

ಕರ್ನಾಟಕಕ್ಕೆ ಬಿಡುಗಡೆಯಾದ ರೂ4,504 ಕೋಟಿ ಮೊತ್ತವನ್ನು ವಿವಿಧ ಅಭಿವೃದ್ಧಿ ಯೋಜನೆಗಳು, ಬಂಡವಾಳ ವೆಚ್ಚ ಹಾಗೂ ಕಲ್ಯಾಣ ಕಾರ್ಯಕ್ರಮಗಳಿಗೆ ಬಳಸುವ ಸಾಧ್ಯತೆಯಿದೆ. ಹಣಕಾಸು ಆಯೋಗದ ಶಿಫಾರಸುಗಳ ಅನ್ವಯ ಕೇಂದ್ರದಿಂದ ರಾಜ್ಯಗಳಿಗೆ ತೆರಿಗೆ ಪಾಲು ನಿಯಮಿತವಾಗಿ ಹಂಚಿಕೆಯಾಗುತ್ತಿದ್ದು, ರಾಜ್ಯಗಳ ಆರ್ಥಿಕ ಸ್ಥಿರತೆ ಮತ್ತು ಅಭಿವೃದ್ಧಿಗೆ ಇದು ಪ್ರಮುಖ ಆಧಾರವಾಗಿದೆ.

## ಸೇವೆ ಮುಗಿಯಬಹುದು, ಸೇವೆಯ ನೆನಪು ಎಂದಿಗೂ ಮುಗಿಯುವುದಿಲ್ಲ: ಮುಂಡರಗಿ ನಾಗರಾಜ್

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಸೇವೆಯಿಂದ ನಿವೃತ್ತರಾದ ಲಿಡ್‌ಕರ್‌ನ ಬೆಳಗಾವಿ ಜಿಲ್ಲಾ ಸಂಯೋಜಕರಾದ ರುದ್ರೇಶಿ ಹಾಗೂ ಹಾವೇರಿ ಜಿಲ್ಲಾ ಸಂಯೋಜಕರಾದ ಶ್ರೀ ಕೃಷ್ಣಪ್ಪ ಅವರಿಗೆ ಬೆಂಗಳೂರಿನ ವಸಂತನಗರದಲ್ಲಿರುವ ಲಿಡ್‌ಕರ್ ಮುಖ್ಯ ಕಚೇರಿಯಲ್ಲಿ ಆತ್ಮೀಯ ಬೀಳ್ಕೊಡುಗೆ ಹಾಗೂ ಸನ್ಮಾನ ಸಮಾರಂಭ ನಡೆಯಿತು.

ಲಿಡ್‌ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಮಾರಂಭದಲ್ಲಿ ಇಬ್ಬರು ಅಧಿಕಾರಿಗಳ ಸೇವೆಯನ್ನು ಸ್ಮರಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅಧ್ಯಕ್ಷರು, ರುದ್ರೇಶಿ ಅವರು 41 ವರ್ಷ 6 ತಿಂಗಳಿಗೂ ಹೆಚ್ಚು ಅವಧಿಯ ಸೇವೆ ಸಲ್ಲಿಸಿರುವುದು ಲಿಡ್‌ಕರ್ ಇತಿಹಾಸದಲ್ಲೇ ಅಪರೂಪದ ಸಾಧನೆ. ಸಂಸ್ಥೆಯ ಬೆಳವಣಿಗೆಯೊಂದಿಗೆ ತಮ್ಮ ಬದುಕನ್ನೇ ಬೆಸೆದುಕೊಂಡು ಪ್ರಾಮಾಣಿಕವಾಗಿ ದುಡಿದ ಅವರು ಇಂದಿನ ಯುವ ಅಧಿಕಾರಿಗಳಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು. ಕೃಷ್ಣಪ್ಪ ಅವರೂ ತಮ್ಮ ಕರ್ತವ್ಯವನ್ನು ಅತ್ಯಂತ ನಿಷ್ಠೆಯಿಂದ ನಿರ್ವಹಿಸಿ, ಸಹೋದ್ಯೋಗಿಗಳ ಪ್ರೀತಿ ಮತ್ತು ಜನರ ವಿಶ್ವಾಸ ಗಳಿಸಿದ ಅಧಿಕಾರಿಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.



"ನಿವೃತ್ತಿ ಎನ್ನುವುದು ಹುದ್ದೆಯಿಂದ ಮಾತ್ರ; ಸೇವೆಯಿಂದ ಅಲ್ಲ. ನಾವು ಕೆಲಸ ಮಾಡುವ ಅವಧಿಯಲ್ಲಿ ಸಮಾಜಕ್ಕೆ ಏನು ಕೊಟ್ಟೆವು, ಜನರ ಬದುಕಿನಲ್ಲಿ ಎಂತಹ ಬದಲಾವಣೆ ತಂದೆವು ಎಂಬುದೇ ನಮ್ಮ ನಿಜವಾದ ಪರಿಚಯ. ಕಚೇರಿಯ ಬಾಗಿಲು ತೆರೆಯುವ ಮೊದಲು ನಮ್ಮ ಮನಸ್ಸು ತೆರೆಯಬೇಕು. ಮಾನವೀಯತೆಯೇ ಪ್ರತಿಯೊಬ್ಬ ಸರ್ಕಾರಿ ನೌಕರನ ದೊಡ್ಡ ಸಂಪತ್ತು" ಎಂದು ಅಧ್ಯಕ್ಷರು ಹೇಳಿದರು.

ಕಾರ್ಯಕ್ರಮದಲ್ಲಿ ಲಿಡ್‌ಕರ್‌ನ ಹಿರಿಯ ಅಧಿಕಾರಿಗಳಾದ ಮೋನಪ್ಪ ಕಟ್ಟಿಮನಿ, ಪ್ರಾಣೇಶ್ ಮತ್ತು ಸಿಬ್ಬಂದಿ, ಚರ್ಮ ಕುಶಲಕರ್ಮಿಗಳು ಹಾಗೂ ಮಾಧ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದು, ನಿವೃತ್ತ ಅಧಿಕಾರಿಗಳಿಗೆ ಆತ್ಮೀಯವಾಗಿ ಶುಭ ಹಾರೈಸಿದರು.



ಮೊರಾಕ್ಕೋದಿಂದ ಸಮುದ್ರ ಮಾರ್ಗವಾಗಿ ಈಜಿಕೊಂಡು ಸ್ಪೇನ್‌ನ ಸೆಯುಟಾ ಗಡಿಗೆ ಪ್ರವೇಶಿಸಿದ ವಲಸಿಗರು ಗಡಿ ಬೇಲಿಯ ಸಮೀಪ ಜಮಾಯಿಸಿರುವ ದೃಶ್ಯ.

# 'ಎಲ್ಲಾ ಧರ್ಮಗಳನ್ನು ಸಮಾನತೆಯಿಂದ ನೋಡಬೇಕು'

● ವಿಕ್ರಮ ವಾಹಿನಿ | ಮೈಸೂರು

"ರಾಜ್ಯ ಸದಾ ಸುಭಿಕ್ಷವಾಗಿರಲಿ. ಉತ್ತಮ ಮಳೆ ಬಂದು ರೈತರ ಬದುಕು, ವರ್ತಕರ ವ್ಯಾಪಾರ, ಮಕ್ಕಳ ವಿದ್ಯಾಭ್ಯಾಸ ಪ್ರಗತಿಯಾಗಲಿ. ಹಿರಿಯ ನಾಯಕರುಗಳಿಗೆ ಸಮಾಜ ಸೇವೆ ಮಾಡುವ ಶಕ್ತಿ, ತಾಳ್ಮೆ ದೊರಕಲಿ ಎಂದು ತಾಯಿ ಚಾಮುಂಡೇಶ್ವರಿ ಬಳಿ ಪ್ರಾರ್ಥನೆ ಮಾಡಿದ್ದೇನೆ" ಎಂದು ಸಿಎಂ ಡಿ ಕೆ ಶಿವಕುಮಾರ್ ಹೇಳಿದರು.

ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ದೇವರ ದರ್ಶನದ ಬಳಿಕ ಮಾಧ್ಯಮಗಳಿಗೆ ಶನಿವಾರ ಪ್ರತಿಕ್ರಿಯೆ ನೀಡಿದರು. "ನಾನು ಇದೇ ಸ್ಥಳದಲ್ಲಿ ಈ ಹಿಂದೆ ಒಂದು ಮಾತು ಹೇಳಿದ್ದೇ. ಪ್ರಯತ್ನ ವಿಫಲ ಆದರೂ ಪ್ರಾರ್ಥನೆ ವಿಫಲ ಆಗೋದಿಲ್ಲ" ಎಂದು. ಇದರ ಬಗ್ಗೆ ಅನೇಕರು ಚರ್ಚೆ ಮಾಡಿದರು. ಸಂತೋಷ ಪಟ್ಟರು. ನಕ್ಕರು, ಟೀಕೆ ಮಾಡಿದರು. ಆದರೆ ನನಗೆ ನಂಬಿಕೆ, ಚಾಮುಂಡೇಶ್ವರಿ ತಾಯಿ ಆಶೀರ್ವಾದ ಇತ್ತು. ಮೈಸೂರಿಗೆ ಮೊದಲನೇ ಬಾರಿಗೆ ಮುಖ್ಯಮಂತ್ರಿಯಾಗಿ ಬಂದಿದ್ದೇನೆ. ದುಃಖವನ್ನು ದೂರ ಮಾಡುವ ಚಾಮುಂಡಿ ತಾಯಿ ದುರ್ಗಾ ದೇವಿಯನ್ನ ದರ್ಶನ ಮಾಡಿದ್ದೇನೆ" ಎಂದರು.

**ಎಲ್ಲಾ ಧರ್ಮಗಳನ್ನ ಸಮಾನತೆಯಿಂದ ನೋಡಬೇಕು**

"ನಾನು ನಂಬಿರುವ ನನ್ನ ಅಜ್ಜಯ್ಯ. ಈ ರಾಜ್ಯ ಯಾವ ರೀತಿ ಸುಭಿಕ್ಷವಾಗಿರಬೇಕು ಎಂದು ಯಾವಾಗಲೂ ನನಗೆ ಮಾರ್ಗದರ್ಶನ ಮಾಡುತ್ತಾ ಬಂದಿದ್ದಾರೆ. ಧರ್ಮ ಕಾಪಾಡಬೇಕಾದ್ದು ನಮ್ಮೆಲ್ಲರ ಕರ್ತವ್ಯ. ಯಾವುದೇ ಧರ್ಮ ಇರಲಿ. ಅವರವರ ನಂಬಿಕೆ ಆಚಾರ, ವಿಚಾರ. ಸರ್ಕಾರವು ಎಲ್ಲಾ ಧರ್ಮಗಳನ್ನ ಸಮಾನತೆಯಿಂದ ನೋಡಬೇಕಾದ್ದು ಜವಾಬ್ದಾರಿ. ಆ ನಿಟ್ಟಿನಲ್ಲಿ ನಾವು ಕೆಲಸ ಮಾಡುತ್ತಿದ್ದೇವೆ. ಕುವೆಂಪು ಅವರ ಮಾತಿನಂತೆ ಈ ರಾಜ್ಯ ಶಾಂತಿಯ ತೋಟ. ಇದನ್ನ ಕಾಪಾಡುವುದು ನಮ್ಮ ಮೊದಲನೆಯ ಕರ್ತವ್ಯ" ಎಂದರು.

"ಈ ರಾಜ್ಯದಲ್ಲಿ ಒಂದು ಉತ್ತಮವಾದ ಒಂದು ಆಡಳಿತ ನಡೆಸಬೇಕು. ಸಾಕ್ಷಿ ಗುಡ್ಡೆಗಳನ್ನು ಬಿಟ್ಟುಹೋಗಬೇಕು. ಎಂಬುದು



ನನ್ನ ಧ್ಯೇಯ. ಎಲ್ಲರನ್ನೂ ಸಮಾನವಾಗಿ ಕರೆದುಕೊಂಡು ಹೋಗಬೇಕಿರುವುದು ನನ್ನ ಧರ್ಮ. ಧರ್ಮವನ್ನ ಎಲ್ಲಾ ಜನರ ಹಿತಕ್ಕೋಸ್ಕರ ಕಾಪಾಡಬೇಕು" ಎಂದರು.

ತಮಿಳುನಾಡಿಗೆ ನೀರು ಹರಿಸಲು ಮೌಖಿಕ ಸೂಚನೆ ಆಗಿದೆ ಎಂದಾಗ ಆಗಿದೆ ಎಂದು ಕೇಳಿದಾಗ, "ನೀರನ್ನ ನಾವು ತಡೆದು ಇಟ್ಟುಕೊಳ್ಳಲು ಆಗುವುದಿಲ್ಲವಲ್ಲ. ನಮ್ಮ ಸಂಕಟಗಳೆಲ್ಲಾ ದೂರ ಆಗಲಿ ಎಂದು ಒಂದು ಮಾತಲ್ಲಿ ಹೇಳಿದ್ದೇನೆ.

ಆ ತಾಯಿಯ ಆಶೀರ್ವಾದ. ಗಂಗೆ, ಕಾವೇರಿ ಕೃಪೆ. ಕಾವೇರಿನ ನಂಬಿಕೊಂಡಂತ ಎಲ್ಲಾ ರೈತರಿಗೆ, ವರ್ತಕರಿಗೆ, ಕೈಗಾರಿಕೆಗಳಿಗೆ, ತಮಿಳುನಾಡು, ಪಾಂಡಿಚೇರಿ, ಬೆಂಗಳೂರು, ಮಂಡ್ಯ, ಮೈಸೂರು ಸೇರಿದಂತೆ ಕಾವೇರಿ ಜಲಾನಯನ ಪ್ರದೇಶಗಳಿಗೆ ಚಾಮುಂಡೇಶ್ವರಿ ಅನುಗ್ರಹದಿಂದ ಈ ಕಾವೇರಿಯ ಸ್ವರೂಪಿ ಹರಿತಾ ಇದಾಳೆ" ಎಂದರು.

"ಪ್ರಾಣಿ ಪಕ್ಷಿ ಆದಿಯಾಗಿ ಎಲ್ಲರೂ ಕೂಡ ಗಂಗೆಯಿಂದ ಬದುಕಬೇಕು. ಇದೆ ನಮ್ಮೆಲ್ಲರ ಸಂಕಲ್ಪ ಕೂಡ ಆಗಿದೆ. ಒಂದು ಉತ್ತಮವಾದಂತಹ ಒಂದು ವಾತಾವರಣ ಈ ರಾಜ್ಯದಲ್ಲಿ ನೆಲೆಸಲಿ. ಕಾವೇರಿ ತುಂಬಲಿ" ಎಂದರು.

# ಎ, ಬಿ ವರ್ಗದ ದೇವಸ್ಥಾನಗಳಿಗೆ ಭೂಮಿ ಖರೀದಿ ಸೂಚನೆ

● ವಿಕ್ರಮ ವಾಹಿನಿ | ಬೆಂಗಳೂರು

'ರಾಜ್ಯದಲ್ಲಿನ ದೇವಸ್ಥಾನಗಳಲ್ಲಿ ಸಾಕಷ್ಟು ಹಣವಿದೆ. ಹಾಗಾಗಿ 'ಎ' ವರ್ಗ ಮತ್ತು 'ಬಿ' ವರ್ಗದ ದೇವಸ್ಥಾನಗಳ ಹೆಸರಿಗೆ ಭೂಮಿ ಖರೀದಿಸಬೇಕು. ಈ ಆಸ್ತಿ ಶಾಶ್ವತವಾಗಿ ದೇವಸ್ಥಾನಕ್ಕೆ ಉಳಿಯುತ್ತದೆ. ಇದರಿಂದ ಭಕ್ತರಿಗೆ ಮೂಲಸೌಕರ್ಯ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ದೇವಸ್ಥಾನದ ಎಲ್ಲ ರೀತಿಯ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲು ಮತ್ತಷ್ಟು ಅನುಕೂಲವಾಗುತ್ತದೆ' ಎಂದು ಡಿಸಿಎಂ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ.

ವಿಧಾನಸೌಧದಲ್ಲಿ ಇಂದು ಡಿಸಿಎಂ ಡಾ. ಜಿ. ಪರಮೇಶ್ವರ ನೇತೃತ್ವದಲ್ಲಿ ರಾಜ್ಯ ಧಾರ್ಮಿಕ ಪರಿಷತ್ತಿನ ಸಭೆ ಮಾಡಲಾಗಿದ್ದು, ಸದಸ್ಯರೊಂದಿಗೆ ಸುದೀರ್ಘವಾಗಿ ಚರ್ಚಿಸಿ ಬಳಿಕ ಕೆಲ ಅಗತ್ಯ ನಿರ್ದೇಶನಗಳನ್ನು ನೀಡಿದ್ದಾರೆ. 'ದೇವಸ್ಥಾನಗಳ ಹುಂಡಿ ಹಣ ದುರುಪಯೋಗ ತಡೆಯುವ ನಿಟ್ಟಿನಲ್ಲಿ ಹುಂಡಿ ಮೇಲೆ ನಿಗಾವಹಿಸಲು ಸಿಸಿಟಿವಿ ಅಳವಡಿಸುವಂತೆ ಮುಖ್ಯಮಂತ್ರಿಯವರು ಸೂಚನೆ ನೀಡಿದ್ದಾರೆ.



ಇದನ್ನು ಆಗಸ್ಟ್ ಕೊನೆಯ ವೇಳೆಗೆ ಪೂರ್ಣಗೊಳಿಸಬೇಕು. ಈ ಬಗ್ಗೆ ಹಗುರವಾಗಿ ಪರಿಗಣಿಸುವುದು ಬೇಡ' ಎಂದಿದ್ದಾರೆ.'ರಾಜ್ಯದ ಪ್ರಸಿದ್ಧ ದೇವಸ್ಥಾನಗಳಲ್ಲಿ ಭಕ್ತರಿಗೆ ಅಗತ್ಯ ಮೂಲ ಸೌಕರ್ಯಗಳ ಕೊರತೆ ಇದೆ.

ನಾನು ಭೇಟಿ ನೀಡಿ ಪರಿಶೀಲಿಸಿದ ದೇವಸ್ಥಾನಗಳಲ್ಲಿ 'ನಾವು ಯಾವ ಯುಗದಲ್ಲಿದ್ದೇವೆ' ಎಂಬ ಪ್ರಶ್ನೆ ಮೂಡುತ್ತದೆ. ಯಾರೊಬ್ಬರು ಜವಾಬ್ದಾರಿ ತೆಗೆದುಕೊಂಡು ಕೆಲಸ ಮಾಡುತ್ತಿಲ್ಲ. ದೇವಸ್ಥಾನಗಳಲ್ಲಿ ಪಾವಿತ್ರ್ಯತೆ ಕಾಪಾಡದೆ ಹೋದರೆ ಹೇಗೆ' ಎಂದು ಪ್ರಶ್ನಿಸಿದರು.

'ದೇವಸ್ಥಾನಗಳಲ್ಲಿ ಭಕ್ತರಿಗೆ ಮೂಲಸೌಕರ್ಯ ಒದಗಿಸಲು ಯಾವುದೇ ರೀತಿಯಲ್ಲೂ ಹಣದ ಕೊರತೆ ಇಲ್ಲ. ಮಾಸ್ಟರ್ ಪ್ಲಾನ್ ರೂಪಿಸಲು ಸೂಚಿಸಲಾಗಿದೆ. ಈ ಬಗ್ಗೆ ನಿರ್ಲಕ್ಷಿಸುವುದು ಬೇಡ.'ಸಿ ವರ್ಗದ ದೇವಸ್ಥಾನಗಳನ್ನು ಅಭಿವೃದ್ಧಿ ಹೆಸರಿನಲ್ಲಿ ಯಾವುದೇ ರೀತಿಯ ಸಂಸ್ಥೆಗಳಿಗೆ ದತ್ತು ನೀಡಬಾರದು.

ಅಭಿವೃದ್ಧಿ ಹೆಸರಿನಲ್ಲಿ ದತ್ತು ಪಡೆದವರು ದೇವಸ್ಥಾನದ ಆಸ್ತಿ ನಮ್ಮದು ಎಂದು ತಕಾರಾರು ತೆಗೆಯುತ್ತಾರೆ. 'ಎ' ವರ್ಗದ ದೇವಸ್ಥಾನಗಳ ಅನುದಾನದಲ್ಲಿ ಶೇ. 10ರಷ್ಟನ್ನು 'ಸಿ' ವರ್ಗದ ದೇವಸ್ಥಾನಗಳ ಅಭಿವೃದ್ಧಿ ಕಾರ್ಯ ಕೈಗೊಳ್ಳಲು ಬಳಸಬೇಕು' ಎಂದಿದ್ದಾರೆ.

'ದೇವಸ್ಥಾನಗಳ ಒತ್ತುವರಿಯಾದ ಭೂಮಿಯನ್ನು ತೆರವುಗೊಳಿಸಲು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಈಗಾಗಲೇ ಸೂಚಿಸಲಾಗಿದೆ. ದೇವಸ್ಥಾನಗಳ ಒತ್ತುವರಿಯಾದ ಆಸ್ತಿಗಳನ್ನು ತೆರವುಗೊಳಿಸಲು ಆದ್ಯತೆ ಮೇರೆಗೆ ಸರ್ವೇ ಮಾಡಿಸಿ, ತೆರವುಗೊಳಿಸಿ ಮುಜರಾಯಿ ಇಲಾಖೆಗೆ ಒಪ್ಪಿಸಲು ಕ್ರಮ ಕೈಗೊಳ್ಳಬೇಕು. ಮೂರು ತಿಂಗಳ ಒಳಗಾಗಿ ಪೂರ್ಣಗೊಳಿಸುವಂತೆ' ಸೂಚಿಸಿದ್ದಾರೆ.

'ದೇವಸ್ಥಾನಗಳ ಆದಾಯ ಹಾಗೂ ವೆಚ್ಚದ ಲೆಕ್ಕಪತ್ರಗಳನ್ನು ಪಾರದರ್ಶಕವಾಗಿ ನಿರ್ವಹಿಸಿ, ಭಕ್ತರ ವಿಶ್ವಾಸಕ್ಕೆ ಧಕ್ಕೆಯಾಗದಂತೆ ಆಡಳಿತ ನಡೆಸಬೇಕು. ದೇವಾಲಯಗಳ ಅಭಿವೃದ್ಧಿಗೆ ಕೈಗೊಳ್ಳುವ ಎಲ್ಲ ಕಾಮಗಾರಿಗಳು ನಿಗದಿತ ಅವಧಿಯೊಳಗೆ ಪೂರ್ಣಗೊಳ್ಳುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು' ಎಂದು ಪರಮೇಶ್ವರ್ ಸೂಚಿಸಿದರು.

ಇನ್ನು 'ಶೈಕ್ಷಣಿಕ ವರ್ಷ ಆರಂಭವಾಗಿರುವ ಹಿನ್ನೆಲೆಯಲ್ಲಿ ಅಧಿಸೂಚಿತ ದೇವಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಚಕರು ಮತ್ತು ನೌಕರರ ಮಕ್ಕಳಿಗೆ ನೀಡುವ ವಿದ್ಯಾರ್ಥಿವೇತನಕ್ಕೆ ಅರ್ಜಿ ಆಹ್ವಾನಿಸಲು ಕ್ರಮ ಕೈಗೊಳ್ಳುವಂತೆ' ಡಿಸಿಎಂ ಡಾ. ಜಿ. ಪರಮೇಶ್ವರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

# ಮತ್ತೆ ಭುಗಿಲೆದ್ದ ಕಾವೇರಿ ನೀರು ವಿವಾದ


● ವಿಕ್ರಮ ವಾಹಿನಿ | ಬೆಂಗಳೂರು

ಕರ್ನಾಟಕದ ಜೀವನಾಡಿಯಾದ ಕಾವೇರಿ ನದಿ ನೀರು ಹಂಚಿಕೆ ವಿವಾದ ಮತ್ತೊಮ್ಮೆ ರಾಜ್ಯದಲ್ಲಿ ತೀವ್ರ ಸ್ವರೂಪ ಪಡೆದುಕೊಂಡಿದೆ. ಮಳೆ ಕೊರತೆ ಹಾಗೂ ಕುಡಿಯುವ ನೀರಿನ ತೀವ್ರ ಅಭಾವದ ನಡುವೆಯೂ ತಮಿಳುನಾಡಿಗೆ ನಿತ್ಯ ನೀರು ಹರಿಸಬೇಕೆಂಬ ಆದೇಶ ಹೊರಬಿದ್ದಿರುವುದು ಕಾವೇರಿ ಕೊಳ್ಳದ ರೈತರು ಮತ್ತು ಕನ್ನಡಿಗರ ಆಕ್ರೋಶಕ್ಕೆ ಕಾರಣವಾಗಿದೆ.

ಬಹುತೇಕ ತಾಲ್ಲೂಕುಗಳಲ್ಲಿ ತೀವ್ರ ಬರ, ಕುಡಿಯುವ ನೀರಿನ ಅಭಾವ ಮತ್ತು ಬೆಳೆಗಳಿಗೆ ನೀರಿನ ಅಡಚಣೆ ಇರುವ ಈ ಸಂದರ್ಭದಲ್ಲೂ ತಮಿಳುನಾಡಿಗೆ ನೀರು ಹರಿಸುವ ಅನಿವಾರ್ಯತೆ ಎದುರಾಗಿರುವುದು ಕನ್ನಡಿಗರನ್ನು ಕೆರಳಿಸಿದೆ.

ಬ್ರಿಟಿಷರ ಕಾಲದಿಂದಲೂ ಮುಂದುವರಿದುಕೊಂಡು ಬಂದಿರುವ ತಾರತಮ್ಯದ ಒಪ್ಪಂದಗಳು ಮತ್ತು ಇಂದಿನ ವಾಸ್ತವಿಕತೆಯ ನಡುವಿನ ಸಂಘರ್ಷ ಈಗಿನ ಬಿಕ್ಕಟ್ಟಿಗೆ ಮುಖ್ಯ ಕಾರಣ. ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸಿನಂತೆ, ಕರ್ನಾಟಕವು ಪ್ರತಿದಿನ 3,500 ಕ್ಯುಸೆಕ್ ನೀರನ್ನು 15 ದಿನಗಳ ಕಾಲ ತಮಿಳುನಾಡಿಗೆ ಹರಿಸಬೇಕು ಹಾಗೂ ಬಿಳಿಗುಂಡ್ಲು ಮೂಲಕ 4.6 ಟಿಎಂಸಿ ನೀರು ತಲುಪಬೇಕೆಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ನಿರ್ದೇಶನ ಮಾಡಿದೆ.

ಸಂಕಷ್ಟದ ಸಮಯದಲ್ಲಿ ಬಂದಿರುವ ಈ ಆದೇಶಕ್ಕೆ ರಾಜ್ಯದಾದ್ಯಂತ ತೀವ್ರ ವಿರೋಧ ವ್ಯಕ್ತವಾಗಿದೆ. ಬಹುತೇಕ ತಾಲ್ಲೂಕುಗಳಲ್ಲಿ ಬರ ಪರಿಸ್ಥಿತಿ ತಲೆದೋರಿದ್ದು, ಕುಡಿಯಲು ನೀರಿಲ್ಲದ ಹಾಗೂ ಬೆಳೆಗಳು ಒಣಗುತ್ತಿರುವ ಈ ಸಂದರ್ಭದಲ್ಲಿ ನೀರು ಬಿಡುವುದು ಕಷ್ಟಸಾಧ್ಯ ಎಂಬ ಅಭಿಪ್ರಾಯ ವ್ಯಕ್ತವಾಗಿದೆ. ರಾಜ್ಯ ಸರ್ಕಾರವು ಪ್ರಾಧಿಕಾರದ ಆದೇಶವನ್ನು ಧಿಕ್ಕರಿಸಲು ಮುಂದಾಗಿದ್ದು, ಈ ಕುರಿತು ಚರ್ಚಿಸಲು ಆ.2 ರಂದು ಸರ್ವಪಕ್ಷಗಳ ಸಭೆಯನ್ನು ಕರೆದಿದೆ.



1990ರಲ್ಲಿ ಸುಪ್ರಿಂಕೋರ್ಟ್ ನಿರ್ದೇಶನದಂತೆ ಕೇಂದ್ರ ಸರ್ಕಾರವು ಕಾವೇರಿ ಜಲ ವಿವಾದ ನ್ಯಾಯಾಧಿಕರಣವನ್ನು ರಚಿಸಿತು. 1991ರಲ್ಲಿ ಮಧ್ಯಂತರ ಆದೇಶ ನೀಡಿ ತಮಿಳುನಾಡಿಗೆ 205 ಟಿಎಂಸಿ ನೀರು ಹರಿಸಲು ಸೂಚಿಸಿದಾಗ, ಅಂದಿನ ಮುಖ್ಯಮಂತ್ರಿ ಎಸ್.ಬಂಗಾರಪ್ಪ ಅವರು ಸುಗ್ರೀವಾಜ್ಞೆ ಹೊರಡಿಸಿ ಆದೇಶ ಧಿಕ್ಕರಿಸಿದ್ದರು. ಇದು ಸಾಂವಿಧಾನಿಕ ಬಿಕ್ಕಟ್ಟಿಗೆ ಕಾರಣವಾಗಿತ್ತು.

2007ರ ಅಂತಿಮ ತೀರ್ಪು ಹಾಗೂ 2018ರ ಸುಪ್ರೀಂಕೋರ್ಟ್ ಮಾರ್ಪಾಡು ಆದೇಶದ ಪ್ರಕಾರ, ತಮಿಳುನಾಡಿಗೆ ವರ್ಷಕ್ಕೆ 177.25 ಟಿಎಂಸಿ ನೀರನ್ನು ಕರ್ನಾಟಕ ಹರಿಸಬೇಕಿದೆ. ಆದರೆ, ಲಭ್ಯವಿರುವ ಅಂಕಿಅಂಶಗಳ ಪ್ರಕಾರ ಕಳೆದ ಹತ್ತು ವರ್ಷಗಳಲ್ಲಿ ಸುಪ್ರೀಂಕೋರ್ಟ್ ಆದೇಶಿಸಿದ್ದಕ್ಕಿಂತಲೂ ಅಧಿಕ ಪ್ರಮಾಣದ ನೀರನ್ನು (ಸುಮಾರು 970 ಟಿಎಂಸಿ ಅಡಿಗೂ ಹೆಚ್ಚು) ಕರ್ನಾಟಕ ತಮಿಳುನಾಡಿಗೆ ಹರಿಸಿದೆ ಎಂಬುದು ಗಮನಾರ್ಹ.

ಕರ್ನಾಟಕದಲ್ಲಿ ಮುಂಗಾರು ಮಳೆಯ ನಂಬಿಕೆ ಹೆಚ್ಚು. ಆದರೆ ತಮಿಳುನಾಡಿನಲ್ಲಿ ಕುರುವೈ ಬೆಳೆಯ ಸಮಯದಲ್ಲೂ ಮಳೆಯ ಲಭ್ಯತೆ ಭಿನ್ನವಾಗಿರುತ್ತದೆ. ಮಳೆಯಿಲ್ಲದೆ ಕರ್ನಾಟಕದ ಜಲಾಶಯಗಳಲ್ಲಿ (ಕೆಆರ್‌ಎಸ್, ಕಪಿಲಾ, ಹಾರಂಗಿ, ಹೇಮಾವತಿ) ನೀರಿನ ಮಟ್ಟ ಕುಸಿದಾಗ ನದಿ ನೀರಿನ ಹಂಚಿಕೆಯನ್ನು ಹೇಗೆ ಮಾಡಬೇಕೆಂಬ ಬಗ್ಗೆ ಸ್ಪಷ್ಟ ಹಾಗೂ ಸಮರ್ಪಕವಾದ ಸಂಕಷ್ಟ ಸೂತ್ರ ಇಲ್ಲದಿರುವುದು ಕನ್ನಡಿಗರ ಆಕ್ರೋಶಕ್ಕೆ ಶಾಶ್ವತ ಕಾರಣವಾಗಿದೆ.

ಕಾವೇರಿ ಕೊಳ್ಳದ ಜಲಾಶಯಗಳಾದ ಕೆಆರ್‌ಎಸ್, ಕಪಿಲಾ, ಹಾರಂಗಿ ಮತ್ತು ಹೇಮಾವತಿ ಪ್ರದೇಶಗಳಲ್ಲಿ ಮುಂಗಾರು ಮಳೆ ಕೈಕೊಟ್ಟಾಗಲೆಲ್ಲಾ ರೈತರ ಬದುಕು ಅಧೋಗತಿಗೆ ತಲುಪುತ್ತದೆ.

2018ರ ಸುಪ್ರೀಂಕೋರ್ಟ್ ತೀರ್ಪಿನ ಪ್ರಕಾರ ಕರ್ನಾಟಕವು ಪ್ರತಿ ವರ್ಷ 177.25 ಟಿಎಂಸಿ ನೀರನ್ನು ತಮಿಳುನಾಡಿಗೆ ಹರಿಸಬೇಕು. ಕಳೆದ ಹತ್ತು ವರ್ಷಗಳ ಅಂಕಿ-ಅಂಶಗಳನ್ನು ಗಮನಿಸಿದರೆ, ಈ ಅವಧಿಯಲ್ಲಿ ಕರ್ನಾಟಕವು ಸುಪ್ರೀಂಕೋರ್ಟ್ ಆದೇಶಿಸಿದ್ದಕ್ಕಿಂತಲೂ ಸುಮಾರು 970 ಟಿಎಂಸಿ ಅಡಿ ಅಧಿಕ ನೀರನ್ನು ತಮಿಳುನಾಡಿಗೆ ಹರಿಸಿದೆ (ಒಟ್ಟು ಸುಮಾರು 2,746 ಟಿಎಂಸಿ ಅಡಿ ನೀರು). ಮಳೆಯಿಲ್ಲದ ಸಂಕಷ್ಟದ ಪರಿಸ್ಥಿತಿಯಲ್ಲೂ ವಾಸ್ತವಿಕ ನೆಲೆಯಲ್ಲಿ ಕರ್ನಾಟಕ ಹೆಚ್ಚಿನ ನೀರನ್ನು ಬಿಟ್ಟಿದ್ದರೂ, ತಮಿಳುನಾಡು ಪದೇಪದೇ ನ್ಯಾಯಾಲಯದ ಕದ ತಟ್ಟುವುದು ಮತ್ತು ಪ್ರಾಧಿಕಾರಗಳು ಕನ್ನಡಿಗರ ಹಿತವನ್ನು ಬಲಿಗೈದು ಆದೇಶ ನೀಡುವುದು ಮುಂದುವರಿದಿದೆ.

ಪ್ರಸ್ತುತ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ಧಿಕ್ಕರಿಸಿ ರಾಜ್ಯ ಸರಕಾರವು ಆ.2 ರಂದು ಸರ್ವಪಕ್ಷಗಳ ಸಭೆ ಕರೆದಿದೆ. ಆದರೆ ಇಂತಹ ಸಭೆಗಳು ಕೇವಲ ರಾಜಕೀಯ ಪಕ್ಷಗಳ ಮೇಲಾಟಗಳಿಗೆ ಸೀಮಿತವಾಗುತ್ತವೆಯೇ ಹೊರತು, ಮಳೆಯಾಗದ ಸಂದರ್ಭದಲ್ಲಿ ನೀರಿನ ಹಂಚಿಕೆಯನ್ನು ಹೇಗೆ ನಿರ್ವಹಿಸಬೇಕು ಎಂಬ ಬಗ್ಗೆ ಯಾವುದೇ ಸ್ಪಷ್ಟ ಹಾಗೂ ಶಾಶ್ವತ ಸಂಕಷ್ಟ ಸೂತ್ರ ಇಲ್ಲದಿರುವುದು ಕರ್ನಾಟಕದ ನಿರಂತರ ದುಃಸ್ಥಿತಿಗೆ ಕಾರಣವಾಗಿದೆ. ಕಾವೇರಿ ಕೊಳ್ಳದ ರೈತರ ಆಕ್ರೋಶ, ಕನ್ನಡಿಗರ ಕಣ್ಣೀರು ಮತ್ತು ಕಾನೂನಿನ ಸಮರದ ನಡುವೆ ಕಾವೇರಿ ಕೇವಲ ನದಿಯಲ್ಲ, ಅದೊಂದು ಅನ್ಯಾಯಗಳ ಜೀವಂತ ಪರಂಪರೆಯಾಗಿ ಉಳಿದುಕೊಂಡಿದೆ.

# ಕುನಾಲ್ ಕಾಮ್ರಾ ಶೋ ರದ್ದುಪಡಿಸಲು ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ಆಗ್ರಹ

● ವಿಕ್ರಮ ವಾಹಿನಿ | ಬೆಂಗಳೂರು

ಆಗಸ್ಟ್ 3ರಂದು ವೈಟ್‌ಫೀಲ್ಡ್‌ನ ಪಟ್ಟಂದೂರು ಅಗ್ರಹಾರದಲ್ಲಿ ನಡೆಯಲಿರುವ ಹಾಸ್ಯ ಕಲಾವಿದ ಕುನಾಲ್ ಕಾಮ್ರಾ ಅವರ ಕಾರ್ಯಕ್ರಮವನ್ನು ರದ್ದುಗೊಳಿಸುವಂತೆ ಆಗ್ರಹಿಸಿ ಹಿಂದೂ ರಾಷ್ಟ್ರ ಸಮನ್ವಯ ಸಮಿತಿ ವತಿಯಿಂದ ವೈಟ್‌ಫೀಲ್ಡ್ ಪೊಲೀಸ್ ಠಾಣೆಗೆ ಮನವಿ ಸಲ್ಲಿಸಲಾಯಿತು.

ಕುನಾಲ್ ಕಾಮ್ರಾ ಅವರ ಹಿಂದಿನ ಕಾಮಿಡಿ ಕಾರ್ಯಕ್ರಮಗಳು ಹಾಗೂ ಸಾಮಾಜಿಕ ಜಾಲತಾಣಗಳಲ್ಲಿನ ಕೆಲವು ಹೇಳಿಕೆಗಳು ದೇಶದ ವಿವಿಧ ಭಾಗಗಳಲ್ಲಿ ವಿವಾದಕ್ಕೆ ಕಾರಣವಾಗಿವೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಅವರ ವಿರುದ್ಧ ವಿವಿಧ ಸಂದರ್ಭಗಳಲ್ಲಿ ದೂರುಗಳು, ಕಾನೂನು ನೋಟಿಸ್‌ಗಳು ಹಾಗೂ ನ್ಯಾಯಾಂಗ ಪ್ರಕ್ರಿಯೆಗಳು ನಡೆದಿರುವುದನ್ನೂ ಪ್ರಸ್ತಾಪಿಸಲಾಗಿದೆ.

ಇತ್ತೀಚೆಗೆ ದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಶ್ರೀರಾಮ ಮತ್ತು ಸೀತಾಮಾತೆಯ ಕುರಿತು ಅವಹೇಳನಕಾರಿ ಹೇಳಿಕೆ ನೀಡಿರುವ ಆರೋಪದ ಹಿನ್ನೆಲೆಯಲ್ಲಿ ದೂರು ದಾಖಲಾಗಿರುವುದನ್ನು ಉಲ್ಲೇಖಿಸಿ, ಕಾರ್ಯಕ್ರಮದಿಂದ ಸಾರ್ವಜನಿಕ ಶಾಂತಿ, ಕಾನೂನು ಸುವ್ಯವಸ್ಥೆ ಹಾಗೂ ಧಾರ್ಮಿಕ ಸಾಮರಸ್ಯಕ್ಕೆ ಧಕ್ಕೆಯಾಗುವ ಸಾಧ್ಯತೆ ಇರುವುದರಿಂದ ಅನುಮತಿಯನ್ನು ಮರುಪರಿಶೀಲಿಸಿ ರದ್ದುಗೊಳಿಸುವಂತೆ ಆಗ್ರಹಿಸಲಾಗಿದೆ.

ಮನವಿಯಲ್ಲಿ, ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸಾರ್ವಜನಿಕರ ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಸಾಧ್ಯತೆ ಇರುವುದರಿಂದ ಮುನ್ನೆಚ್ಚರಿಕಾ ಕ್ರಮವಾಗಿ ಭದ್ರತೆಯನ್ನು ಬಿಗಿಗೊಳಿಸಬೇಕು ಹಾಗೂ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ. ಸಾರ್ವಜನಿಕ ಶಾಂತಿ ಕಾಪಾಡುವುದು ಪೊಲೀಸ್ ಇಲಾಖೆಯ ಆದ್ಯ ಕರ್ತವ್ಯ ಎಂದು ಸಂಘಟನೆಗಳು ತಿಳಿಸಿವೆ.

ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ಮನವಿಗೆ ವಿವಿಧ ಹಿಂದೂ ಸಂಘಟನೆಗಳ ಪ್ರತಿನಿಧಿಗಳು ಬೆಂಬಲ ವ್ಯಕ್ತಪಡಿಸಿದರು. ಕಾರ್ಯಕ್ರಮದ ಅನುಮತಿ ನೀಡುವ ಮೊದಲು ಎಲ್ಲ ಕಾನೂನು ಮತ್ತು ಭದ್ರತಾ ಅಂಶಗಳನ್ನು ಸಮಗ್ರವಾಗಿ ಪರಿಶೀಲಿಸುವಂತೆ ಅವರು ಪೊಲೀಸ್ ಇಲಾಖೆಯನ್ನು ಒತ್ತಾಯಿಸಿದರು.

ಮನವಿಯನ್ನು ಸ್ವೀಕರಿಸಿದ ವೈಟ್‌ಫೀಲ್ಡ್ ಪೊಲೀಸ್ ಅಧಿಕಾರಿಗಳು, ಸಲ್ಲಿಕೆಯಾದ ಅಹವಾಲು ಮತ್ತು ಲಭ್ಯವಿರುವ ಮಾಹಿತಿಯನ್ನು ಪರಿಶೀಲಿಸಿ, ಅನ್ವಯಿಸುವ ಕಾನೂನು ಹಾಗೂ ಭದ್ರತಾ ನಿಯಮಾವಳಿಗಳ ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಜೊತೆಗೆ, ಕಾರ್ಯಕ್ರಮಕ್ಕೆ ಸಂಬಂಧಿಸಿದ ಅನುಮತಿಗಳು ಹಾಗೂ ಭದ್ರತಾ ವ್ಯವಸ್ಥೆಯನ್ನು ಪರಿಶೀಲಿಸಿ, ಯಾವುದೇ ಕಾನೂನು ಉಲ್ಲಂಘನೆ ಕಂಡುಬಂದರೆ ಸೂಕ್ತ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಮನವಿ ಮಾಡಲಾಗಿದೆ.

# ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ಗೆ ಶಾಕ್: ನಿರಾಣಿ

● ವಿಕ್ರಮ ವಾಹಿನಿ | ಗದಗ

ರಾಜ್ಯ ಸಚಿವ ಸಂಪುಟ ವಿಸ್ತರಣೆ ಬಳಿಕ ಕಾಂಗ್ರೆಸ್‌ನಲ್ಲಿ ಭಿನ್ನಮತ ಮತ್ತಷ್ಟು ತೀವ್ರಗೊಂಡು, ಅಸಮಾಧಾನಗೊಂಡ ಶಾಸಕರ ಒಂದು ದೊಡ್ಡ ತಂಡ ಬಿಜೆಪಿ ಸೇರಲಿದೆ ಎಂದು ಮಾಜಿ ಸಚಿವ ಮುರುಗೇಶ್ ನಿರಾಣಿ ಹೇಳಿದ್ದಾರೆ.



ಗದಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಂಪುಟ ವಿಸ್ತರಣೆ ಹಾಗೂ ಖಾತೆ ಹಂಚಿಕೆ ಬಳಿಕ ಕಾಂಗ್ರೆಸ್‌ನಲ್ಲಿ ಅಸಮಾಧಾನ ಸ್ಫೋಟಗೊಳ್ಳಲಿದೆ. ಕಾಂಗ್ರೆಸ್‌ನ ಹಲವು ನಾಯಕರು ಈಗಾಗಲೇ ಬಿಜೆಪಿಯ ಸಂಪರ್ಕದಲ್ಲಿದ್ದು, ಮುಂದಿನ ದಿನಗಳಲ್ಲಿ ರಾಜಕೀಯ ಬೆಳವಣಿಗೆಗಳು ವೇಗ ಪಡೆಯಲಿವೆ ಎಂದು ಹೇಳಿದರು.

ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಕೆ.ಎಸ್. ಈಶ್ವರಪ್ಪ ಅವರು ಬಿಜೆಪಿಗೆ ಮರಳಿದರೆ ಪಕ್ಷ ಇನ್ನಷ್ಟು ಬಲಿಷ್ಠವಾಗಲಿದೆ ಎಂಬುದು ತಮ್ಮ ವೈಯಕ್ತಿಕ ಅಭಿಪ್ರಾಯ ಎಂದು ನಿರಾಣಿ ತಿಳಿಸಿದರು. ಪಕ್ಷ ತೊರೆದ ನಾಯಕರನ್ನು ಮರಳಿ ಕರೆತರುವ ಬಗ್ಗೆ ಗಂಭೀರವಾಗಿ ಚಿಂತನೆ ನಡೆಸಬೇಕು ಎಂದರು.

ರಾಜ್ಯದಲ್ಲಿ ಸಚಿವ ಸಂಪುಟ ವಿಸ್ತರಣೆ ಕುರಿತ ರಾಜಕೀಯ ಚರ್ಚೆಗಳು ತೀವ್ರಗೊಂಡಿರುವ ಸಂದರ್ಭದಲ್ಲಿ ನಿರಾಣಿ ಅವರ ಈ ಹೇಳಿಕೆ ಹೊಸ ರಾಜಕೀಯ ಚರ್ಚೆಗೆ ಕಾರಣವಾಗಿದೆ. ಸಚಿವ ಸ್ಥಾನ ಸಿಗದ ಶಾಸಕರ ಅಸಮಾಧಾನ ಮುಂದಿನ ದಿನಗಳಲ್ಲಿ ಬಹಿರಂಗವಾಗುವ ಸಾಧ್ಯತೆ ಇದೆ ಎಂದು ಅವರು ಅಭಿಪ್ರಾಯಪಟ್ಟರು.

ಬಿಜೆಪಿ ಸಂಘಟನೆ ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಪಕ್ಷ ತೊರೆದ ಹಿರಿಯ ನಾಯಕರನ್ನು ಮರಳಿ ಸೇರ್ಪಡೆಗೊಳಿಸುವ ಪ್ರಯತ್ನಗಳು ನಡೆಯಬೇಕು ಎಂದು ನಿರಾಣಿ ಹೇಳಿದರು. ಮುಂಬರುವ ರಾಜಕೀಯ ಬೆಳವಣಿಗೆಗಳು ರಾಜ್ಯ ರಾಜಕೀಯದಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗಬಹುದು ಎಂದೂ ಅವರು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿ ಹಾಗೂ ರೈತರ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು ಎಂದು ನಿರಾಣಿ ಒತ್ತಾಯಿಸಿದರು. ಬೆಳೆ ಹಾನಿ, ನೀರಿನ ಅಭಾವ ಮತ್ತು ಆರ್ಥಿಕ ಸಂಕಷ್ಟದಿಂದ ರೈತರು ತೊಂದರೆ ಅನುಭವಿಸುತ್ತಿದ್ದು, ಅವರಿಗೆ ತಕ್ಷಣದ ಪರಿಹಾರ ಹಾಗೂ ಅಗತ್ಯ ನೆರವು ನೀಡುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು ಎಂದು ಹೇಳಿದರು.

ರೈತರ ಸಂಕಷ್ಟದ ಕುರಿತು ಮಾತನಾಡಿದ ಅವರು, ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಪರಿಸ್ಥಿತಿ ನಿರ್ಮಾಣವಾಗಿದ್ದು, ಕಾಂಗ್ರೆಸ್ ಸರ್ಕಾರ ರೈತರ ಸಾಲ ಮನ್ನಾ ಮಾಡಬೇಕು ಎಂದು ಆಗ್ರಹಿಸಿದರು. ವಿರೋಧ ಪಕ್ಷದಲ್ಲಿದ್ದಾಗ ರೈತರ ಪರವಾಗಿ ಧ್ವನಿ ಎತ್ತಿದ್ದ ಕಾಂಗ್ರೆಸ್ ನಾಯಕರು ಈಗ ಅಧಿಕಾರದಲ್ಲಿರುವುದರಿಂದ ರೈತರ ನೆರವಿಗೆ ಮುಂದಾಗಬೇಕು ಎಂದು ಒತ್ತಾಯಿಸಿದರು.

# ಶಿಸ್ತಿನ ಜೀವನವೇ ಆರೋಗ್ಯ ಮತ್ತು ಆಧ್ಯಾತ್ಮಿಕ ಪ್ರಗತಿಗೆ ದಾರಿ: ರಾಮಚಂದ್ರಾಪುರ ಶ್ರೀ

● ವಿಕ್ರಮ ವಾಹಿನಿ | ಗೋಕರ್ಣ

ಮನುಷ್ಯನ ದೇಹವನ್ನು ಸುಸ್ಥಿತಿಯಲ್ಲಿಡಲು ಆಹಾರ, ನಿದ್ರೆ ಮತ್ತು ಬ್ರಹ್ಮಚರ್ಯ ಎಂಬ ಮೂರು ಅಂಶಗಳು ಪ್ರಮುಖವಾಗಿವೆ. ಈ ಮೂರು ಸಮರ್ಪಕವಾಗಿದ್ದಾಗ ಶರೀರ ಸ್ವಸ್ಥವಾಗಿರಲು ಸಾಧ್ಯ ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 01.08.2026 ರಂದು ಪ್ರವಚನ ಅನುಗ್ರಹಿಸಿದ ಶ್ರೀಗಳು, ಆಹಾರ, ನಿದ್ರೆ ಮತ್ತು ಬ್ರಹ್ಮಚರ್ಯ ಎಂಬ ಮೂರು ಆಧಾರ ಸ್ತಂಭಗಳನ್ನು ಸಮತೋಲನದಲ್ಲಿ ಕಾಪಾಡಿಕೊಂಡರೆ ದೇಹವೂ ಆರೋಗ್ಯಕರವಾಗಿರುತ್ತದೆ, ಮನಸ್ಸು ಶಾಂತವಾಗಿರುತ್ತದೆ ಹಾಗೂ ಆಧ್ಯಾತ್ಮಿಕ ಪ್ರಗತಿಯೂ ಸಾಧ್ಯವಾಗುತ್ತದೆ. ಇವುಗಳಲ್ಲಿ ವ್ಯತ್ಯಯ ಉಂಟಾದರೆ ಅನೇಕ ದೈಹಿಕ ಹಾಗೂ ಮಾನಸಿಕ ಸಮಸ್ಯೆಗಳು



ಆರಂಭವಾಗುತ್ತವೆ. ಇದರ ಜೊತೆಗೆ, ದೇಹವನ್ನು ನಿಲ್ಲಿಸುವ ಪ್ರಧಾನ ಸ್ತಂಭ 'ಕರ್ಮ'ವಾಗಿದೆ. ಕರ್ಮವೇ ಜೀವಿತಾವಧಿಯನ್ನು ನಿರ್ಧರಿಸುತ್ತದೆಯಾದರೂ, ಆಹಾರ, ನಿದ್ರೆ ಮತ್ತು ಬ್ರಹ್ಮಚರ್ಯ ಸರಿಯಾಗಿರದಿದ್ದರೆ ಆರೋಗ್ಯ ಹದಗೆಡುವುದು ಅನಿವಾರ್ಯ ಎಂದು ವಿವರಿಸಿದರು.

ಪ್ರತಿಯೊಂದು ಜೀವಿಯೂ ಸೇವಿಸುವ ಅನ್ನವು ಅನ್ನಪೂರ್ಣೇಶ್ವರಿಯ ಕೃಪೆಯ ಫಲವೇ ಆಗಿದ್ದು, ಕೋಟ್ಯಂತರ ಜೀವಿಗಳಿಗೆ ನಿರಂತರವಾಗಿ ಅನ್ನದ ಭಿಕ್ಷೆಯನ್ನು ನೀಡುತ್ತಿರುವ ಶಕ್ತಿ ದೇವಿಯದ್ದು. ಮಾನವ ದೇಹವು ಅನ್ನದಿಂದಲೇ ರೂಪುಗೊಳ್ಳುತ್ತದೆ. ತಂದೆ-ತಾಯಿ ಸೇವಿಸುವ ಆಹಾರದಿಂದಲೇ ಶಿಶುವಿನ ಜನನವಾಗುತ್ತದೆ. ಆಯುರ್ವೇದದಲ್ಲಿ ನಿದ್ರೆಯನ್ನು 'ಭೂತಧಾತ್ರಿ' ಎಂದು ಕರೆಯಲಾಗುತ್ತದೆ. ಅಂದರೆ ಎಲ್ಲಾ ಜೀವಿಗಳನ್ನು ಪೋಷಿಸುವ ತಾಯಿ ಎಂದರ್ಥ. ಸರಿಯಾದ ಸಮಯದಲ್ಲಿ ಬರುವ ನಿದ್ರೆ ದೇಹವನ್ನು ದುರಸ್ತಿ ಮಾಡಿ ಆರೋಗ್ಯವನ್ನು ವೃದ್ಧಿಸುತ್ತದೆ. ಸಮಯಕ್ಕೆ ನಿದ್ರೆ ಮಾಡದೆ, ರಾತ್ರಿ ತಡವಾಗಿ ಮಲಗುವುದು ಹಾಗೂ ಹಗಲಿನಲ್ಲಿ ನಿದ್ರೆ ಮಾಡುವ ಅಭ್ಯಾಸ ಆರೋಗ್ಯಕ್ಕೆ ಹಾನಿಕಾರಕ.

ಸರಿಯಲ್ಲದ ಸಮಯದಲ್ಲಿ ಮಾಡುವ ನಿದ್ರೆಯನ್ನು ಆಯುರ್ವೇದದಲ್ಲಿ 'ಕಾಲರಾತ್ರಿ'ಗೆ ಹೋಲಿಸಲಾಗಿದೆ. ಇಂತಹ ಜೀವನಶೈಲಿ ದೇಹದ ವಾತ, ಪಿತ್ತ ಮತ್ತು ಕಫ ಸಮತೋಲನವನ್ನು ಹಾಳುಮಾಡಿ, ಜೀರ್ಣಕ್ರಿಯೆ ಹಾಗೂ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಅನ್ನವನ್ನು ದೇವರ ಪ್ರಸಾದವೆಂದು ಗೌರವಿಸುವುದು, ಸಮಯಕ್ಕೆ ಸರಿಯಾಗಿ ಊಟ ಮಾಡುವುದು, ಶಾಂತ ಮನಸ್ಸಿನಿಂದ ಆಹಾರ ಸೇವಿಸುವುದು, ನಿಯಮಿತ ನಿದ್ರೆ ಹಾಗೂ ಶಿಸ್ತಿನ ಜೀವನಶೈಲಿಯೇ ಆರೋಗ್ಯಕರ ಬದುಕಿನ ನಿಜವಾದ ರಹಸ್ಯ ಎಂದು ಅಭಿಪ್ರಾಯಪಟ್ಟರು.

ಶ್ರೀಕ್ಷೇತ್ರ ಹೊರನಾಡಿನ ಧರ್ಮದರ್ಶಿಗಳಾದ ಜಿ. ಭೀಮೇಶ್ವರ ಜೋಶಿ ದಂಪತಿಗಳು ಶ್ರೀಗುರುಭಿಕ್ಷಾ ಸೇವೆ ಸಮರ್ಪಿಸಿ, ಅನ್ನಪೂರ್ಣೇಶ್ವರಿಯ ಪ್ರಸಾದ ರೂಪದಲ್ಲಿ ಅನ್ನಬ್ರಹ್ಮ ಚಾತುರ್ಮಾಸ್ಯಕ್ಕೆ ಸುವಸ್ತುಗಳನ್ನು ಸಮರ್ಪಿಸಿದರು. ಹೊರನಾಡಿನ ಧರ್ಮದರ್ಶಿಗಳ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

ಶ್ರೀಗಳ ವರ್ಧಂತಿಯ ಅಂಗವಾಗಿ ಅರುಣ ಮಂತ್ರ ಪೂರ್ವಕ ಗುರು ~ ಅರುಣ ನಮಸ್ಕಾರ ವಿಶೇಷವಾಗಿ ನೆರವೇರಿತು. ಅರುಣಪ್ರಶ್ನ ಪಾರಾಯಣ, ಅರುಣ ಹವನ, ಆಯುಷ್ಕಾಮೇಷ್ಠಿ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಶ್ರೀಮಾತೆ ಶ್ರೀಮತಿ ವಿಜಯಲಕ್ಷ್ಮೀ ಭಟ್ ಅವರಿಗೆ ಮಾತೆಯರು ಭಾಗಿನ ಸಮರ್ಪಿಸಿ, ಗೌರವಸಲ್ಲಿಸಿದರು.ಶ್ರೀಮಠದ ಧರ್ಮಕರ್ಮ ಖಂಡದ ಸಮರ್ಥ ಭಟ್ಟ ಮಂಕಳಲೆ, ವಿನಾಯಕ ಬೆಟ್ಟೂರು, ಕೇಶವಕಿರಣ, ಡಾ। ರಾಮಕೃಷ್ಣ ಭಟ್ ಕೂಟೇಲು, ಮಾತೃತ್ವಂನ ಪ್ರಮುಖರಾದ ಈಶ್ವರೀ ಬೇರ್ಕಡವು, ಸ್ವಾತಿ ಭಾಗ್ವತ್, ಗೀತಾ ಯಾಜಿ, ದಿನ ಪ್ರಧಾನರಾದ ಕೃಷ್ಣಾನಂದ ಭಟ್ ದಂಪತಿಗಳು ಉಪಸ್ಥಿತರಿದ್ದರು.

Vikrama Vahini Kannada Daily, #204, Forest Layout, Jnanabharathi, Bangalore-560095
vikramavahini@gmail.com
93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 129,